ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ


ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 149
25–11–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 149

## ಆಸ್ಪತ್ರೆಗೆ ದಾಖಲಾಗಿರುವ ಶಾಮನೂರು ಶಿವಶಂಕರಪ್ಪ ಆರೋಗ್ಯದ ಬಗ್ಗೆ ಮಾಹಿತಿ ಹಂಚಿಕೊಂಡ ಪುತ್ರ ಎಸ್ಸೆಸ್ಸೆಂ



**ಬೆಂಗಳೂರು (ನವೆಂಬರ್ 24):** ದಾವಣಗೆರೆ ದಕ್ಷಿಣ ನಿಯೋಜಿತ ಕ್ಷೇತ್ರದ ಕಾಂಗ್ರೆಸ್ ಶಾಸಕ ಹಾಗೂ ಅಖಿಲ ಭಾರತ ವೀರಶೈವ ಮಹಾ ಸಭೆಯ ರಾಷ್ಟ್ರೀಯ ಅಧ್ಯಕ್ಷರಾದ ಶಾಮನೂರು ಶಿವಶಂಕರಪ್ಪ (94) ಆರೋಗ್ಯದಲ್ಲಿ ಏರುಪೇರಾಗಿದೆ. ವಯೋಸಹಜ ಸಮಸ್ಯೆಗಳಿಂದ ಬಳಲುತ್ತಿರುವ ಶಾಮನೂರು ಶಿವಶಂಕರಪ್ಪ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇನ್ನು ಈ ಬಗ್ಗೆ ಅವರ ಪುತ್ರ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರು ದಾವಣಗೆರೆಯಲ್ಲಿಂದು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದು, ಕ್ಷೇತ್ರದ ಜನ ಹಾಗೂ ದೇವರ ಆರ್ಶಿವಾದದಿಂದ ಶಾಮನೂರು ಶಿವಶಂಕರಪ್ಪ ಆರೋಗ್ಯದಲ್ಲಿ ಚೇತರಿಕೆ ಕಂಡಿದ್ದು, ಅಭಿಮಾನಿಗಳು ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಇನ್ನೊಂದು ವಾರದಲ್ಲಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಲಿದ್ದು, ದಾವಣಗೆರೆಗೆ ಕರೆದು–ಕೊಂಡು ಬರಲಾಗುವುದು ಎಂದು ಮಾಹಿತಿ ನೀಡಿದರು.

## ವಂದೇ ಭಾರತ್ ರೈಲಿಗೆ ಸಿಲುಕಿ ಇಬ್ಬರು ವಿದ್ಯಾರ್ಥಿಗಳ ಸಾವು

**ಬೆಂಗಳೂರು:** ವಂದೇ ಭಾರತ್ ರೈಲಿಗೆ ಸಿಲುಕಿ ಖಾಸಗಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಮೃತಪಟ್ಟಿರುವುದು ನಗರ ಹೊರವಲಯದ ಚಿಕ್ಕಬಾಣಾವರ ರೈಲ್ವೆ ನಿಲ್ದಾಣದಲ್ಲಿ ನಡೆದಿದೆ.

ಕೇರಳ ಮೂಲದ ಸ್ಟೇರ್ಲಿನ್ ಎಲ್ಲಾ ಶಾಜಿ (19) ಹಾಗೂ ಜಸ್ಟಿನ್ ಜೋಸೆಫ್ (20) ಮೃತ ದುರ್ದೈವಿಗಳು. ಬೆಂಗಳೂರಿನಿಂದ ಬೆಳಗಾವಿಗೆ ತೆರಳುತ್ತಿದ್ದ ವಂದೇ ಭಾರತ್ ರೈಲಿಗೆ ಸಿಲುಕಿ ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ.

ಹೆಸರಘಟ್ಟ ರಸ್ತೆಯ ಸಪ್ತಗಿರಿ ನರ್ಸಿಂಗ್ ಕಾಲೇಜಿನಲ್ಲಿ ಮೊದಲ ವರ್ಷದ ಬಿಎಸ್ಸಿ ವಿಭಾಗದಲ್ಲಿ ಇಬ್ಬರು ವ್ಯಾಸಂಗ ಮಾಡುತ್ತಿದ್ದು, ಕಾಲೇಜು ಸಮೀಪದಲ್ಲೇ ಇಬ್ಬರು ವಾಸವಾಗಿದ್ದರು. ಈ ಘಟನೆಗೆ ನಿಖರವಾದ ಕಾರಣ ಗೊತ್ತಾಗಿಲ್ಲ.

ರೈಲಿಗೆ ಆಕಸ್ಮಿಕವಾಗಿ ಸಿಲುಕಿ ಮೃತಪಟ್ಟಿದ್ದಾರೆಯೇ ಅಥವಾ ಆತ್ಮಹತ್ಯೆಯೇ ಎಂಬುದರ ಬಗ್ಗೆ ತನಿಖೆ ನಡೆದಿದೆ. ರೈಲ್ವೆ ನಿಲ್ದಾಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಾಲಿವುಡ್‌ನ ಹೀ ಮ್ಯಾನ್ ನಟ ಧರ್ಮೇಂದ್ರ ನಿಧನ

**ಮುಂಬೈ:** ಬಾಲಿವುಡ್ ನ ಹಿರಿಯ ದಿಗ್ಗಜ ನಟ ಧರ್ಮೇಂದ್ರ ನಿಧನರಾಗಿದ್ದಾರೆ. ಅವರಿಗೆ 89 ವರ್ಷ ವಯಸ್ಸಾಗಿತ್ತು. ಬಾಲಿವುಡ್ ನ 'ಹೀಮ್ಯಾನ್' ಎಂದೇ ಹೆಸರುವಾಸಿಯಾಗಿದ್ದ ಧರ್ಮೇಂದ್ರ ಸುಮಾರು ಆರು ದಶಕಗಳಿಗೂ ಹೆಚ್ಚು ಕಾಲ ಚಿತ್ರರಂಗವನ್ನು ಆಳಿದ್ದರು.



ಈ ತಿಂಗಳ ಆರಂಭದಲ್ಲಿ ತೀವ್ರ ಅನಾರೋಗ್ಯದಿಂದಾಗಿ ಮುಂಬೈನ ಬ್ರೀಚ್ ಕ್ಯಾಂಡಿ ಆಸ್ಪತ್ರೆಗೆ ಸೇರಿಸಲಾಗಿತ್ತು. ನಂತರ ಡಿಸ್ಚಾರ್ಜ್ ಆಗಿ ಮನೆಯಲ್ಲಿಯೇ ಚಿಕಿತ್ಸೆ ನೀಡಲಾಗುತಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಇಂದು ಅವರು ಕೊನೆಯುಸಿರೆಳೆದಿದ್ದಾರೆ ಎಂದು ಮೂಲಗಳು ಹೇಳಿವೆ.

ಧರ್ಮೇಂದ್ರ ಅವರ ಪಾರ್ಥಿವ ಶರೀರವನ್ನು ಸ್ಮಶಾನಕ್ಕೆ ಕರೆದೊಯ್ಯಲಾಗಿದ್ದು, ಮಗಳು ಇಶಾ ಡಿಯೋಲ್ ಸೇರಿದಂತೆ ಅನೇಕ ಕುಟುಂಬಸ್ಥರು, ಸ್ನೇಹಿತರು, ಚಿತ್ರರಂಗದ ಗಣ್ಯರು ಆಗಮಿಸುತ್ತಿದ್ದಾರೆ.

ಬಾಲಿವುಡ್ ಹಿರಿಯ ನಟರಾದ ಅಮಿತಾಬ್ ಬಚ್ಚನ್, ಅಮೀರ್ ಖಾನ್ ಸೇರಿದಂತೆ ಚಿತ್ರರಂಗದ ಹಲವು ಗಣ್ಯರು ಸ್ಮಶಾನಕ್ಕೆ ಆಗಮಿಸಿದ್ದಾರೆ.

1960 ರಲ್ಲಿ 'ದಿಲ್ ಭಿ ತೇರಾ ಹಮ್ ಭಿ ತೇರೆ' ಚಿತ್ರದ ಮೂಲಕ ಪಾದಾರ್ಪಣೆ ಮಾಡಿದ ಧರ್ಮೇಂದ್ರ, 1960 ರ ದಶಕದಲ್ಲಿ ಅನ್ಪದ್, ಬಂದಿನಿ, ಅನುಪಮಾ ಮತ್ತು ಆಯಾ ಸಾವನ್ ಝೂಮ್ ಕೆ ಮುಂತಾದ ಚಿತ್ರಗಳಲ್ಲಿ ಸಾಮಾನ್ಯ ಪಾತ್ರಗಳ ಮೂಲಕ ಮೂಲಕ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು. ನಂತರ ಅವರು ಶೋಲೆ, ಧರಮ್ ವೀರ್, ಚುಪ್ಕೆ ಚುಪ್ಕೆ, ಮೇರಾ ಗಾಂವ್ ಮೇರಾ ದೇಶ್ ಮತ್ತು ಡ್ರೀಮ್ ಗರ್ಲ್ ಚಿತ್ರಗಳಲ್ಲಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳುವ ಮೂಲಕ ಖ್ಯಾತಿಗಳಿಸಿದರು.

# ಯಾವುದೇ ಬದಲಾವಣೆ ಸಂಬಂಧ ಹೈಕಮಾಂಡ್ ನಿರ್ಧಾರವನ್ನು ನಾನು, ಡಿ.ಕೆ.ಶಿವಕುಮಾರ್ ಒಪ್ಪಬೇಕು: ಸಿಎಂ ಸಿದ್ದರಾಮಯ್ಯ

**ಚಿಕ್ಕಬಳ್ಳಾಪುರ:** ಸರ್ಕಾರದಲ್ಲಿ ಯಾವುದೇ ಬದಲಾವಣೆ ಮಾಡುವ ಸಂಬಂಧ ನಮ್ಮಲ್ಲಿ ಪಕ್ಷದ ವರಿಷ್ಠರ ತೀರ್ಮಾನಕ್ಕೆ ನಾನು ಹಾಗೂ ಡಿ.ಕೆ.ಶಿವಕುಮಾರ್ ಬದ್ಧರಾಗಬೇಕು. ಹೈಕಮಾಂಡ್ ಅನ್ನು ಐದು ತಿಂಗಳ ಹಿಂದೆ ಭೇಟಿಯಾದಾಗ, ಸಚಿವ ಸಂಪುಟ ಪುನರ್ ರಚನೆ ಮಾಡಲು ಸೂಚನೆ ನೀಡಿದ್ದರು. ನಾನು ಎರಡೂವರೆ ವರ್ಷ ತುಂಬಿದ ನಂತರ ಮಾಡೋಣ ಎಂದು ತಿಳಿಸಿದ್ದೆ. ಈಗ ಏನು ಸೂಚನೆ ನೀಡುತ್ತಾರೋ ಅದರಂತೆ ನಡೆಯುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ರಾಜ್ಯದಲ್ಲಿ ಅಧಿಕಾರ ಹಂಚಿಕೆ ಕುರಿತ ಚರ್ಚೆಗೆ ಸಂಬಂಧಿಸಿ ಮಾಧ್ಯಮಗಳ ಪ್ರಶ್ನೆಗೆ ಶಿಡ್ಲಘಟ್ಟದಲ್ಲಿ ಮುಖ್ಯಮಂತ್ರಿಗಳು ಉತ್ತರಿಸಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ಒಂದು ಲಕ್ಷ ಕೋಟಿ ರೂಗಳಿಗೂ ಹೆಚ್ಚು ಹಣವನ್ನು ವೆಚ್ಚ ಮಾಡಲಾಗಿದೆ. ನಾವು ನುಡಿದಂತೆ ನಡೆದ ಸರ್ಕಾರ ಎಂದು ಹೇಳಿದ್ದೆವು. ಅದರಂತೆ ನಡೆದಿದ್ದೇವೆ ಎಂದು ಹೇಳಿದರು.



ಬಿಜೆಪಿಯವರು ಸರ್ಕಾರದ ಬಳಿ ಹಣವಿಲ್ಲ ಎನ್ನುತ್ತಾರೆ. 2000 ಕೋಟಿ ವೆಚ್ಚದ ಅಭಿವೃದ್ಧಿ ಕೆಲಸಗಳನ್ನು ಹಣವಿಲ್ಲದೆ ಮಾಡಲು ಸಾಧ್ಯವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆ ಸೇರಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅಭಿವೃದ್ಧಿ ಕೆಲಸಗಳಿಗೆ ವೆಚ್ಚ ಮಾಡಲಾಗುತ್ತಿದೆ. ಚಿಕ್ಕಬಳ್ಳಾಪುರದಲ್ಲಿ ಇಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಮಾಡುತ್ತಿದ್ದೇವೆ. ಬಿಜೆಪಿಯವರು ಅಪಪ್ರಚಾರ ಮಾಡುತ್ತಿದ್ದಾರೆ. ಸುಳ್ಳು ಬಿಟ್ಟರೆ ಬೇರೇನೂ ಹೇಳಲು ಬರುವುದಿಲ್ಲ. ಸುಳ್ಳೇ ಅವರ ಮನೆ ದೇವರು ಟೀಕಿಸಿದರು.

**ಖರ್ಗೆ ಬಳಿಕ ಸಿಎಂ ಹೇಳಿದ್ದೇನು?**

ಬೆಂಗಳೂರು: ರಾಜ್ಯದಲ್ಲಿ ಸಿಎಂ ಕುರ್ಚಿಗಾಗಿ ಭಾರೀ ಕಸರತ್ತು ನಡೆಯುತ್ತಿರುವಾಗಲೇ ಸಿಎಂ ಸಿದ್ದರಾಮಯ್ಯ ಡಿಸಿಎಂ ಡಿಕೆ ಶಿವಕುಮಾರ್ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಶನಿವಾರ ಭೇಟಿಯಾಗಿದ್ದರು. ಖರ್ಗೆ ನಿವಾಸದಿಂದ ಹೊರಬಂದ ಬಳಿಕ ಮಾಧ್ಯಮಗಳ ಜತೆ ಮಾತನಾಡಿದ್ದ ಸಿಎಂ ಸಿದ್ದರಾಮಯ್ಯ, ಹೈಕಮಾಂಡ್ ನಿರ್ಧಾರವನ್ನು ನಾನೂ ಒಪ್ಪಬೇಕು ಹಾಗೂ ಡಿಕೆ ಶಿವಕುಮಾರ್ ಇಬ್ಬರೂ ಒಪ್ಪಿಕೊಳ್ಳಬೇಕು ಎಂದು ಹೇಳಿದ್ದರು.

ಇದು ಕೇವಲ ಸೌಹಾರ್ದಯುತ ಭೇಟಿ ಅಷ್ಟೇ ನಾಯಕತ್ವ ಬದಲಾವಣೆ ಬರೀ ಊಹಾಪೋಹ. ಮಲ್ಲಿಕಾರ್ಜುನ ಖರ್ಗೆಯವರ ಜೊತೆ ಪಕ್ಷ ಸಂಘಟನೆ ಬಗ್ಗೆ ಮಾತಾಡಿದೆ. ಮುಂದಿನ ಚುನಾವಣೆ ತಯಾರಿ ಬಗ್ಗೆ ಚರ್ಚೆಯೂ ನಡೆಯಿತು ಎಂದು ಸಿಎಂ ಹೇಳಿದ್ದಾರೆ.

ಇನ್ನು ಖರ್ಗೆ ಅವರ ಬಳಿ ಡಿ.ಕೆ. ಶಿ ಅವರ ಬೆಂಬಲಿತ ಶಾಸಕರು ನಾಯಕತ್ವ ಬದಲಾವಣೆ ವಿಚಾರವನ್ನು ಬಹಿರಂಗವಾಗಿ ಚರ್ಚಿಸುತ್ತಿರುವುದು ಹಾಗೂ ದೆಹಲಿಗೆ ತೆರಳುತ್ತಿರುವುದನ್ನು ಪ್ರಸ್ತಾಪಿಸಿದ ಬಗ್ಗೆ ಸಿದ್ದರಾಮಯ್ಯ ಅವರು ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ರಾಜ್ಯ ಸರ್ಕಾರ ಈಗಾಗಲೇ ಎರಡೂವರೆ ವರ್ಷ ಪೂರ್ಣಗೊಳಿಸಿದ್ದು, ಸಂಪುಟ ಪುನರ್ ರಚನೆಗೆ ಸಿಎಂ ಬೇಡಿಕೆ ಇಟ್ಟಿದ್ದಾ–ರೆ ಎನ್ನಲಾಗಿದೆ. ಹಿರಿಯ ಶಾಸಕರು, ಹೆಚ್ಚು ಬಾರಿ ಶಾಸಕರಾಗಿ ಆಯ್ಕೆಯಾಗಿರುವವರು ಸೇರಿದಂತೆ ಪಕ್ಷಕ್ಕಾಗಿ ದುಡಿದವರಿಗೆ ಅಧಿಕಾರ ಕೊಡಬೇಕು ಎಂದು ಸಿಎಂ ಹೇಳಿದ್ದಾರೆ. ಸದ್ಯ ವಿದೇಶ ಪ್ರವಾಸದಲ್ಲಿರುವ ರಾಹುಲ್ ಗಾಂಧಿ ಭಾರತಕ್ಕೆ ಮರಳಿದ ಬಳಿಕ ಸಿಎಂ ಹಾಗೂ ಡಿಸಿಎಂ ಜೊತೆ ಪ್ರತ್ಯೇಕ ಚರ್ಚೆ ನಡೆಸುವ ಸಾಧ್ಯತೆ ಇದೆ ಎನ್ನಲಾಗಿದೆ.

# ನ.28ರಂದು ಉಡುಪಿಗೆ ಪ್ರಧಾನಿ ನರೇಂದ್ರ ಮೋದಿ ಭೇಟಿ: ರೋಡ್ ಶೋ ರದ್ದು

**ಉಡುಪಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನ.28ರಂದು ಉಡುಪಿ ಶ್ರೀಕೃಷ್ಣ ಮಠಕ್ಕೆ ಆಗಮಿಸುತ್ತಿದ್ದಾರೆ. ಅವರು ಶ್ರೀಕೃಷ್ಣದೇವರ ದರ್ಶನ ಪಡೆದು ನಂತರ ಐತಿಹಾಸಿಕ 'ಲಕ್ಷ ಕಂಠ ಗೀತ ಗಾಯನ' ಕಾರ್ಯಕ್ರಮದಲ್ಲಿ ಭಾಗವಹಿಸಿ, ಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಹಿನ್ನೆಲೆಯಲ್ಲಿ ಉಡುಪಿಯಲ್ಲಿ ಹೆಲಿಪ್ಯಾಡ್, ಕಾಂಕ್ರೀಟ್ ರಸ್ತೆ, ಭದ್ರತಾ ವ್ಯವಸ್ಥೆ ಸಹಿತ ಮೂಲ ಸೌಲಭ್ಯಗಳ ತಯಾರಿ ವೇಗವಾಗಿ ಸಾಗುತ್ತಿದೆ. ನವೆಂಬರ್ 28ರಂದು ದೆಹಲಿಯಿಂದ ನೇರವಾಗಿ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪ್ರಧಾನಿ ಮೋದಿ ಬೆಳಗ್ಗೆ 11:05 ಕ್ಕೆ ಬರಲಿದ್ದಾರೆ. ಅಲ್ಲಿಂದ ಬೆಳಿಗ್ಗೆ 11:10 ಕ್ಕೆ ಹೆಲಿಕಾಪ್ಟರ್ ಮೂಲಕ ಉಡುಪಿಗೆ ಪ್ರಯಾಣ ಬೆಳೆಸಲಿದ್ದಾರೆ.



ಈ ಹಿಂದೆ ಪ್ರಧಾನಿಯವರ ಸ್ವಾಗತಕ್ಕಾಗಿ ರೋಡ್ ಶೋ ನಡೆಸಲು ಯೋಜಿಸಲಾಗಿತ್ತು. ಆದರೆ, ಪರಿಷ್ಕೃತ ಪಟ್ಟಿಯಲ್ಲಿ ರೋಡ್ ಶೋ ರದ್ದುಗೊಳಿಸಲಾಗಿದೆ. ಹೆಲಿಪ್ಯಾಡ್‌ನಿಂದ ನೇರವಾಗಿ ಮಧ್ಯಾಹ್ನ 12 ಗಂಟೆಗೆ ಉಡುಪಿ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಲಿರುವ ಮೋದಿ, ಶ್ರೀಕೃಷ್ಣನ ದರ್ಶನ ಪಡೆಯಲಿದ್ದಾರೆ.

ತದನಂತರ ಐತಿಹಾಸಿಕ 'ಲಕ್ಷ ಕಂಠ ಗೀತ ಗಾಯನ' ಕಾರ್ಯಕ್ರಮದಲ್ಲಿ ಭಾಗವಹಿಸಿ, ಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ರಾಷ್ಟ್ರೀಯ ಹೆದ್ದಾರಿಯ 169(ಎ) ಆದಿ ಉಡುಪಿ ಕರಾವಳಿ ಬೈಪಾಸ್ ಮಧ್ಯೆ 400 ಮೀ. ಕಾಂಕ್ರೀಟ್ ಕಾಮಗಾರಿ ಭರದಿಂದ ಸಾಗುತ್ತಿದೆ. ಒಂದು ವಾರದ ಕ್ಯೂರಿಂಗ್ ನಡುವೆ ಬಲಬದಿ ರಸ್ತೆ ಪ್ರಧಾನಿ ವಾಹನ ಸಂಚಾರಕ್ಕೆ ಸೀಮಿತವಾಗಿ ತೆರವಾಗಲಿದೆ.

ಆದಿ ಉಡುಪಿಯ ಎಪಿಎಂಸಿ ಎದುರಿಗೆ ಈಗಾಗಲೇ ಇರುವ ಮೂರು ಹೆಲಿಪ್ಯಾಡ್‌ಗಳ ದುರಸ್ತಿ, ಸಂಪರ್ಕ ರಸ್ತೆ, ಮಾರ್ಕಿಂಗ್ ಪ್ರಗತಿಯಲ್ಲಿದೆ. ಪಕ್ಕದಲ್ಲೇ ನಾಲ್ಕನೇ ಹೆಲಿಪ್ಯಾಡ್ ನಿರ್ಮಾಣ ಲೋಕೋಪಯೋಗಿ ಇಲಾಖೆಯಿಂದ 67 ಲಕ್ಷ ರೂ. ವೆಚ್ಚದಲ್ಲಿ ನಡೆಯುತ್ತಿದೆ.

**ಉಡುಪಿ ನಂತರ ಗೋವಾಕ್ಕೆ ಭೇಟಿ**

ಉಡುಪಿಯ ಕಾರ್ಯಕ್ರಮ ಮುಗಿಸಿದ ಬಳಿಕ, ಮಧ್ಯಾಹ್ನ 1:35ಕ್ಕೆ ಆದಿ ಉಡುಪಿ ಹೆಲಿಪ್ಯಾಡ್‌ನಿಂದ ಹೊರಟು ಮಂಗಳೂರು ವಿಮಾನ ನಿಲ್ದಾಣಕ್ಕೆ ತೆರಳಲಿದ್ದಾರೆ.

ಅಲ್ಲಿಂದ ಮಧ್ಯಾಹ್ನ 2 ಗಂಟೆಗೆ ಗೋವಾಗೆ ಪ್ರಯಾಣ ಬೆಳೆಸಲಿದ್ದಾರೆ. ಪ್ರಧಾನಿಗಳ ಭೇಟಿಯ ಹಿನ್ನೆಲೆಯಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಲಾಗಿದೆ.

# ನ್ಯಾಯಾಲಯದ ಆದೇಶದಂತೆ ಶುಲ್ಕ ಪಡೆದು ನಿವೇಶನ ನೀಡಲಾಗಿದೆ: ದಿನೇಶ್ ಶೆಟ್ಟಿ

ದಾವಣಗೆರೆ.ನ.24: ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದಿಂದ ಮಹಾನಗರ ಪಾಲಿಕೆ ವ್ಯಾಪ್ತಿಯ ವಿವೇಕಾನಂದ ಬಡಾವಣೆಯಲ್ಲಿನ ಉದ್ಯಾನವನದ ನಿವೇಶನವನ್ನು ಖಾಸಗಿ ವ್ಯಕ್ತಿಗಳಿಗೆ ನೀಡಿದ್ದೇನೆ ಎಂಬ ಆರೋಪ ಸತ್ಯಕ್ಕೆ ದೂರವಾದದ್ದು ಎಂದು ದೂಡ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯ ಶಾಮನೂರು ಸರ್ವೇ ನಂಬರ್ 127/1 ಇದರಲ್ಲಿ ನಿರ್ಮಿಸಿರುವ ವಿವೇಕಾನಂದ ಬಡಾವಣೆಯಲ್ಲಿನ ಉದ್ಯಾನವನಕ್ಕೆ ಮೀಸಲಿಟ್ಟ ನಿವೇಶನವನ್ನು ಆದೇಶದನ್ವಯ ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿಯಮಾನುಸಾರ ಶುಲ್ಕ ಭರಿಸಿಕೊಂಡು ಉದ್ಯಾನವನ/ಬಫರ್ ಹಸ್ತಾಂತರಿಸಿಕೊಂಡು ಏಕನಿವೇಶನ ವಿನ್ಯಾಸ ಅನುಮೋದನೆ ನೀಡಲಾಗಿರುತ್ತದೆ. ಆದರೆ ಈ ಬಗ್ಗೆ ಮಾಜಿ ದೂಡ ಅಧ್ಯಕ್ಷ ರಾಜನಹಳ್ಳಿ ಶಿವಕುಮಾರ್ ನನ್ನ ಬಗ್ಗೆ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದರು.

ಈ ನಿವೇಶನ ಪಾರ್ಕ್‌ಗಾಗಿ ಖಾಯ್ದಿರಿಸಿದ್ದು ಎಂದು ಪಾಲಿಕೆ ಹೇಳಿತ್ತು, ಈ ಆದೇಶದ ವಿರುದ್ಧ ನಿವೇಶನದಲ್ಲಿ ಅನುಭವವಿದ್ದವರು ನ್ಯಾಯಾಲಯದಲ್ಲಿ ದೂರು ದಾಖಲಿಸಿರುತ್ತಾರೆ. ನಂತರ ಏಪ್ರಿಲ್ 2025ರಂದು ಪ್ರಶ್ನಿತ ಜಾಗವು ಅರ್ಜಿದಾರರಿಗೆ ಸೇರಿದ್ದಾಗಿರುತ್ತದೆ ಮಹಾನಗರ ಪಾಲಿಕೆಯ ಉದ್ಯಾನವನ ಜಾಗವಾಗಿರುವುದಿಲ್ಲ ಎಂದು ನ್ಯಾಯಾಲಯ ಆದೇಶವಾಗಿರುತ್ತದೆ. ನ್ಯಾಯಾಲಯ ಆದೇಶವಾದನಂತರಮಹಾನಗರಪಾಲಿಕೆಯಿಂದ ಮೇಲ್ಮನವಿ ಸಲ್ಲಿಸಿರುವುದಿಲ್ಲ ಎಂದು ಅವರು ವಿವರಿಸಿದರು.

ಈ ಹಿನ್ನಲೆಯಲ್ಲಿ ನ್ಯಾಯಾಲಯದ ಆದೇಶದನ್ವಯ ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿಯಮಾನುಸಾರ ಶುಲ್ಕ ಭರಿಸಿಕೊಂಡು ಉದ್ಯಾನವನ/ಬಫರ್ ಹಸ್ತಾಂತರಿಸಿಕೊಂಡು ಏಕನಿವೇಶನ ವಿನ್ಯಾಸ ಅನುಮೋದನೆ ನೀಡಲಾಗಿರುತ್ತದೆ ವಿನಃ ನಮ್ಮ ಮತ್ತು ಅವರ ನಡುವೆ ಏನು ಇಲ್ಲ ಎಂದು ಸ್ಪಷ್ಟಪಡಿಸಿದರು.

ನ್ಯಾಯಾಲಯದ ಆದೇಶವನ್ನು ಯಾರು ಉಲ್ಲಂಘಿಸಬಾರದು ಮತ್ತು ಮೇಲ್ಮನವಿ ಸಲ್ಲಿಸುವ ಅಧಿಕಾರ ನಮಗೆ ಇಲ್ಲ ಎಂಬುದನ್ನು ರಾಜನಹಳ್ಳಿ, ಶಿವಕುಮಾರ್‌ಗೆ ಗೊತ್ತಿರಲಿ. ನ್ಯಾಯಾಲಯದ ಆದೇಶದ ಬಗ್ಗೆ ತಿಳುವಳಿಕೆ ಇಲ್ಲದಿದ್ದರೆ ಕಾನೂನು ಬಗ್ಗೆ ತಿಳಿದುಕೊಳ್ಳಲಿ ಇನ್ನು ಮುಂದೆ ಇಂತಹ ದಬ್ಬಾಳಿಕೆ ಹೇಳಿಕೆ ನೀಡಿದಲ್ಲಿ ಕಾನೂನು ರೀತ್ಯಾ ಕ್ರಮಕ್ಕೆ ಮೊರೆ ಹೋಗುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ದೂಡ ಸದಸ್ಯೆ ವಾಣಿ ಬಕ್ಕೇಶ್, ಕಾಂಗ್ರೆಸ್ ಮುಖಂಡರಾದ ಆಯೂಬ್ ಪೈಲ್ವಾನ್, ಎ.ನಾಗರಾಜ್, ಮಂಜುನಾಥ್ ಇತರರು ಇದ್ದರು.

## ಶಾಸಕ ಹರೀಶ್‌ಗೆ ಪ್ರಚಾರದ ಹುಚ್ಚು ಅದಕ್ಕಾಗಿ ಸಚಿವರ ಹೆಸರು ಬಳಕೆ ಮಾಡುತ್ತಿದ್ದಾರೆ

### ಜಿಲ್ಲಾ ಯುವ ಕಾಂಗ್ರೆಸ್ ಆರೋಪ

**ದಾವಣಗೆರೆ.ನ.24:** ಹರಿಹರ ಶಾಸಕರು ಸದಾ ಸುದ್ದಿಯಲ್ಲಿರಲು ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ಸುಳ್ಳು ಆರೋಪ ಮಾಡುತ್ತ ಪ್ರಚಾರಗಿಟ್ಟಿಸಿಕೊಳ್ಳುತ್ತಿದ್ದಾರೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷ ಎಸ್. ಕೆ ಪ್ರವೀಣ್ ಕುಮಾರ್ ದೂರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹರಿಹರ ಶಾಸಕ ಬಿ.ಪಿ.ಹರೀಶ್ ಪ್ರಚಾರಕ್ಕಾಗಿ ಜಿಲ್ಲಾಮಂತ್ರಿಗಳ ಬಗ್ಗೆ ಇಲ್ಲಸಲ್ಲದ ಆರೋಪಗಳನ್ನು ಮಾಡಿ, ಜನರಿಗೆ ತಪ್ಪು ಸಂದೇಶ ನೀಡುತ್ತಿದ್ದಾರೆ. ಅವರೇ ಕಾಣೆಯಾಗಿ ಜಿಲ್ಲಾ ಮಂತ್ರಿಗಳು ಕಾಣೆಯಾಗಿದ್ದಾರೆ ಎಂದು ಹೇಳುತ್ತಾರೆ. ಎಸ್.ಎಸ್.ಮಲ್ಲಿಕಾರ್ಜುನ್ ಅವರು ಕೇವಲ ದಾವಣಗೆರೆ ಜಿಲ್ಲೆಗೆ ಮಾತ್ರ ಗಣಿ ಮತ್ತು ಭೂ ವಿಜ್ಞಾನ ಸಚಿವರಲ್ಲ. ರಾಜ್ಯದಲ್ಲಿ ಎಲ್ಲಾ ಕಡೆಗೂ ಹೋಗಬೇಕಾಗುತ್ತದೆ ಆ ಕಾರಣಕ್ಕೆ ಬೇರೆ ಬೇರೆ ಜಿಲ್ಲೆಗಳಿಗೆ ಕೆಲಸದ ಮೇಲೆ ಹೋಗಿರುತ್ತಾರೆ ಎಂದು ಸಮರ್ಥಿಸಿಕೊಂಡರು.

ಹರೀಶ್ ಇತ್ತೀಚೆಗೆ ತಮ್ಮ ಕ್ಷೇತ್ರದಲ್ಲಿ ಹಾಗೂ ಕಚೇರಿಯಲ್ಲೂ ಕಾಣಿಸಿಕೊಳ್ಳುತ್ತಿಲ್ಲ. ಯಾವುದಾದರೂ ಕೆಲಸ ಆಗಬೇಕಿದ್ದರೆ ಅವರನ್ನು ಹರಿಹರ ಮತ್ತು ದಾವಣಗೆರೆಯಲ್ಲಿ ಹುಡುಕಾಡುವ ಪರಿಸ್ಥಿತಿ ಇದೆ. ಶಾಸಕರು ನಾಪತ್ತೆ ಆಗಿದ್ದಾರೆ ಎಂದು ಹರಿಹರ ಜನರು ಹೇಳುತ್ತಿದ್ದರು ಅದಕ್ಕಾಗಿ ನಾನು ಶಾಸಕರು ಕಾಣೆ–ಯಾಗಿದ್ದಾರೆ ಎಂದು ಪೋಸ್ಟರ್ ಹಾಕಿದ್ದೆ, ಇಷ್ಟಾದರೂ ಅವರು ತಮ್ಮ ಕಚೇರಿ ತೆರೆದು ಸಾರ್ವಜನಿಕರ ಸಮಸ್ಯೆ ಆಲಿಸುತ್ತಿಲ್ಲ ಎಂದರು.

ಮುಖಂಡ ಮುಜಾಹಿದ್ ಮಾತನಾಡಿ, ಜಿಲ್ಲಾ ಮಂತ್ರಿಗಳ ವಿರುದ್ಧ ಶಾಸಕ ಬಿ.ಪಿ.ಹರೀಶ್ ಇದೇ ರೀತಿ ಸುಳ್ಳು ಆರೋಪ ಮಾಡಿದರೆ ಮುಂದಿನ ದಿನಗಳಲ್ಲಿ ಅವರ ವಿರುದ್ಧ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಯುವ ಘಟಕದ ವರುಣ್ ಬೆಣ್ಣೆಹಳ್ಳಿ, ಇಮ್ರಾನ್ ಇದ್ದರು.

## ಗುಜರಾತ್: ಮತ್ತೊಬ್ಬ ಬಿಎಲ್‌ಒ ಶವವಾಗಿ ಪತ್ತೆ; ಬಾತ್ ರೂಮ್‌ನಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಸಾವು

**ಅಹಮದಾಬಾದ್:** 26 ವರ್ಷದ ಬಿಎಲ್‌ಒ ಮತ್ತು ಸೂರತ್ ಮುನ್ಸಿಪಲ್ ಕಾರ್ಪೊರೇಷನ್ ತಾಂತ್ರಿಕ ಸಹಾಯಕಿ ದಿನಕಲ್ ಶಿಂಗೋಡವಾಲಾ ಅವರು ತಮ್ಮ ಮನೆಯ ಬಾತ್ ರೂಮ್‌ನಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ನಂತರ ಅವರನ್ನು ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ವೈದ್ಯರು ಮೃತಪಟ್ಟಿದ್ದಾರೆ ಎಂದು ಘೋಷಿಸಿದರು.



## ಕಾಂಗ್ರೆಸ್‌ನಲ್ಲಿ ಅವರ ಶಾಸಕರನ್ನ ಅವರೇ ಖರೀದಿ ಮಾಡುತ್ತಿದ್ದಾರೆ

ಬೆಂಗಳೂರು: ರಾಜ್ಯ ಕಾಂಗ್ರೆಸ್ಸಿನಲ್ಲಿ ಅಧಿಕಾರ ಹಂಚಿಕೆಯ ಗೊಂದಲ ತೀವ್ರ ಸ್ವರೂಪ ಪಡೆದುಕೊಂಡಿದ್ದು, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಮತ್ತು ಬಿಜೆಪಿ ಶಾಸಕ ಆರ್ ಅಶೋಕ್ ಅವರು, ಪ್ರಸ್ತುತ ಸರ್ಕಾರ ಶೇ. 60 ರಷ್ಟು ಭ್ರಷ್ಟಾಚಾರದಲ್ಲಿ ತೊಡಗಿದೆ ಎಂದು ಆರೋಪಿಸಿದ್ದಾರೆ.



"ಕಳೆದ ಎರಡು ವರ್ಷಗಳಿಂದ, ಅಧಿಕಾರ ಮತ್ತು ಸಿಎಂ ಕುರ್ಚಿಗಾಗಿ ಜಗಳ ನಡೆಯುತ್ತಿದೆ. ಸಿಎಂ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವೆ ಅಧಿಕಾರಕ್ಕಾಗಿ ಹೋರಾಟ ನಡೆಯುತ್ತಿರುವುದರಿಂದ ಶಾಸಕರ ಖರೀದಿ ನಡೆಯುತ್ತಿದೆ ಎಂದು ವರದಿಗಳಿವೆ" ಎಂದು ಆರ್ ಅಶೋಕ ಹೇಳಿದರು.

ರಾಜ್ಯ ಸರ್ಕಾರವು ಪ್ರತಿಯೊಂದು ವ್ಯವಹಾರ ನಡೆಸಲು ಶೇ.60 ರಷ್ಟು ಲಂಚ ಸಂಗ್ರಹಿಸುತ್ತಿದೆ ಎಂದು ಆರ್ ಅಶೋಕ್ ಆರೋಪಿಸಿದರು.

ಕರ್ನಾಟಕದಲ್ಲಿ ನಮಗೆ ಚುನಾವಣೆ ಬೇಕು. ಏಕೆಂದರೆ ರಾಜ್ಯದಲ್ಲಿ ಶೇ.60 ರಷ್ಟು ಭ್ರಷ್ಟ ಸರ್ಕಾರವಿದೆ. ಈ ಸರ್ಕಾರ ತೊಲಗಬೇಕು" ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಯಾವುದೇ ಅಧಿಕಾರವಿಲ್ಲ. ಸೋನಿಯಾ ಗಾಂಧಿಯವರ ಬಳಿ ಮಾತ್ರ ಅಧಿಕಾರ ಇದೇ. ಎಐಸಿಸಿ ಅಧ್ಯಕ್ಷರ ಬಳಿ ಯಾವುದೇ ಅಧಿಕಾರವಿಲ್ಲ" ಎಂದರು.

ಮಲ್ಲಿಕಾರ್ಜುನ ಖರ್ಗೆ ಅವರು ತಾವು ಅಧ್ಯಕ್ಷ ಅನ್ನೋದನ್ನೇ ಮರೆತಿದ್ದಾರೆ. ಹೆಸರಿಗೆ ಮಾತ್ರ ಅವರು ಅಧ್ಯಕ್ಷರು, ಅವರ ಕೀ ಇರೋದು ಗಾಂಧಿ ಫ್ಯಾಮಿಲಿ ಬಳಿ ಎಂದು ವ್ಯಂಗ್ಯವಾಡಿದರು.

ಶಾಸಕರ ಖರೀದಿಗೆ 100 ಕೋಟಿ ಆಫರ್; ಕಾರು, ಫ್ಲ್ಯಾಟು ಗಿಫ್ಟ್

100 ವರ್ಷಗಳಿಗೂ ಹೆಚ್ಚು ಇತಿಹಾಸ ಹೊಂದಿರುವ ಕಾಂಗ್ರೆಸ್ ಪಕ್ಷದಲ್ಲಿ ಅವರ ಶಾಸಕರನ್ನ ಅವರೇ ಖರೀದಿ ಮಾಡುವ ಕೆಟ್ಟ ವ್ಯವಸ್ಥೆ ಹಿಂದೆಂದೂ ಕಂಡಿರಲಿಲ್ಲ. ಈಗ 100 ಕೋಟಿ ರೂಪಾಯಿ ವರೆಗೆ ಕುದುರೆ ವ್ಯಾಪಾರ ನಡೆಯುತ್ತಿದೆ ಎಂದು ಆರ್. ಅಶೋಕ್ ಕಿಡಿಕಾರಿದರು.

ಕಾಂಗ್ರೆಸ್‌ನಲ್ಲಿ ಅವರ ಶಾಸಕರನ್ನ ಅವರೇ ಖರೀದಿ ಮಾಡ್ತಿದ್ದಾರೆ. ಇದು ಕಾಂಗ್ರೆಸ್ ಸರ್ಕಾರನಾ? ಅಥವಾ ಸಮ್ಮಿಶ್ರ ಸರ್ಕಾರನಾ? ಅನ್ನೋ ಅನುಮಾನ ಮೂಡುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಒಬ್ಬೊಬ್ಬರು ಶಾಸಕರ ಖರೀದಿಗೆ 60 ರಿಂದ 100 ಕೋಟಿ ರೂ. ಕೊಡಲಾಗ್ತಿದೆ. ಜೊತೆಗೆ ಕಾರು, ಫ್ಲ್ಯಾಟು ಗಿಫ್ಟ್ ಕೊಡುತ್ತಿದ್ದಾರೆ. ಮುಂದೆ ಇದನ್ನ ಜನರ ತಲೆ ಮೇಲೆ ಹಾಕ್ತಾರೆ, ಇದೆಲ್ಲವನ್ನ ಜನರ ಮುಂದೆ ಇಡ್ತೇವೆ ಎಂದು ವಾಗ್ದಾಳಿ ನಡೆಸಿದರು.

ರೈತರ ಆತ್ಮಹತ್ಯೆ; ಸರ್ಕಾರದ ವಿರುದ್ಧ ಹೋರಾಟ

ರೈತರ ಆತ್ಮಹತ್ಯೆಯ ವಿಷಯದ ಕುರಿತು ನವೆಂಬರ್ 27, 28 ಮತ್ತು ಡಿಸೆಂಬರ್ 1 ಮತ್ತು 2 ರಂದು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ಪ್ರತಿಭಟನೆ ನಡೆಸಲಿವೆ ಎಂದು ಅವರು ಹೇಳಿದರು.

ಎಎನ್‌ಐ ಜೊತೆ ಮಾತನಾಡಿದ ಆರ್. ಅಶೋಕ್, ರೈತರ ಆತ್ಮಹತ್ಯೆಯ ವಿಷಯದ ಕುರಿತು "ನವೆಂಬರ್ 27–28 ಮತ್ತು ಡಿಸೆಂಬರ್ 1–2 ರಂದು ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ನಾವು ಪ್ರತಿಭಟನೆ ನಡೆಸುತ್ತೇವೆ. 2000ಕ್ಕೂ ಹೆಚ್ಚು ರೈತರು ಪ್ರಾಣ ಕಳೆದುಕೊಂಡಿದ್ದಾರೆ.

## ದೆಹಲಿಯಲ್ಲಿ ಭಾರೀ ಪ್ರಮಾಣದ ಡ್ರಗ್ಸ್ ವಶ: ಇಬ್ಬರ ಬಂಧನ



**ನವದೆಹಲಿ:** ರಾಷ್ಟ್ರೀಯ ಮಾದಕ ವಸ್ತು ಬ್ಯೂರೋ ಮಹತ್ವದ ಕಾರ್ಯಾಚರಣೆಯಲ್ಲಿ 328.54 ಕೆಜಿ ತೂಕ 262 ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತು ವಶಪಡಿಸಿಕೊಂಡಿದ್ದು ಇಬ್ಬರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಆಪರೇಷನ್ ಕ್ರಿಸ್ಟಲ್ ಫೋರ್ಟ್ರೆಸ್ ಭಾಗವಾಗಿ ನಡೆದ ದಾಳಿಯಲ್ಲಿ ನೋಯ್ಡಾ ನಿವಾಸಿ ಶೇನ್ ವಾರಿಸ್ ಬಂಧನ ಮಾಡಿದ್ದ ಎನ್ ಸಿಬಿ, ಆತನ ಸುಳಿವು ಆಧರಿಸಿ ಸಂಗ್ರಹಣಾ ಕೇಂದ್ರದ ಮೇಲೆ ದಾಳಿ ನಡೆಸಿ ಅಲ್ಲಿದ್ದ ನಾಗಾಲ್ಯಾಂಡ್ ಮಹಿಳೆ ಎಸ್ತರ್ ಕಿನಿಮಿಯನ್ನು ವಶಕ್ಕೆ ಪಡೆದು ಅಪಾರ ಪ್ರಮಾಣದ ಮಾದಕ ವಸ್ತು ವಶಪಡಿಸಿಕೊಂಡಿದೆ.

ದೆಹಲಿಯ ಅತಿದೊಡ್ಡ ಮೆಥಾಂಫೆಟಮೈನ್ ವಶಪಡಿಸಿಕೊಳ್ಳುವಿಕೆಗಳಲ್ಲಿ ಒಂದಾದ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಮತ್ತು ದೆಹಲಿ ಪೊಲೀಸ್ ವಿಶೇಷ ದಳದ ಜಂಟಿ ಕಾರ್ಯಾಚರಣೆಯು ಅತ್ಯಾಧುನಿಕ ಅಂತರಾಷ್ಟ್ರೀಯ ಮಾದಕವಸ್ತು ಸಿಂಡಿಕೇಟ್ ಅನ್ನು ಪತ್ತೆಹಚ್ಚಿದೆ.

ಇದರಿಂದಾಗಿ 262 ಕೋಟಿ ರೂ. ಮೌಲ್ಯದ 328.54 ಕೆಜಿ ಮೆಥ್ ವಶಪಡಿಸಿಕೊಳ್ಳಲಾಗಿದೆ ಮತ್ತು ನಾಗಾಲ್ಯಾಂಡ್‌ನ ಮಹಿಳೆ ಸೇರಿದಂತೆ ಇಬ್ಬರು ವ್ಯಕ್ತಿಗಳನ್ನು ಬಲೆಗೆ ಕೆಡವಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಉತ್ತರ ಪ್ರದೇಶದ ಅಮ್ರೋಹಾದ ನೋಯ್ಡಾ ಸೆಕ್ಟರ್ –5 ರ ನಿವಾಸಿ ಶೇನ್ ವಾರಿಸ್ ನನ್ನು ತನಿಖಾಧಿಕಾರಿಗಳು ಬಂಧಿಸಿದ ನಂತರ ವಿದೇಶಿ ಮೂಲದ ಹ್ಯಾಂಡ್ಲರ್‌ಗಳೊಂದಿಗೆ ಸಂವಹನ ನಡೆಸಲು ನಕಲಿ ಸಿಮ್ ಕಾರ್ಡ್‌ಗಳು ಮತ್ತು ವಾಟ್ಸಾಪ್ ಮತ್ತು ಝುಂಗಿಯಂತಹ ಎನ್‌ಕ್ರಿಪ್ಟ್ ಮಾಡಿದ ಅಪ್ಲಿಕೇಶನ್‌ಗಳನ್ನು ಬಳಸಿದ್ದಾರೆ ಎನ್ನುವುದು ಪತ್ತೆಯಾಗಿದೆ.


# ವನ್ಯಜೀವಿ ಬೆಳೆ ಹಾನಿ ಪರಿಹಾರ ನ.30 ರೊಳಗೆ ಪಾವತಿ: ಈಶ್ವರ ಖಂಡ್ರೆ ಸೂಚನೆ

**ತರೀಕೆರೆ:** ವನ್ಯಜೀವಿಯಿಂದ ಆಗಿರುವ ಎಲ್ಲ ಬೆಳೆ ಹಾನಿ ಪರಿಹಾರವನ್ನು ಈ ತಿಂಗಳಾಂತ್ಯದೊಳಗೆ ಪಾವತಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ತರೀಕೆರೆಯಲ್ಲಿಂದು ಶಿವಮೊಗ್ಗ, ಉಂಬ್ಳೆಬೈಲು ಮತ್ತು ಚಿಕ್ಕಮಗಳೂರು ವಿಭಾಗದ ಹಿರಿಯ ಅರಣ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕಾಡುಪ್ರಾಣಿಗಳು ತೋಟ, ಹೊಲ, ಗದ್ದೆಗೆ ನುಗ್ಗಿ ಬೆಳೆನಷ್ಟ ಮಾಡಿದರೆ, ಆದಷ್ಟು ಶೀಘ್ರ ಪರಿಹಾರ ನೀಡುವಂತೆ ಇತ್ತೀಚೆಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಧರಿಸಲಾಗಿದ್ದು, ಈ ನಿಟ್ಟಿನಲ್ಲಿ ಕ್ರಮ ವಹಿಸುವಂತೆ ಸೂಚಿಸಿದರು.

ಇತ್ತೀಚೆಗೆ ನವಿಲೇಕಲ್ ಗುಡ್ಡದಲ್ಲಿ 5 ವರ್ಷದ ಬಾಲಕಿಯನ್ನು ಚಿರತೆ ಹೊತ್ತೊಯ್ದ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿದ ಸಚಿವರು, ವನ್ಯಜೀವಿಯಿಂದ ಒಂದೇ ಒಂದು ಸಾವು ಸಂಭವಿಸಬಾರದು. ಆದರೆ, ಕೈಮೀರಿ ಇಂತಹ ದುರ್ಘಟನೆಗಳು ನಡೆಯುತ್ತಿವೆ. ಕೂಡಲೇ ಹಾಲಿ ಇರುವ 8 ಬೋನಿನ ಜೊತೆಗೆ ಇನ್ನೂ 4 ಹೆಚ್ಚುವರಿ ಬೋನುಗಳನ್ನಿಟ್ಟು, ನಾಡಿಗೆ ಬರುವ ಚಿರತೆಗಳ ಸೆರೆಗೆ ತುರ್ತುಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

**ಒತ್ತುವರಿ ಆದರೆ ಆರ್.ಎಫ್ ಗಳೇ ಹೊಣೆ:** 2015ರ ನಂತರ ಯಾವುದೇ ಹೊಸ ಅರಣ್ಯ ಒತ್ತುವರಿ ಆಗಿದ್ದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು. ಉಪಗ್ರಹ ಚಿತ್ರ ಆಧರಿಸಿ ಅರಣ್ಯ ಒತ್ತುವರಿ ಪತ್ತೆ ಹಚ್ಚಿ ಪ್ರಕರಣ ದಾಖಲಿಸಬೇಕು. ಇಲ್ಲವಾದರೆ ಆಯಾ ವಲಯದ ಅರಣ್ಯಾಧಿಕಾರಿ (ಆರ್.ಎಫ್.ಓ) ಗಳನ್ನೇ ಹೊಣೆ ಮಾಡಲಾಗುವುದು ಎಂದು ಈಶ್ವರ ಖಂಡ್ರೆ ಎಚ್ಚರಿಸಿದರು.



ಅರಣ್ಯ ಸಿಬ್ಬಂದಿಯೇ ಕಾಳಿಂಗ ಹಿಡಿಯಬೇಕು: ಕಾಳಿಂಗ ಸರ್ಪಗಳು ತೋಟ, ಮನೆಯ ಬಳಿ ಬಂದ ಬಗ್ಗೆ ದೂರು ಬಂದರೆ ಅರಣ್ಯ ಇಲಾಖೆಯ ಸಿಬ್ಬಂದಿಯೇ ಅದನ್ನು ಹಿಡಿಯಬೇಕು. ಇದಕ್ಕಾಗಿ ಮಲೆನಾಡು ಮತ್ತು ಕೊಡಗು ಜಿಲ್ಲೆಯಲ್ಲಿನ ಪ್ರತಿ ವಲಯದಲ್ಲಿ ಕನಿಷ್ಠ 5 ಸಿಬ್ಬಂದಿಗೆ ಕಾಳಿಂಗ ಸರ್ಪ ರಕ್ಷಣೆ–ಯ ತರಬೇತಿ ಕೊಡಿಸಬೇಕು. ಕಾಳಿಂಗ ಸರ್ಪಗಳ ರಕ್ಷಣೆಗೆ ಖಾಸಗಿ ಸಂಸ್ಥೆಗಳ ನೆರವು ಪಡೆಯಬಾರದು ಎಂದು ಅರಣ್ಯ ಸಚಿವರು ತಿಳಿಸಿದರು. ಸೆಕ್ಷನ್ 4 ವರದಿ ಸಲ್ಲಿಸಲು ಸೂಚನೆ: ಚಿಕ್ಕಮಗಳೂರು ಜಿಲ್ಲೆಯಲ್ಲಿ ಈಗಾಗಲೇ ಸೆಕ್ಷನ್ 4 ಆಗಿ ಸೆಕ್ಷನ್ 17 ಆಗದ ಎಷ್ಟು ಪ್ರಕರಣ ಇದೆ. ಮತ್ತು ಯಾವ ಹಂತದಲ್ಲಿದೆ ಎಂಬ ಬಗ್ಗೆ ಒಂದು ವಾರದೊಳಗೆ ಸಚಿವಾಲಯಕ್ಕೆ ಮಾಹಿತಿ ನೀಡುವಂತೆ ಆದೇಶ ನೀಡಿದರು.

ಅಜ್ಜಂಪುರ ತಾಲೂಕಿನಲ್ಲಿ ವೃಕ್ಷೋದ್ಯಾನ ನಿರ್ಮಾಣಕ್ಕೆ ಜಾಗವನ್ನು ಗುರುತಿಸಿ 10 ದಿನಗಳ ಒಳಗಾಗಿ ಪ್ರಸ್ತಾವನೆ ಸಲ್ಲಿಸುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ತಿಳಿಸಿದರು. **ಜನಸ್ನೇಹಿಯಾಗಿ:** ಅರಣ್ಯ ಸಿಬ್ಬಂದಿ ಮತ್ತು ರೈತರ ನಡುವೆ ಸ್ನೇಹಭಾವ ಇರಬೇಕು. ಅನ್ನದಾತರೊಂದಿಗೆ ಮತ್ತು ಸಾರ್ವಜನಿಕರೊಂದಿಗೆ ಹೆಚ್ಚು ಜನಸ್ನೇಹಿಯಾಗಿ ವರ್ತಿಸಿ, ಅವರ ಕುಂದು–ಕೊರತೆ ಆಲಿಸಿ, ಸಾಧ್ಯವಾದಷ್ಟು ಶೀಘ್ರ ಪರಿಹಾರ ಒದಗಿಸಿ. ಹಿರಿಯ ಅಧಿಕಾರಿಗಳು ಕ್ಷೇತ್ರಕ್ಕೆ ಮತ್ತು ವನ್ಯಜೀವಿ ಸಂಘರ್ಷ ಇರುವ ಕಾಡಂಚಿನ ಗ್ರಾಮಗಳಿಗೆ ತೆರಳಿ ಜನಸಂಪರ್ಕ ಸಭೆಗಳನ್ನು ನಡೆಸಿ ಎಂದೂ ಸಚಿವರು ಸೂಚಿಸಿದರು.

ತರೀಕೆರೆ ಶಾಸಕ ಜಿ.ಎಚ್ ಶ್ರೀನಿವಾಸ ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ.

### ವೃಷಭ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಭೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು.

### ಮಿಥುನ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ದಿನದ ಉತ್ತರಾರ್ಧದಲ್ಲಿ ನೀವು ವಿಶ್ರಾಂತಿ ತೆಗೆದುಕೊಳ್ಳಬಯಸುತ್ತೀರಿ ಮತ್ತು ನಿಮ್ಮ ಕುಟುಂಬದ ಸದಸ್ಯರೊಡನೆ ಸಮಯ ಕಳೆಯಬಯಸುತ್ತೀರಿ.

### ಕರ್ಕ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ.

### ಸಿಂಹ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು.

### ಕನ್ಯಾ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೆಣಟಿಜಜಜಿಟಿಜಜಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

### ತುಲಾ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು ಪ್ರೇಮನಿವೇದನೆ ತಿರುಗೇಟು ನೀಡಬಹುದಾದ್ದರಿಂದ ನಿಮ್ಮ ಸೋಲುಗಳಿಂದ ನೀವು ಪಾಠ ಕಲಿಯಬೇಕು ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ ಮತ್ತು ನೀವು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಒಟ್ಟಿಗೆ ಕೆಲಸ ಮಾಡುತ್ತೀರಿ.

### ವೃಶ್ಚಿಕ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೊಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಧನು ರಾಶಿ

ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

### ಮಕರ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ.

### ಕುಂಭ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ. ಉದ್ಯಮಿಗಳು ಕೆಲವು ಹಠಾತ್ ಅನಿರೀಕ್ಷಿತ ಲಾಭ ಅಥವಾ ಆದಾಯದ ಒಳ್ಳೆಯ ದಿನವನ್ನು ಹೊಂದಬಹುದಾದ್ದರಿಂದ ಅವರಿಗೆ ಒಳ್ಳೆಯ ದಿನ.

### ಮೀನ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ;

# ಭಗವದ್ಗೀತೆಯ ಪರಂಪರೆಯು ಯಕ್ಷಗಾನದಲ್ಲಿ ಪರಿಪೂರ್ಣತೆ ಇದೆ

**ದಾವಣಗೆರೆ:** ಕರ್ನಾಟಕದ ಕರಾವಳಿ ಜಿಲ್ಲೆಗಳ ಆರಾಧನಾ ಕಲೆ ಯಕ್ಷಗಾನದಲ್ಲಿ ಸಂಸ್ಕೃತಿ, ಸಂಸ್ಕಾರ ಉಳಿಸಿ ಬೆಳೆಸುವ ಜೊತೆಗೆ ಭಗವದ್ಗೀತೆಯ ಪರಂಪರೆಯು ಯಕ್ಷಗಾನದಲ್ಲಿ ಪರಿಪೂರ್ಣತೆ ಇದೆ ಇತ್ತೀಚಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಪೂಜಾ ಸೇವೆಯ ಯಕ್ಷಗಾನ ಕಲೆಗೆ ಅವಮಾನ ಮಾಡಿದ್ದು ಖಂಡನೀಯ. ಈ ಕಲಾಕುಂಚ ಸಂಸ್ಥೆ ನಿರಂತರವಗಿ 35 ವರ್ಷಗಳಿಂದ ಕಲೆ, ಸಾಹಿತ್ಯ, ಸಂಗೀತ, ಯಕ್ಷಗಾನ ಸೇರಿದಂತೆ ಸಾಂಸ್ಕೃತಿಕ ಚಟುವಟಿಕೆಗಳು ಇತರ ಸಂಘ ಸಂಸ್ಥೆಗಳ ಮಾದರಿ ಕೆಲವು ಸಂಸ್ಥೆಗಳು ಆರಂಭ ಶೂರತ್ವಕ್ಕೆ ಸೀಮಿತವಾಗುತ್ತಿದೆ. ವಾಣಿಜ್ಯ ನಗರಿಯಾದ ದಾವಣಗೆರೆ 4 ದಶಕಗಳಿಂದ ಯಕ್ಷಗಾನ ಗಂಡು ಕಲೆ ಪರಿಚಯಿಸಿದ್ದು ಸಾಲಿಗ್ರಾಮ ಗಣೇಶ್ ಶೆಣೈಯವರ ಸಾಧನೆ ಶ್ಲಾಘನೀಯ ಎಂದು ಸುಮುಖ ಯಕ್ಷಗಾನ ಕಲಾಕೇಂದ್ರದ ಅಧ್ಯಕ್ಷರಾದ ಯಕ್ಷಗಾನ ಕಲಾವಿದರಾದ ಶ್ರೀಮತಿ ಕಿರಣ್ ರವಿ.ಪೈ ತಮ್ಮ ಅಂತರಾಳದ ಅನಿಸಿಕೆ ಹಂಚಿಕೊಂಡರು.

ನಗರದ ಚನ್ನಗಿರಿ ವಿರೂಪಾಕ್ಷಪ್ಪ ಕಲ್ಯಾಣ ಮಂಟಪದಲ್ಲಿ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ 70ನೇ ವರ್ಷದ ಕನ್ನಡ ರಾಜ್ಯೋತ್ಸವ ಪ್ರಯುಕ್ತ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ "ಕರ್ನಾಟಕ ಸಿರಿಗನ್ನಡ ಸಿರಿ" ರಾಜ್ಯ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.




ಮುಖ್ಯ ಅತಿಥಿಗಳಾಗಿ ಡಾ॥ ಶಶಿಕಲಾ ಕೃಷ್ಣಮೂರ್ತಿ ಯವರು ಮಾತನಾಡಿ, ನನ್ನ ಜೀವನದಲ್ಲಿ ಮೊಟ್ಟ ಮೊದಲ ವೇದಿಕೆಯನ್ನು ಕಲ್ಪಿಸಿ ನನ್ನ ಸಭಾ ಕಂಪನ ದೂರ ಮಾಡಿದ್ದು ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ಅಪ್ಪಟ ಕನ್ನಡ ಭಾಷೆಯು ನಮ್ಮ ಮನದಾಳದಲ್ಲಿ ಇರಬೇಕು ಕೇವಲ ನವಂಬರ್‌ಗೆ ಸೀಮಿತವಾಗಿದೆ, ಕನ್ನಡ ನಿತ್ಯೋತ್ಸವ ಆಗಬೇಕಾಗಿದೆ. ಈ ಕಲಾಕುಂಚ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ಯವರು ನಿರಂತರವಾಗಿ ಹೊಸ ಹೊಸ ಪರಿಕಲ್ಪನೆಯೊಂದಿಗೆ ಸಾಂಸ್ಕೃತಿಕ ಚಟುವಟಿಕೆಗಳು ಶ್ಲಾಘನೀಯ ಎಂದರು.

ಬೆಂಗಳೂರಿನ ಖ್ಯಾತ ಸಂಗೀತ ಸಾಧಕಿ, ಸಾಹಿತಿ, ಕವಯತ್ರಿ ಶ್ರೀಮತಿ ನವೀನ ರಾಯ್ಕರ್, ಉತ್ತರ ಕನ್ನಡ ಜಿಲ್ಲೆಯ ಗೋಕರ್ಣದ ಶೈಕ್ಷಣಿಕ ಸಾಧಕಿ ಖ್ಯಾತ ಚಿತ್ರಕಾವಿದರಾದ ಕುಮಾರಿ ನವ್ಯ ಮನೋಹರ್ ಪೈ ಮಾತನಾಡಿ, ನಮ್ಮ ಮುಂದಿನ ಸಾಧನೆಗಳಿಗೆ ಇಂತಹ ಭವ್ಯ ದಿವ್ಯ ವೇದಿಕೆ ಕಲ್ಪಿಸಿ ನಮ್ಮೆಲ್ಲರನ್ನು ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುತ್ತಿರುವ ಶೆಣೈಯವರು, ಸಂಕುಚಿತ ಭಾವನೆ ಇಲ್ಲದೇ ವಿಶಾಲವಾದ ಸೇವಾ ಮನೋಭಾವನೆಗಳು ನಮಗೆಲ್ಲರಿಗೂ ಮಾರ್ಗದರ್ಶನ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಕಲಾಕುಂಚದ ಅಧ್ಯಕ್ಷರಾದ ಕೆ.ಹೆಚ್.ಮಂಜುನಾಥ್ ಮಾತನಾಡಿ, ಸಂಘಟನೆ ಅಷ್ಟು ಸುಲಭದ ಮಾತಲ್ಲ, ಸಹನೆ, ತಾಳ್ಮೆ, ಸೇವಾ ಮನೋಭಾವನೆಯೊಂದಿಗೆ ಕಲಾಕುಂಚ ಸ್ವತಂತ್ರ ಸಂಸ್ಥೆಯಾಗಿದೆ. ಯಾವುದೇ ಸಾರ್ವಜನಿಕ ದೇಣಿಗೆ ಇಲ್ಲದೇ ಸರ್ಕಾರದ, ಇಲಾಖೆಗಳ ಅನುದಾನವಿಲ್ಲದೇ ಪ್ರತಿ ವರ್ಷ ಕನ್ನಡ ಮಕ್ಕಳಿಗೆ ಪುರಸ್ಕಾರ ಸಾಧಕರಿಗೆ, ಕಲಾವಿದರಿಗೆ ವಿವಿಧ ಉಚಿತ ಸ್ಪರ್ಧೆಗಳು 35 ವರ್ಷ ನಡೆದು ಬಂದ ದಾರಿಗೆ ಕಾರಣ ಶೆಣೈಯವರದ್ದು ಎಂದರು.

ವಿದುಷಿ ಶ್ರೀಮತಿ ಸಂಗೀತಾ ರಾಘವೇಂದ್ರ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಸಮಾರಂಭಕ್ಕೆ ಶ್ರೀಮತಿ ಲಲಿತಾ ಕಲ್ಲೇಶ್ ಸ್ವಾಗತಿಸಿದರು. ಸುಮಾರು 241 ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ವೇದಿಕೆಯ ಪ್ರತ್ಯೇಕ ಸಿಂಹಾಸನದ ಮೇಲೆ ಕೂರಿಸಿ, ಕಲಾಕುಂಚದ ಮುತ್ತೈದೆಯರು ಕನ್ನಡ ತಿಲಕವಿಟ್ಟು, ಕನ್ನಡ ಕಂಕಣ ಕಟ್ಟಿ, ಕನ್ನಡಾರತಿ ಬೆಳಗಿ, ಸಾಧಕರ ಭಾವಚಿತ್ರವಿರುವ ಸನ್ಮಾನ ಪತ್ರ ಮುದ್ರಿಸಿ, ಫ್ರೇಂ ಮಾಡಿ, ಕನ್ನಡ ಪೇಟಾದೊಂದಿಗೆ ಹಾರ, ಶಾಲು ಕನ್ನಡ ತಾಯಿ ಭುವನೇಶ್ವರಿಯ ಸ್ಮರಣಿಕೆ ಚಿನ್ನದ ಲೇಪನದ ಪದಕ ಕೊರಳಿಗೆ ಹಾಕಿ, ಪುಷ್ಪ ವೃಷ್ಟಿಯೊಂದಿಗೆ ಸನ್ಮಾನಿಸಿ, ಗೌರವಿಸಲಾಯಿತು. ಶ್ರೀಮತಿ ಶೈಲಾ ವಿನೋದ ದೇವರಾಜ್ ಕಾರ್ಯಕ್ರಮ ನಿರೂಪಿಸಿದರು. ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ, ಸಂಸ್ಥೆಯ ಗೌರವಾಧ್ಯಕ್ಷರಾದ ಶ್ರೀಮತಿ ವಸಂತಿ ಮಂಜುನಾಥ್, ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವೇದಿಕೆಯಲ್ಲಿ ಉಪಸ್ಥಿತರಿದ್ದು ಕೊನೆಯಲ್ಲಿ ಶ್ರೀಮತಿ ಚಂದ್ರಶೇಖರ ಅಡಿಗ ವಂದಿಸಿದರು.

# ಕನ್ನಡ ಏಕೀಕರಣಕ್ಕೆ ದುಡಿದ ಮಹನೀಯರು ಪ್ರಾತಃಸ್ಮರಣೀಯರು

**ತುಮಕೂರು:** ಕನ್ನಡ ಏಕೀಕರಣಕ್ಕೆ ದುಡಿದ ಮಹನೀಯರನ್ನು ನಾವುಗಳು ಪ್ರತಿದಿನ ನೆನೆಪಿಸಿಕೊಳ್ಳಬೇಕು,ಅವರ ದೂರದೃಷ್ಟಿತ್ವದಿಂದ ಕನ್ನಡ ನಾಡು ಉದಯವಾಯಿತು,ಅಂದು 4ಭಾಗಗಳಾಗಿ ಇದ್ದ ಕನ್ನಡನಾಡು ಹೈದರಾಬಾದ್ ಕರ್ನಾಟಕ,ಮುಂಬೈ ಕರ್ನಾಟಕ,ಕೊಡಗು,ಮೈಸೂರು ಇವುಗಳನ್ನು ವಿಲೀನಗೊಳಿಸಿ ಕರ್ನಾಟಕ ಎಂದು 1956 ನವೆಂಬರ್ 1ರಂದು ಮೈಸೂರು ರಾಜ್ಯ ಉದಯವಾಯಿತು,ಅಂದಿನ ಹೋರಾಟದಲ್ಲಿ ಆಲೂರು ವೆಂಕಟರಾವ್,ಕೆಂಗಲ್ ಹನುಮಂತಯ್ಯ,ಎಸ್.ನಿಜಲಿಂಗಪ್ಪ ಮುಂತಾದ ಮಹನೀಯರನ್ನು ನಾವು ನೆನಪಿಸಿಕೊಂಡು ಇಂದಿನ ಮಕ್ಕಳಿಗೆ ಇವರ ಹೆಸರನ್ನು ತಿಳಿಸಿಕೊಡಬೇಕು,ಕನ್ನಡನಾಡು ಎಲ್ಲ ಪ್ರದೇಶಗಳನ್ನು ಒಳಗೊಂಡರೂ ಸಹ ಇಂದಿಗೂಅನಂತಪುರ,ಮಡಕಶಿರಾ, ಹೊಸೂರು,ಸೊಲ್ಲಾಪುರ ಹೀಗೆ ಹತ್ತಾರು ಪ್ರದೇಶಗಳು ಕರ್ನಾಟಕದಲ್ಲಿ ವಿಲೀನವಾಗದೆ ಹಾಗೆಯೇ ಉಳಿದಿದ್ದು ನಮಗೆ ನೋವಾಗಿದೆ ಎಂದು ಪತ್ರಕರ್ತ ಕೆ.ಬಿ.ಚಂದ್ರಚೂಡರವರು ತಿಳಿಸಿದರು.

ಅವರು ಇಂದು ಜಯನಗರ ಕ್ಷೇಮಾಭಿವೃದ್ಧಿ ಸಂಘದಿಂದ ತರಕಾರಿ ಮಾರುಕಟ್ಟೆ ಬಳಿ ಆಯೋಜಿಸಿದ್ದ 70ನೇ ಕನ್ನಡ ರಾಜ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.




ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಆರ್.ಎಸ್.ವೀರಪ್ಪದೇವರು ಕನ್ನಡ ನಮ್ಮ ಉಸಿರು,ಕನ್ನಡ ನಮಗೆ ಅನ್ನ ಕೊಟ್ಟ ಭಾಷೆ,ಎಲ್ಲರೂ ಇಂಗ್ಲೀಷ್ ವ್ಯಾಮೋಹಕ್ಕೆ ಬಲಿಯಾಗಿ ಕನ್ನಡವನ್ನು ತಿರಸ್ಕಾರದಿಂದ ನೋಡುತ್ತಿದ್ದಾರೆ ತಂದೆ–ತಾಯಿಗಳು ತಮ್ಮ ಮಕ್ಕಳಿಗೆ ಮಾತೃಭಾಷೆ ಕನ್ನಡವನ್ನು ಹೇಳಿಕೊಡಬೇಕು,ಬೇರೆ ರಾಜ್ಯದಲ್ಲಿ ಅವರ ಮಾತೃಭಾಷೆ ಬಿಟ್ಟು ಬೇರೆ ಭಾಷೆ ಮಾತನಾಡುವುದಿಲ್ಲ ಆದರೆ ನಮ್ಮ ರಾಜ್ಯದಲ್ಲಿ ಬೇರೆಯವರೊಂದಿಗೆ ಅವರ ಭಾಷೆಯಲ್ಲಿಯೇ ಮಾತನಾಡಿ ವ್ಯವಹಾರ ಮಾಡುತ್ತಾರೆ ಇದು ಸಲ್ಲದು ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷರಾದ ಬಿ.ವಿ.ದ್ವಾರಕಾನಾಥ್ ಮಾತನಾಡುತ್ತಾ ದರಾಬೇಂದ್ರೆ,ಕುವೆಂಪು,ಡಿವಿಜಿ,ಬೀಚಿ ಎಲ್ಲರ ಸಾಹಿತ್ಯವನ್ನು ಇಂದಿನ ಮಕ್ಕಳು ಓದಬೇಕು,ಕನ್ನಡ ಭಾಷೆ ಅತ್ಯಂತ ಪ್ರಾಚೀನ ಭಾಷೆ,ಕವಿರಾಜಮಾರ್ಗ ನಮ್ಮ ಕನ್ನಡದ ಪ್ರಥಮ ಕೃತಿ ಅದನ್ನು ಓದಿದರೆ ಕನ್ನಡ ಭಾಷೆಯ ಆಳ ಗೊತ್ತಾಗುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕೆ.ಆರ್.ಮಂಜುಳಾ, ಗೋವಿಂದರಾಜು, ತಿಪ್ಪೇಸ್ವಾಮಿ, ಶ್ರೀನಿವಾಸಮೂರ್ತಿ,ಆರ್. ಎಸ್.ಬಸವರಾಜಯ್ಯ, ರೇಣುಕಪ್ರಸನ್ನ, ಶಿವಶಂಕರ್ ಇತರರು ಉಪಸ್ಥಿತರಿದ್ದರು.

# ನೊಂದ ರೈತನಿಗೆ ರೈತ ಸಂಘದಿಂದ ಧನ ಸಹಾಯ



**ಗದಗ :** ಇತ್ತೀಚಿಗೆ ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾಮದಲ್ಲಿ ಇಬ್ಬರು ಬಡ ರೈತರ 10 ಎಕರೆ ಜಮೀನಿನಲ್ಲಿ ಬೆಳೆದಂತಹ ಗೋವಿನ ಜೋಳಕ್ಕೆ ರಾತ್ರಿ ಸಮಯದಲ್ಲಿ ಟ್ರ್ಯಾಕ್ಟರ್ ಮುಖಾಂತರ ದುಷ್ಕರ್ಮಿಗಳು ಬೆಳೆಯನ್ನು ಹಾಳು ಮಾಡಿರುವ ಕೃತ್ಯವನ್ನು ಖಂಡಿಸಿ ಹಾಗೂ ನೊಂದ ರೈತರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಡಾ. ವಾಸುದೇವ ಮೇಟಿ ಅವರ ಬಣದ ಮುಂಡರಗಿ ತಾಲೂಕಿನ ಮಹಿಳಾ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ಕುಡುಪಲಿ ಹಾಗೂ ಅಧ್ಯಕ್ಷರಾದ ಮಲ್ಲಿಕಾರ್ಜುನ ಹಿರೇಮಠ ಅವರು ಹಾರೂಗೇರಿ ಗ್ರಾಮಕ್ಕೆ ಭೇಟಿ ನೀಡಿ ರೈತರಿಗೆ ಧೈರ್ಯವನ್ನು ತುಂಬಿ ಸಂತಾಪವನ್ನು ವ್ಯಕ್ತಪಡಿಸಿ, ಮುಂಡರಗಿ ತಾಲೂಕು ಹಸಿರು ಸೇನೆ ವತಿಯಿಂದ ಧನಸಹಾಯವನ್ನು ಮಾಡಿದರು.

ಈ ಸಂದರ್ಭದಲ್ಲಿ ಮುಂಡರಗಿ ತಾಲ್ಲೂಕಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವೈಭವ್ ಕೆ. ಗೌಡ ಮತ್ತು ಎನ್. ಸಾತ್ವಿಕ್ ನಾಯಕ್‌ಗೆ ಸೋಮೇಶ್ವರ ಚದುರಂಗಸಿರಿ ಪ್ರಶಸ್ತಿ



**ದಾವಣಗೆರೆ:** ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆ ಅಂಗವಾಗಿ ನಗರದ ಶ್ರೀ ಸೋಮೇಶ್ವರ ವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಅಂತರ್ಶಾಲಾ ಚದುರಂಗ ಸ್ಪರ್ಧೆಯಲ್ಲಿ ವೈಭವ್ ಕೆ. ಗೌಡ ಮತ್ತು ಎನ್. ಸಾತ್ವಿಕ್ ನಾಯಕ್ ಅವರಿಗೆ ಸೋಮೇಶ್ವರ ಚದುರಂಗಸಿರಿ ಪ್ರಶಸ್ತಿಗೆ ಭಾಜನರಾದರು.

ಹಿರಿಯರ ವಿಭಾಗದಲ್ಲಿ ಎಸ್.ಜಿ. ನಿಶ್ಚಲ್ ದ್ವಿತೀಯ, ಎಲ್. ಸುಜಯ್ ತೃತೀಂಯ್ಕಿರಿಯರ ವಿಭಾಗದಲ್ಲಿ ಎ.ಎಸ್. ಮಣಿಕಂಠ, ತೃತೀಯ ಕೆ. ಖುಷಿ ವಿಜೇತರಾದರು.

ಕಾರ್ಯಕ್ರಮದಲ್ಲಿ ತೀರ್ಥಾಚಾರ್ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು, ಅಧ್ಯಕ್ಷತೆಯನ್ನು ಶಾಲೆಯ ಶೈಕ್ಷಣಿಕ ನಿರ್ದೇಶಕ ಎನ್.ಪಿ ಪರಮೇಶ್ವರಪ್ಪ ವಹಿಸಿದ್ದರು ಹಾಗೂ ಶಾಲೆಯ ಆಡಳಿತಾಧಿಕಾರಿ ಎನ್. ಆರ್. ಹರೀಶ್ ಬಾಬು, ಮುಖ್ಯಶಿಕ್ಷಕ ಎಂ. ಆರ್. ಪ್ರಕಾಶ್ ಮತ್ತು ಸ್ಪರ್ಧೆಯ ತೀರ್ಪುಗಾರರಾದ ಸೋಮಶೇಖರ್ ಬಿರಾದರ್ ಉಪಸ್ಥಿತರಿದ್ದರು. ಇದೆ ಸಂದರ್ಭದಲ್ಲಿ ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ಹಾಗೂ ಚನ್ನಗಿರಿ ಬಿಜೆಪಿ ಮುಖಂಡ ಮಾಡಾಳು ಮಲ್ಲಿಕಾರ್ಜುನ್ ಹಾಗೂ ಸಂಸ್ಥೆಯ ಕಾರ್ಯದರ್ಶಿ ಕೆ.ಎಂ ಸುರೇಶ್ ಮಕ್ಕಳಿಗೆ ಶುಭಕೋರಿದರು.

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನವಾಗಿ ಶ್ರೀ ಸೋಮೇಶ್ವರ ಚದುರಂಗಸಿರಿ ಪ್ರಶಸ್ತಿ ಫಲಕ ಮತ್ತು 5,000 ನಗದು ಹಾಗೂ ದ್ವಿತೀಯ ಬಹುಮಾನವಾಗಿ 3,000 ನಗದು ಮತ್ತು ಪ್ರಶಸ್ತಿ ಫಲಕ ಹಾಗೂ ತೃತೀಯ ಬಹುಮಾನವಾಗಿ ಪ್ರಶಸ್ತಿ ಫಲಕವನ್ನು ಸೋಮೇಶ್ವರೋತ್ಸವ ಸಂದರ್ಭದಲ್ಲಿ ನೀಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಕಾರ್ಯದರ್ಶಿ ಕೆ.ಎಂ ಸುರೇಶ್ ತಿಳಿಸಿದ್ದಾರೆ.

# "ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಶ್ರೀ ಸಿದ್ಧಗಂಗಾ ಪದವಿ ಪೂರ್ವ ಕಾಲೇಜಿಗೆ ಚಾಂಪಿಯನ್ ಪಟ್ಟ"

**ದಾವಣಗೆರೆ :** ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಬೆಂಗಳೂರು ಇವರ ಆದೇಶದನ್ವಯ 2025–26 ನೇ ಸಾಲಿನ ಶೈಕ್ಷಣಿಕ ವರ್ಷದ

ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ದಾವಣಗೆರೆ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಹಾಗೂ ಪಠ್ಯೇತರ ಚಟುವಟಿಕೆಗಳ ಸ್ಪರ್ಧೆಗಳನ್ನು ಉಪನಿರ್ದೇಶಕರು, ದಾವಣಗೆರೆ ಜಿಲ್ಲೆ ಇವರ ಆದೇಶದಂತೆ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ ಹಾಗೂ ಶ್ರೀ ಸಿದ್ಧಗಂಗಾ ಪದವಿ ಪೂರ್ವ ಕಾಲೇಜು ಇವರ ಸಹಯೋಗದೊಂದಿಗೆ ದಿನಾಂಕ 21–11–2025 ರ ಶುಕ್ರವಾರದಂದು ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಉದ್ಘಾಟನಾ ಸಮಾರಂಭವು ಅಂದು ಬೆಳಿಗ್ಗೆ 10 ಗಂಟೆಗೆ ಆರಂಭವಾಯಿತು. ಶ್ರೀ ಸಿದ್ಧಗಂಗಾ ಪದವಿ ಪೂರ್ವ ಕಾಲೇಜಿನ ನಿರ್ದೇಶಕರಾದ ಡಾ॥ ಜಯಂತ್ ಡಿ ಎಸ್ ಉದ್ಘಾಟಕರಾಗಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಶ್ರೀ ಪಳನಿವೇಲು ಡಿ., ಉಪನಿರ್ದೇಶಕರು, ದಾವಣಗೆರೆ ಇವರು ಅಧ್ಯಕ್ಷತೆ ವಹಿಸಿದ್ದರು. ಶ್ರೀ ಓಹಿಲೇಶ್ವರ ಎನ್, ಅಧ್ಯಕ್ಷರು, ಪ್ರಾಚಾರ್ಯರ ಸಂಘ, ಶ್ರೀ ಶಿವಪ್ಪ ಜೆ, ಕಾರ್ಯದರ್ಶಿಗಳು, ಪ್ರಾಚಾರ್ಯರ ಸಂಘ, ಶ್ರೀ ಸುರೇಶ ಆರ್., ಪ್ರಾಚಾರ್ಯರು, ಶ್ರೀಮತಿ ವಾಣಿಶ್ರೀ, ಪ್ರಾಚಾರ್ಯರು ವೇದಿಕೆಯನ್ನು ಅಲಂಕರಿಸಿದ್ದರು.

ಪ್ರಥಮ ಹಾಗೂ ದ್ವಿತೀಯ ಪಿಯುಸಿ ಹಂತದ 11 ವಿವಿಧ ಸ್ಪರ್ಧೆಗಳಿಗೆ ದಾವಣಗೆರೆ ಜಿಲ್ಲೆಯ 41 ಪದವಿ ಪೂರ್ವಕಾಲೇಜುಗಳಿಂದ ಸುಮಾರು 580 ಸ್ಪರ್ಧಾರ್ಥಿಗಳು ಭಾಗವಹಿಸಿದರು. ಸಂಜೆ 4 ಗಂಟೆ




ಸಮಾರೋಪ ಹಾಗೂ ಬಹುಮಾನ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಸಮಾರಂಭದಲ್ಲಿ ಉಪನಿರ್ದೇಶಕರಾದ(ಪದವಿ ಪೂರ್ವ) ಶ್ರೀ ಪಳನಿವೇಲು ಡಿ. ಇವರು ವಿದ್ಯಾರ್ಥಿಗಳನ್ನು ಕುರಿತು ಉತ್ತಮವಾಗಿ ಅಭ್ಯಾಸ ಮಾಡಲು ಹಲವು ದಾರಿಗಳಿದ್ದು, ಸರ್ಕಾರವು ವಿವಿಧ ಅವಕಾಶಗಳನ್ನು ಕಲ್ಪಿಸಿದೆ ಅದನ್ನು ಸದುಪಯೋಗ ಪಡಿಸಿಕೊಂಡು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ವಿಜೇತ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿಗಳು ಹೇಗೆ ಸಿದ್ಧತೆ ಮಾಡಿಕೊಳ್ಳಬೇಕು ಎನ್ನುವುದರ ಕುರಿತು ಸೂಕ್ತ ಸಲಹೆ ನೀಡಿ, ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು. ಈ ಸಂದರ್ಭದಲ್ಲಿ ಶ್ರೀ ಓಹಿಲೇಶ್ವರ, ಶ್ರೀ ಹೇಮಂತ್ ಡಿ.ಎಸ್., ಶ್ರೀಮತಿ ಗಾಯಿತ್ರಿ ಚಿಮ್ಮಡ್, ಶ್ರೀಮತಿ ವಾಣಿಶ್ರೀ, ಶ್ರೀ ಸುರೇಶ ಆರ್, ಶ್ರೀ ಶಿವಪ್ಪ ಜೆ, ಶ್ರೀ ಭೀಮ ಕುಮಾರ ಜೆ.ವಿ ಇವರುಗಳೂ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಮುಂದಿನ ಹಂತಕ್ಕೆ ಹೋಗುವ ವಿದ್ಯಾರ್ಥಿಗಳಿಗೆ ಶುಭ ಕೋರಿದರು.

### ಅಡವೀಂದ್ರಸ್ವಾಮಿ ಮಠದಲ್ಲಿ ಶ್ರೀಅನ್ನಪೂರ್ಣೇಶ್ವರಿ ದೇವಿಯ ಸಂಭ್ರಮದ ಕಾರ್ತಿಕೋತ್ಸವ

# ಸರ್ವೋತ್ಕೃಷ್ಟ ಜ್ಞಾನಕ್ಕೆ ಶಿರಬಾಗಿ ನಮಿಸುವ ಪ್ರತೀಕವೇ ದೀಪ ಪ್ರಜ್ವಲನೆ

**ಗದಗ:** ದೀಪ ಜ್ಞಾನದ ಸಂಕೇತ. ಕತ್ತಲೆ ಅಜ್ಞಾನದ ಸಂಕೇತ. ಬೆಳಕು ಕತ್ತಲೆಯನ್ನು ದೂರ ಮಾಡುತ್ತ ಹೋದ ಹಾಗೆ ಜ್ಞಾನವು, ಅಜ್ಞಾನವನ್ನು ದೂರ ಮಾಡುತ್ತದೆ. ಸರ್ವೋತ್ಕೃಷ್ಟ ಜ್ಞಾನಕ್ಕೆ ಶಿರಬಾಗಿ ನಮಿಸುವ ಪ್ರತೀಕವೇ ದೀಪ ಪ್ರಜ್ವಲನೆ. ಇದು ನಮ್ಮ ಎಲ್ಲ ಆಲೋಚನೆ, ಚಟುವಟಿಕೆಗಳಿಗೆ ಸಾಕ್ಷಿ ಎಂದು ಶ್ರೀಮಠದ ಶಿವಾನುಭವ ಸಮಿತಿಯ ಅಧ್ಯಕ್ಷರಾದ ಡಾ.ರಾಜೇಂದ್ರ ಎಸ್. ಗಡಾದ ಅವರು ಹೇಳಿದರು.



ಸಮಾರಂಭದಲ್ಲಿ ಹಿರಿಯರಾದ ಜಿ.ಎಂ. ಯಾನಮಶೆಟ್ಟಿ, ಗುರಪ್ಪ ನಿಡಗುಂದಿ, ಶ್ರೀಮತಿ ಪ್ರಮಿಳಾದೇವಿ ಬಳಿಗಾರ, ಶ್ರೀಮತಿ ಅನ್ನಪೂರ್ಣಮ್ಮನವರು ಹೊಸಳ್ಳಿಮಠ, ಪ್ರಕಾಶ ಬಂಡಿ, ಸಿ.ಬಿ. ಹಿರೇಮಠ, ಮಾಲತೇಶ ಪಾಟೀಲ ವಕೀಲರು, ವೀರಣ್ಣ ಹೂಗಾರ, ಸವಿತಾ ಹೊಸಳ್ಳಿಮಠ, ವಿಜಯಲಕ್ಷ್ಮೀ ಹೊಸಳ್ಳಿಮಠ ಸೇರಿದಂತೆ ಶ್ರೀಮಠದ ಸದ್ಭಕ್ತರು, ಶಿವಾನುಭವ ಸಮಿತಿ ಹಾಗೂ ಜಾತ್ರಾಮಹೋತ್ಸವ ಸಮಿತಿಯ ಎಲ್ಲ ಪದಾಧಿಕಾರಿಗಳು, ಸದಸ್ಯರು ಪಾಲ್ಗೊಂಡು ಕಾರ್ತಿಕೋತ್ಸವದಲ್ಲಿ ದೀಪಗಳನ್ನು ಹೊತ್ತಿಸಿ, ಕಾರ್ತಿಕೋತ್ಸವವನ್ನು ಸಡಗರ, ಸಂಭ್ರಮದಿಂದ ಆಚರಿಸಿದರು.

# ಸಂಚಾರಿ ಇ–ಚಲನ್ ಹಾಗೂ ಸಾರಿಗೆ ಇಲಾಖೆಯಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ

**ಬಳ್ಳಾರಿ:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕೋರಿಕೆಯ ಮೇರೆಗೆ ರಾಜ್ಯ ಸರ್ಕಾರವು ಪೊಲೀಸ್ ಇಲಾಖೆಯ ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್ ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳು ಹಾಗೂ ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–20 ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.ಡಿಸೆಂಬರ್ 12 ರ ವರೆಗೆ ಈ ರಿಯಾಯಿತಿ ಸೌಲಭ್ಯವು ಇರಲಿದ್ದು, ಡಿಸೆಂಬರ್ 13 ರಂದು ನಡೆಯಲಿರುವ ರಾಷ್ಟ್ರೀಯ ಲೋಕ್ ಅದಾಲತ್ ಪ್ರಯುಕ್ತ ಈ ರಿಯಾಯಿತಿ ನೀಡಲಾಗಿದೆ. ಹಾಗಾಗಿ ಸಾರ್ವಜನಿಕರು ಈ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ

# ಕ್ರೀಡೆಯಲ್ಲಿ ಭಾಗವಹಿಸಿ ಮಾನಸಿಕ ಒತ್ತಡ ನಿವಾರಿಸಿಕೊಳ್ಳಿ: ಡಾ.ಬಸವರಾಜ ಕೆ.ಎನ್



**ಬಳ್ಳಾರಿ:** ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಮಾನಸಿಕ ಒತ್ತಡ ನಿವಾರಣೆಯಾಗಲಿದ್ದು, ಪೊಲೀಸ್ ಇಲಾಖೆಯ ಅಧಿಕಾರಿ-ಸಿಬ್ಬಂದಿ ಕ್ರೀಡೆಯಲ್ಲಿ ಭಾಗವಹಿಸಿ ತಮ್ಮ ಶಾರೀರಿಕ ಆರೋಗ್ಯ ಸದೃಢವಾಗಿಟ್ಟುಕೊಳ್ಳಬೇಕು ಎಂದು ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಬಸವರಾಜ ಕೆ.ಎನ್ ಅವರು ಹೇಳಿದರು.

ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ನ.19 ರಿಂದ ನ.21 ರ ವರೆಗೆ ನಡೆಯುವ ವಾರ್ಷಿಕ ಕ್ರೀಡಾಕೂಟಗಳಿಗೆ ಪಾರಿವಾಳ ಮತ್ತು ಬಲೂನ್ ಹಾರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಸೋಲು-ಗೆಲುವು ಸಾಮಾನ್ಯ. ಕ್ರೀಡೆಯಲ್ಲಿ ಗೆಲ್ಲುವುದಿಕ್ಕಿಂತ ಮುಖ್ಯವಾಗಿ ಭಾಗವಹಿಸುವುದು ಮುಖ್ಯ. ಎದುರಾಳಿಯ ಜೊತೆ ಗೌರವಪೂರ್ವಕವಾಗಿ ನಡೆದುಕೊಳ್ಳಬೇಕು. ಪ್ರತಿಯೊಬ್ಬರೂ ಕ್ರೀಡಾ ಮನೋಭಾವ ಹೊಂದಿ ಕ್ರೀಡೆಯ ನೀತಿ-ನಿಯಮಗಳನ್ನು ಪಾಲಿಸುವ ಮೂಲಕ ತೀರ್ಪುಗಾರರು ನೀಡುವ ತೀರ್ಪಿಗೆ ಬದ್ಧರಾಗಿರಬೇಕು ಎಂದರು.

ಪೊಲೀಸ್ ಇಲಾಖೆಯು ಸಮಾಜದಲ್ಲಿ ನಡೆಯುವ ಎಲ್ಲಾ ಸಮಸ್ಯೆಗಳಿಗೆ ನೇರವಾಗಿ ಮತ್ತು ಪರೋಕ್ಷವಾಗಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ನಡೆಯುವ ಸೈಬರ್ ಕ್ರೈಮ್, ಮಾದಕ ವಸ್ತು ಬಳಕೆ, ಅಕ್ರಮ ಸಾಗಾಣಿಕೆ ಇನ್ನಿತರೆ ಹೊಸ-ಹೊಸ ಅಪರಾಧ ಚಟುವಟಿಕೆಗಳ ಸವಾಲುಗಳನ್ನು ಪೊಲೀಸ್ ಇಲಾಖೆಯು ದಿನನಿತ್ಯ ಎದುರಿಸುತ್ತಾರೆ. ಇಂತಹ ಒತ್ತಡದ ಕೆಲಸಗಳ ನಡುವೆ ಮೂರು ದಿನಗಳ ಕಾಲ ನಡೆಯುವ ಕ್ರೀಡೆಯಲ್ಲಿ ಭಾಗವಹಿಸುವ ಮೂಲಕ ದೈನಂದಿನ ಒತ್ತಡ ಕೆಲಸ ಕಾರ್ಯದಿಂದ ವಿಮುಕ್ತರಾಗಿ ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಾರ್ವಜನಿಕರ ಪ್ರತಿಯೊಂದು ಸಮಸ್ಯೆಗಳಿಗೆ ಪೊಲೀಸ್ ಇಲಾಖೆಯ ಅಗತ್ಯತೆ ಇದ್ದು, ಜನರು ನಮ್ಮ ಮೇಲೆ ಇಟ್ಟಿರುವ ನಂಬಿಕೆಗೆ ಉತ್ತಮ ರೀತಿಯಲ್ಲಿ ಅವರ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ನೀಡಬೇಕು ಎಂದರು.

ಕೆಲಸದ ಒತ್ತಡದ ನಡುವೆ ವರ್ಷಪೂರ್ತಿ ಕಾರ್ಯನಿರ್ವಹಿಸುವ ಪೊಲೀಸ್ ಅಧಿಕಾರಿ, ಸಿಬ್ಬಂದಿ ಮೂರು ದಿನಗಳ ಕಾಲ ನಡೆಯುವ ವಾರ್ಷಿಕ ಕ್ರೀಡೆಯಲ್ಲಿ ಪ್ರತಿಯೊಬ್ಬರೂ ಕ್ರೀಡಾ ಮನೋಭಾವದಿಂದ ಭಾಗವಹಿಸಿ ಒತ್ತಡ ನಿವಾರಿಸಿಕೊಳ್ಳಬಹುದು ಎಂದು ಹೇಳಿದರು.

ಕಳೆದ ಬಾರಿಯ ವಾರ್ಷಿಕ ಕ್ರೀಡಾಕೂಟದ ಚಾಂಪಿಯನ್ ಕೃಷ್ಣನಾಯಕ್ ಅವರು ಕ್ರೀಡಾ ಜ್ಯೋತಿಯನ್ನು ಅತಿಥಿಗಳಿಗೆ ನೀಡಿ ಬೆಳಗಿಸಿದರು.

*ಆಕರ್ಷಕ ಪಥಸಂಚಲನ:*

ಬಳ್ಳಾರಿ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ-2025ರ ಅಂಗವಾಗಿ ಬಳ್ಳಾರಿ ಉಪವಿಭಾಗದ ತುಂಗಾ ತಂಡ, ಬಳ್ಳಾರಿ ನಗರ ಕೋಟೆ ತಂಡ, ಮಹಿಳಾ ವಿಭಾಗದ ದುರ್ಗಾ ತಂಡ, ಸಿರುಗುಪ್ಪ ಉಪ ವಿಭಾಗದ ವೇದಾವತಿ ತಂಡ, ತೋರಣಗಲ್ಲು ಉಪ ವಿಭಾಗದ ಸ್ಕಂದಗಿರಿ ತಂಡ, ಸಂಸ್ಕೃತಿ ತಂಡ ಒಟ್ಟು 6 ತಂಡಗಳಿಂದ ಆಕರ್ಷಕ ಪಥಸಂಚಲನ ನಡೆಯಿತು.

*ವಿವಿಧ ಸ್ಪರ್ಧೆಗಳು:*

ಪೊಲೀಸ್ ಪುರುಷ ಸಿಬ್ಬಂದಿಗಳಿಗಾಗಿ 800 ಮೀಟರ್ ಓಟ, ಪುರುಷ ಮತ್ತು ಮಹಿಳಾ ಸಿಬ್ಬಂದಿಗಳಿಗಾಗಿ 100 ಮೀಟರ್ ಓಟ, ಉದ್ದ ಜಿಗಿತ, ಪುರುಷರಿಗಾಗಿ ಜಾವೆಲಿನ್ ಥ್ರೋ, ಕಬ್ಬಡ್ಡಿ, ಟಾಗ್ ಆಫ್ ವಾರ್ ಮತ್ತು ಇತರೆ ಸ್ಪರ್ಧೆಗಳು.

ಪೊಲೀಸ್ ಅಧಿಕಾರಿಗಳಿಗಾಗಿ 100 ಮೀಟರ್ ವಾಕ್, ಗುಂಡು ಎಸೆತ, ಎತ್ತರ ಜಿಗಿತ, ಜಾವೆಲಿನ್ ಥ್ರೋ, ವಾಲಿ ವಾಲ್, 100 ಮೀಟರ್ ಓಟ, 400 ಮೀಟರ್ ಓಟ ಮತ್ತು ಇತರೆ ಸ್ಪರ್ಧೆಗಳು. ಗುಂಪು ಸ್ಪರ್ಧೆಗಳಲ್ಲಿ ಕಬಡ್ಡಿ, ವಾಲಿ ಬಾಲ್, ಮ್ಯೂಜಿಕಲ್ ಚೇರ್, ಲೇಮನ್ ಸ್ಪೂನ್ ಮತ್ತು ಇತರೆ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ನವೀನ್ ಕುಮಾರ್, ಕೆ.ಪಿ.ರವಿಕುಮಾರ್ ಸೇರಿದಂತೆ ಜಿಲ್ಲೆಯ ಡಿವೈಎಸ್‌ಪಿ, ಸಿಪಿಐ, ಪಿಎಸ್‌ಐ ಪೊಲೀಸ್ ಅಧಿಕಾರಿಗಳು, ನಿವೃತ್ತ ಅಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ, ಕ್ರೀಡಾ ಪಟುಗಳು ಹಾಗೂ ಕುಟುಂಬ ವರ್ಗ, ಸಾರ್ವಜನಿಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸಸಿ ನೆಡುವ ಹವ್ಯಾಸ ಬೆಳೆಸಿಕೊಳ್ಳಿ: ಪ್ರಾಂಶುಪಾಲ ಉಮೇಶ್



**ಶಿವಮೊಗ್ಗ:** ವಿದ್ಯಾರ್ಥಿಗಳು ತಮ್ಮ ಬಿಡುವಿನ ಸಮಯದಲ್ಲಿ ಮೊಬೈಲ್ ಮೂಲಕ ವಾಟ್ಸಪ್, ಫೇಸ್‌ಬುಕ್, ಟ್ವಿಟರ್, ಇನ್ಸ್ಟಾಗ್ರಾಮ್ ಮತ್ತಿತರೆ ನೆಟ್‌ವರ್ಕಿಂಗ್ ಸೇವೆ, ಅಪ್ಲಿಕೇಷನ್ (ಆ್ಯಪ್), ಫ್ಲಾಟ್‌ಫಾರಂಗಳ ಮೂಲಕ ಫೋಟೋ, ವಿಡಿಯೋಗಳ ಹಂಚಿಕೆ, ಫಿಲ್ಟರ್, ಹ್ಯಾಶ್‌ಟ್ಯಾಗ್‌ಗಳಿಗಷ್ಟೇ ಸೀಮಿತಗೊಳ್ಳದೆ ಸಸಿ ನೆಟ್ಟು ಅವುಗಳನ್ನು ಮರವನ್ನಾಗಿ ಬೆಳೆಸುವಂತಹ ಹವ್ಯಾಸ ಬೆಳೆಸಿಕೊಳ್ಳಬೇಕೆಂದು ಡಿವಿಎಸ್ ಸಂಯುಕ್ತ ಪಿಯು ಕಾಲೇಜಿನ ಪ್ರಾಂಶುಪಾಲ ಎಸ್.ಕೆ. ಉಮೇಶ್ ಕರೆ ನೀಡಿದರು.

ನವ್ಯಶ್ರೀ ಈಶ್ವರವನ ಚಾರಿಟಬಲ್ ಟ್ರಸ್ಟ್‌ನ ವತಿಯಿಂದ ತಾಲೂಕಿನ ಅಬ್ಬಲಗೆರೆಯಲ್ಲಿ ನಿರ್ಮಿಸಿರುವ ಈಶ್ವರವನದಲ್ಲಿ ಮಂಗಳವಾರ ಮಧ್ಯಾಹ್ನ ಹಮ್ಮಿಕೊಂಡಿದ್ದ 'ಪರಿಸರ ಪಾಠ' ಮತ್ತು ಪರಿಸರ ಕುರಿತ ರಸಪ್ರಶ್ನೆ ವಿಜೇತ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ಬಹುಮಾನವಾಗಿ ನೀಡುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ಹಿಂದೆ ವಿದ್ಯಾರ್ಥಿಗಳು ಬಿಡುವಿನ ವೇಳೆಯಲ್ಲಿ ಚಿತ್ರಕಲೆ, ಸಂಗೀತ, ಬರವಣಿಗೆ, ಛಾಯಾಗ್ರಹಣದಂತಹ ಸೃಜನಶೀಲ ಹವ್ಯಾಸಗಳನ್ನು ರೂಢಿಸಿಕೊಳ್ಳುತ್ತಿದ್ದರು. ದೈಹಿಕ ಸಾಮರ್ಥ್ಯ ಹೆಚ್ಚಿಸುವ ಆಟಗಳು, ಬುದ್ಧಿಮತ್ತೆಯನ್ನು ಬೆಳಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುತ್ತಿದ್ದರು. ಇವು ನಮ್ಮ ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಸುಧಾರಿಸಿ ಮಾನಸಿಕ ಒತ್ತಡ ಕಡಿಮೆ ಮಾಡುತ್ತಿದ್ದವು. ಆದರೆ ಬದಲಾದ ಕಾಲಘಟ್ಟದಲ್ಲಿ ಮೊಬೈಲ್ ಬಳಕೆ ವಿದ್ಯಾರ್ಥಿಗಳ ಹವ್ಯಾಸವಾಗಿದೆ. ಮಿತಿಮೀರಿದ ಮೊಬೈಲ್ ಬಳಕೆಯಿಂದ ಆತಂಕ ಹಾಗೂ ಖಿನ್ನತೆಯಂತಹ ಮಾನಸಿಕ ಸಮಸ್ಯೆಗಳು ಉಂಟಾಗುತ್ತವೆ ಎಂದು ಎಚ್ಚರಿಸಿದರು.ಹವ್ಯಾಸಗಳು ಮೆದುಳನ್ನು ಉತ್ತೇಜಿಸಿ, ಒತ್ತಡದಿಂದ ಮನಸ್ಸಿಗೆ ಮುದ ನೀಡುವಂತಿರಬೇಕು. ಹವ್ಯಾಸದಿಂದ ಕಲಿತ ಹೊಸ ಕೌಶಲ್ಯಗಳು ಆತ್ಮವಿಶ್ವಾಸ ಹೆಚ್ಚಿಸುವಂತಿರಬೇಕು. ವಿದ್ಯಾರ್ಥಿಗಳು ಸಸಿ ನೆಡುವಿಕೆ, ಹಸಿರೀಕರಣ, ಪಾರ್ಕ್‌ಗಳ ಸ್ವಚ್ಛತೆ, ಮನೆ, ಶಾಲಾ-ಕಾಲೇಜಿನ ಸುತ್ತಮುತ್ತ ಕೈತೋಟ ನಿರ್ವಹಿಸುವಂತಹ ಹವ್ಯಾಸ ಬೆಳೆಸಿಕೊಂಡಲ್ಲಿ ಪರಿಸರಕ್ಕಷ್ಟೇ ಅಲ್ಲ ಅವರ ಭವಿಷ್ಯಕ್ಕೂ ಒಳ್ಳೆಯದಾಗುತ್ತದೆ ಎಂದು ಕಿವಿ ಮಾತು ಹೇಳಿದರು.

ನವ್ಯಶ್ರೀ ಈಶ್ವರವನ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ ನವ್ಯಶ್ರೀ ನಾಗೇಶ್, ಪ್ರದೀಪ್ ಪಿ., ಉಪನ್ಯಾಸಕರುಗಳಾದ ಸಂದೇಶ್, ಮನೋಹರ್, ಆಶಾ, ದೀಕ್ಷಾ, ಸಂದೀಪ್ ನಾಡಿಗ್, ಬೋಧಕೇತರ ಸಿಬ್ಬಂದಿ ಶ್ರೀನಿಧಿ, ನವ್ಯಶ್ರೀ ಅನ್ನಪೂರ್ಣದ ಆರ್.ಕೆ. ಸತೀಶ್, ನವ್ಯಶ್ರೀ ಅನ್ನದಾನಂನ ಸಂತೋಷ್ ಎಲಿಗಾರ್ ಮತ್ತಿತರರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ವೃಕ್ಷಮಾತೆ ಸಾಲುಮರದ ತಿಮ್ಮಕ್ಕನವರ ನಿಧನಕ್ಕೆ ಸಂತಾಪ ಸೂಚಿಸಿ ಮೌನಾಚರಿಸಲಾಯಿತು. ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

# ಸ್ಕೇಟಿಂಗ್ ತಂಡದ ಹಿತಾ ರಾಷ್ಟ್ರಮಟ್ಟಕ್ಕೆ ಆಯ್ಕೆ

**ಶಿವಮೊಗ್ಗ:** ಕರ್ನಾಟಕ ರಾಜ್ಯ ರೋಲರ್ ಸಂಸ್ಥೆ ನಡೆಸಿದ ರಾಜ್ಯ ಮಟ್ಟದ ಸ್ಕಂಟಿಂಗ್ ಆಯ್ಕೆ ಸ್ಪರ್ಧೆಯಲ್ಲಿ ನಮ್ಮ ಶಿವಮೊಗ್ಗ ರೋಲರ್ ಸ್ಕಂಟಿಂಗ್ ಅಸೋಸಿಯೇಶನ್ ನ ಕ್ರೀಡಾಪಟು ಹಿತಾ 2 ಬೆಳ್ಳಿ ಪದಕ ಗೆದ್ದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುತ್ತಾಳೆ.

ಹಿತಾ ಪ್ರವೀಣ್ 6-8 ವಯೋಮಿತಿಯ ಸ್ಪರ್ಧೆಯಲ್ಲಿ ಬಾಗವಹಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುತ್ತಾಳೆ.



ಹಿತಾ ಗೋಪಾಳದ ಕ್ರೀಡಾ ಸಂಕೀರ್ಣದಲ್ಲಿ ನಮ್ಮ ಶಿವಮೊಗ್ಗ ಸ್ಕೇಟಿಂಗ್ ಸಂಸ್ಥೆಯ ತರಬೇತುದಾರರಾದ ವಿಶ್ವಾಸ್ ಹಾಗು ಆತೀಶ್ ರವರಿಂದ ಕಲಿಯುತ್ತಿದ್ದಾರೆ.

ಸೌಮ್ಯ ಹಾಗು ಪ್ರವೀಣ್ ದಂಪತಿಯ ಪುತ್ರಿಯಾದ ಹಿತಾ ಸಾಧನೆಗೆ ನಮ್ಮ ಶಿವಮೊಗ್ಗ ಸ್ಕೇಟಿಂಗ್ ಸಂಸ್ಥೆ ಅಭಿನಂದಿಸಿದೆ.

# ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರ ಸೌಲಭ್ಯ ಅರಿವು ಹೊಂದಿ

**ಬಳ್ಳಾರಿ:** ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರ ಸೌಲಭ್ಯಗಳ ಕುರಿತು ಅರಿವು ಹೊಂದಬೇಕು ಎಂದು ಲೀಡ್ ಬ್ಯಾಂಕ್‌ನ ಜಿಲ್ಲಾ ಮುಖ್ಯ ವ್ಯವಸ್ಥಾಪಕರು ಹಾಗೂ ಶಾಖಾ ವ್ಯವಸ್ಥಾಪಕ ಗಿರೀಶ್ ವಿ.ಕುಲಕರ್ಣಿ ಅವರು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾ ಕೈಗಾರಿಕಾ ಕೇಂದ್ರ, ವತಿಯಿಂದ ಆರ್‌ಎಎಂಪಿ ಯೋಜನೆಯಡಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು ಯೋಜನೆ ಕುರಿತು ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಒಂದು ದಿನದ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೆಎಸ್‌ಎಫ್‌ಸಿಯ ಡಾ.ಚಂದ್ರಪ್ಪ ಎಂ.ಎಸ್ ಅವರು ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು ಕುರಿತು ಮಾತನಾಡಿದರು.

ಕಾರ್ಯಾಗಾರದಲ್ಲಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು (ಬಿ.ಡಿ.ಎಸ್.ಪಿ) ಸೌಲಭ್ಯಗಳು, ಯಶಸ್ಸಿನ ಕಥೆಗಳ ಬಗ್ಗೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರ ಉಪನಿರ್ದೇಶಕ ಬಿ.ಜಿ.ರಂಗನಾಥ್, ಸಿ.ಬಿ. ಆರ್ಸೆಟ್ ನಿರ್ದೇಶಕ ರಾಜಾಸಾಬ್ ಹೆಚ್.ಇ., ಸಂಪನ್ಮೂಲ ವ್ಯಕ್ತಿ ಪ್ರಸನ್ನ, ಸಿಡಾಕ್ ತರಬೇತಿ ಅಧಿಕಾರಿ ವಿನೋದ್ ಕುಮಾರ್, ಆರ್‌ಸೆಟ್‌ಇ ತರಬೇತಿ ಅಧಿಕಾರಿ ಜಡೆಪ್ಪ ಸೇರಿದಂತೆ ಉದ್ದಿಮೆದಾರರು ಭಾಗವಹಿಸಿದ್ದರು.

# 23 ನಿಮಿಷದಲ್ಲಿ 450 ಮೆಟ್ಟಿಲು ಹತ್ತಿ ಇಂಡಿಯಾ ಬುಕ್ ಆಫ್‌ರೆಕಾರ್ಡ್‌ಗೆ ಸೇರಿದ 2 ವರ್ಷದ ಮಗು



**ತುಮಕೂರು :** ತಾಲ್ಲೂಕು ಪಂಡಿತನಹಳ್ಳಿ ಬಳಿಯಿರುವ ಮಂದಾರಗಿರಿ ಬೆಟ್ಟದಲ್ಲಿರುವ ಗುರು ಮಂದಿರ ದೇವಾಲಯದ 450 ಮೆಟ್ಟಿಲುಗಳನ್ನು 23 ನಿಮಿಷ 8 ಸೆಕೆಂಡುಗಳಲ್ಲಿ ಹತ್ತುವ ಮೂಲಕ ಇಂಡಿಯಾ ಬುಕ್ ರೆಕಾರ್ಡ್ ಪ್ರಶಸ್ತಿಗೆ ಪಾತ್ರವಾದ ಎರಡು ವರ್ಷದ ಭುವನ್ ರೆಡ್ಡಿ.

ಅನುಷಾ ಮತ್ತು ರೆಡ್ಡಿ ಜಗದೀಶ್ ದಂಪತಿ ಪುತ್ರನಾದ ಭುವನ್ ರೆಡ್ಡಿಗೆ ಇಂಡಿಯಾ ಬುಕ್ ರೆಕಾರ್ಡ್ ಕೀರ್ತಿಗೆ ಪಾತ್ರನಾಗಿರುವ ಈ ಮಗು. ಭಾರತೀಯ ವಿಶ್ವ ದಾಖಲೆಯ ಪ್ರಮಾಣ ಪತ್ರವನ್ನು ಸಹ ಕಳದ ಜನವರಿಯಲ್ಲಿ ಮುಡಿಗೆರಿಸಿಕೊಂಡಿದ್ದ.

ಈ ಪ್ರಶಸ್ತಿ ಪಡೆಯುವಾಗ ಭುವನ್ ರೆಡ್ಡಿಗೆ 1 ವರ್ಷ 4 ತಿಂಗಳಾಗಿತ್ತು, ಚಿಕ್ಕ ವಯಸ್ಸಿನಲ್ಲಿಯೇ ಪ್ರಾಯೋಗಿಕವಾಗಿ ಬಹು ಕಲಿಕಾ ಚಟುವಟಿಕೆಗಳೊಂದಿಗೆ ಅದ್ಭುತ ಸಾಧನೆಗಳನ್ನು ಡಿ. ಭುವನ್ ರೆಡ್ಡಿ ಮಾಡಿದ್ದಾನೆ.

ಇಂಡಿಯನ್ ಬುಕ್ ರೆಕಾರ್ಡ್ ಬರಿಗಾಲಿನಲ್ಲಿ ನಡೆದ ಮೊದಲ ಭಾರತೀಯ ಮಗು ಎಂಬ ಕೀರ್ತಿಗೆ ಭುವನ್ ರೆಡ್ಡಿ ಪಾತ್ರನಾಗಿದ್ದಾನೆ. ನ್ಯಾಯಾಧೀಶರಾದ ಕೆ. ಮಾಧವ ರೆಡ್ಡಿ, ಡಾ. ಜೆ. ಪಾವನಿ ಮತ್ತು ಡಾ. ಕೆ. ಸ್ವರ್ಣಶ್ರೀ ಅವರು ಹೈದರಾಬಾದ್‌ನಲ್ಲಿ ಇಂಡಿಯನ್ ಬುಕ್ ರೆಕಾರ್ಡ್‌ನಲ್ಲಿ ತೀರ್ಪು ನೀಡಿದ್ದಾರೆ.ಮುಂಬರುವ ವರ್ಷಗಳಲ್ಲಿ ಭುವನ್ ರೆಡ್ಡಿ ಇನ್ನಷ್ಟು ಸ್ಫೂರ್ತಿದಾಯಕ ಮೈಲಿಗಲ್ಲುಗಳನ್ನು ಸಾಧಿಸಲಿ ಎಂದು ಹಾರೈಸಿದ್ದಾರೆ.

# ವನ್ಯಜೀವಿ-ನಿಸರ್ಗ ಸಂರಕ್ಷಣೆ ಅರಿವು ಕಾರ್ಯಕ್ರಮ





**ಚಿಕ್ಕಮಗಳೂರು:** ಶಾಲಾ ಕಾಲೇಜು ವಿದ್ಯಾರ್ಥಿಗಳಲ್ಲಿ ವನ್ಯಜೀವಿಗಳ ಬದುಕು ಹಾಗೂ ನಿಸರ್ಗದ ವೈಚಿತ್ರ್ಯಗಳು ಮತ್ತು ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಜಿಲ್ಲೆಯ ವೈಲ್ಡ್ ಕ್ಯಾಟ್-ಸಿ ತಂಡ 19 ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ 17 ದಿನಗಳ ಕಾಲ ನಡೆಸಿತು.

ಅಕ್ಟೋಬರ್ 27 ರಿಂದ ನವೆಂಬರ್ 15 ರವರೆಗೆ ನಡೆದ ಈ ಕಾರ್ಯಕ್ರಮದಲ್ಲಿ ಪೂರ್ವ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಂದ ಆರಂಭವಾಗಿ ಕಾಲೇಜು ಮತ್ತು ಸಾರ್ವಜನಿಕರವರೆಗೂ ನಡೆದಿದ್ದು, ಪ್ರತೀ ಕಾರ್ಯಕ್ರಮದಲ್ಲೂ ವಿದ್ಯಾರ್ಥಿಗಳನ್ನು ಒಳಗೊಂಡಂತೆ ಸಾರ್ವಜನಿಕರು ಸಹ ಆಸಕ್ತಿಯಿಂದ ಭಾಗವಹಿಸಿದ್ದರು.

ಕಾರ್ಯಕ್ರಮ ಕಾಡಿನ ಸಂದರ್ಶನದ ಮೂಲಕವೇ ಆರಂಭವಾಯಿತು. ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಭದ್ರಾ ಅಭಯಾರಣ್ಯಕ್ಕೆ ಕರೆದೊಯ್ದು ಅಭಯಾರಣ್ಯದ ಉದ್ದೇಶ ಹಾಗೂ ಪ್ರಾಮುಖ್ಯತೆ ಜೊತೆಗೆ ವನ್ಯಜೀವಿಗಳ ಹಾಗೂ ಪ್ರಕೃತಿಯ ವಿಶೇಷತೆಗಳನ್ನು ಮತ್ತು ಮನುಷ್ಯ ಬದುಕಿಗೆ ಅವುಗಳ ಅನಿವಾರ್ಯತೆಯನ್ನು ಮನನ ಮಾಡಲಾಯಿತು.

ವಿದ್ಯಾರ್ಥಿಗಳು ಅಭಯಾರಣ್ಯದಲ್ಲಿ ಪ್ರಾಣಿ-ಪಕ್ಷಿಗಳ ಜೊತೆಗೆ ನಿಸರ್ಗದ ವೈವಿಧ್ಯತೆಗಳನ್ನು ಅರಿಯುವುದರ ಜೊತೆಗೆ ಅವರಿಂದಲೇ ಮಣ್ಣಿನಲ್ಲಿ ಪ್ರಾಣಿ-ಪಕ್ಷಿಗಳ ಪ್ರತಿಕೃತಿ ರಚಿಸುವ ಕಾರ್ಯಕ್ರಮವನ್ನು ನಗರದಲ್ಲಿ ಏರ್ಪಡಿಸಿದ್ದು, ಇದರಲ್ಲಿ ಸಾರ್ವಜನಿಕರು ಸೇರಿದಂತೆ 111 ಮಂದಿ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಪಕ್ಷಿಗಳು, ಹುಲಿ-ಸಿಂಹ, ಹುತ್ತ ಮತ್ತು ಹಾವು, ಆಮೆ, ಜಿಂಕೆ ಮತ್ತು ಮೊಸಳೆ ಈ ರೀತಿ ಆಕೃತಿಗಳನ್ನು ರಚಿಸುವ ಸ್ಪರ್ಧೆ ಏರ್ಪಡಿಸಿದ್ದು, ಅತ್ಯಂತ ಆಕರ್ಷಕ ಪ್ರತಿಕೃತಿಗಳು ಮೂಡಿ ಬಂದವು.

ವಿದ್ಯಾರ್ಥಿಗಳು ಪ್ರಕೃತಿ ಹಾಗೂ ಪ್ರಾಣಿ, ಪಕ್ಷಿಗಳ ಬಗ್ಗೆ ಚಿಂತಿಸಿ ಪರಿಸರ ಸಂರಕ್ಷಣೆ ಬಗ್ಗೆ ಯೋಚಿಸುವ ನಿಟ್ಟಿನಲ್ಲಿ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಿದ್ದು, ಈ ಕಾರ್ಯಕ್ರಮದಲ್ಲಿ ಒಟ್ಟು ಶಾಲಾ ಕಾಲೇಜುಗಳ 61 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ವಿದ್ಯಾರ್ಥಿಗಳಲ್ಲಿ ಪರಿಸರ ಪ್ರಜ್ಞೆ ಮೂಡಿರುವುದನ್ನು ಅಳೆಯುವ ರಸಪ್ರಶ್ನೆ ಸ್ಪರ್ಧೆಯಲ್ಲಿ ಶಾಲಾ ಕಾಲೇಜುಗಳ 51 ವಿದ್ಯಾರ್ಥಿಗಳು 17 ತಂಡಗಳಲ್ಲಿ ಭಾಗವಹಿಸಿದ್ದರು. ಭಾರತದ ವನ್ಯಪ್ರಾಣಿಗಳ ಜೊತೆಗೆ ಪ್ರತ್ಯೇಕವಾಗಿ ಜಿಲ್ಲೆಯ ವನ್ಯಜೀವಿ ಹಾಗೂ ಪರಿಸರದ ಪ್ರಶ್ನೆಗಳನ್ನು ಕೇಳಲಾಗಿತ್ತು.

ಸಾಂಪ್ರದಾಯಿಕವಾಗಿ ಪ್ರಾಣಿ, ಪಕ್ಷಿಗಳನ್ನು ಚಿತ್ರಿಸುವ ರಂಗೋಲಿ ಸ್ಪರ್ಧೆ ಏರ್ಪಡಿಸಿದ್ದು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸೇರಿ ಒಟ್ಟು 19 ಸ್ಪರ್ಧಿಗಳು ಬಣ್ಣ ಬಣ್ಣದ ರಂಗೋಲಿಯಲ್ಲಿ ವನ್ಯಜೀವಿಗಳ ಚಿತ್ತಾರ ಮೂಡಿಸಿದ್ದರು. ಆಶುಭಾಷಣ ಸ್ಪರ್ಧೆಯಲ್ಲಿ 31 ಮಂದಿ ವಿದ್ಯಾರ್ಥಿಗಳು ಭಾಗವಹಿಸಿ ಪರಿಸರದ ಅರಿವು ಹಾಗೂ ತಮ್ಮ ವಾಕ್ ಪ್ರತಿಭೆಯನ್ನು ಪ್ರದರ್ಶಿಸಿದರು.

ಅತೀ ಹೆಚ್ಚು ಸ್ಪರ್ಧಿಗಳನ್ನು ಆಕರ್ಷಿಸಿದ್ದು ಚಿತ್ರ ಬರೆಯುವ ಸ್ಪರ್ಧೆ. ಈ ಸ್ಪರ್ಧೆಯಲ್ಲಿ 534 ವಿದ್ಯಾರ್ಥಿಗಳು ಭಾಗವಹಿಸಿ ಕುಂಚದಲ್ಲಿ ತಮ್ಮದೇ ಆದ ಕಲ್ಪನೆ ಬೆರೆಸಿ ಪ್ರಾಣಿ, ಪಕ್ಷಿ ಹಾಗೂ ಪ್ರಕೃತಿಯನ್ನು ಕಡೆದಿಟ್ಟರು. ಡ್ರಾಯಿಂಗ್ ಶೀಟ್‌ಗಳ ಮೇಲೆ ಪ್ರಾಣಿ, ಪಕ್ಷಿಗಳನ್ನು ಚಿತ್ರಿಸುವುದರ ಜೊತೆಗೆ ಭಾರತದ ಪ್ರಾಣಿಗಳ ಮುಖ ಚಿತ್ರವನ್ನು ರಚಿಸುವ ಸ್ಪರ್ಧೆಯಲ್ಲೂ ವಿದ್ಯಾರ್ಥಿಗಳ ಭಾಗವಹಿಸುವಿಕೆ ಉತ್ತಮವಾಗಿತ್ತು. ಈ ಸ್ಪರ್ಧೆಯಲ್ಲಿ ಪ್ರೌಢಶಾಲೆಯಿಂದ 64 ಮಂದಿ ಮತ್ತು ಕಾಲೇಜಿನಿಂದ ನಾಲ್ವರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪರಿಸರ ಸಂರಕ್ಷಣೆ ಬಗ್ಗೆ ಆಯೋಜಿಸಿದ್ದ ಕಿರುನಾಟಕ ಸ್ಪರ್ಧೆಯಲ್ಲಿ ತಲಾ ಐವರಿದ್ದ ಏಳು ತಂಡಗಳು ಭಾಗವಹಿಸಿದ್ದವು. ಪರಿಸರ ಗೀತೆಗಳ ಗಾಯನ ಸ್ಪರ್ಧೆಯಲ್ಲಿ 38 ಮಂದಿ ಗಾಯಕರು ಭಾಗವಹಿಸಿ ಮನ ರಂಜಿಸಿದರು. ಆಶುಭಾಷಣ ಸ್ಪರ್ಧೆಯಲ್ಲಿ 23 ಮಂದಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳು ತಮಗೆ ಬಂದ ವಿಷಯದ ಬಗ್ಗೆ ಮಾತನಾಡಿದರು. ಪರಿಸರದ ಬಗೆಗಿನ ಛಾಯಾಚಿತ್ರ ಹಾಗೂ ಎರಡು ನಿಮಿಷದ ಕಿರುಚಿತ್ರ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

'ಸೈಕಲ್ ತುಳಿ; ಪರಿಸರ ತಿಳಿ' ಕಾರ್ಯಕ್ರಮ ನಗರದ ಪ್ರೌಢಶಾಲೆಯ ವಿದ್ಯಾರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸೆಳೆಯಿತಲ್ಲದೆ, ಒಟ್ಟು 35 ತಂಡಗಳಿಂದ 158 ಶಾಲಾ ಮಕ್ಕಳು ಭಾಗವಹಿಸಿ ನಗರದಿಂದ 20.6 ಕಿ.ಮೀ. ಗ್ರಾಮೀಣ ರಸ್ತೆಗಳಲ್ಲಿ ತೆರಳಿ ಅವರಿಗೆ ಪ್ರಶ್ನೆಪತ್ರಿಕೆ ಆಧರಿಸಿ ತಾವು ನೋಡಿದ ಪ್ರಾಣಿ, ಪಕ್ಷಿ ಹಾಗೂ ಪರಿಸರಕ್ಕೆ ಸಂಬಂಧಿಸಿದ ವೈವಿಧ್ಯತೆಗಳನ್ನು ದಾಖಲಿಸಿದ್ದು, ಐದು ತಂಡಗಳ ಅತ್ಯುತ್ತಮ ಗ್ರಹಿಕೆ ಪರಿಗಣಿಸಿ ಬಹುಮಾನ ನೀಡಲಾಯಿತು. ಒಟ್ಟು ಸ್ಪರ್ಧೆಗಳಲ್ಲಿ 1300 ವಿದ್ಯಾರ್ಥಿಗಳು ಭಾಗವಹಿಸಿದ್ದು ವಿಶೇಷವಾಗಿತ್ತು.ಅರಣ್ಯ ಇಲಾಖೆಯ ಸಹಕಾರದೊಂದಿಗೆ ನಡೆದ ಈ ಅರಿವು ಮೂಡಿಸುವ ಕಾರ್ಯಕ್ರಮವನ್ನು ಅಕ್ಟೋಬರ್ 27 ರಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ತಿಮ್ಮರಾಜು ಉದ್ಘಾಟಿಸಿದರೆ, ನವೆಂಬರ್ 15ರ ಸೈಕಲ್ ತುಳಿ-ಪರಿಸರ ತಿಳಿ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಉದ್ಘಾಟಿಸಿದರು.

# ಯುವಚೇತನ ಪ್ರತಿಭೋತ್ಸವ : ಜ್ಞಾನರಶ್ಮಿ ಶಾಲೆಗೆ ಸಮಗ್ರ ಪ್ರಶಸ್ತಿ




**ಚಿಕ್ಕಮಗಳೂರು:** (ಪಿಎನ್‌ಬಿ) ಪ್ರತಿಭೋತ್ಸವ 'ಯುವ ಚೇತನ 2025-26' ಸಮಗ್ರ ಪ್ರಶಸ್ತಿಯನ್ನು ಉಪ್ಪಳ್ಳಿಯ ಜ್ಞಾನರಶ್ಮಿ ಇಂಗ್ಲೀಷ್ ಪ್ರೌಢಶಾಲೆ ಮುಡಿಗೇರಿಸಿಕೊಂಡಿದೆ.

ಚಿಕ್ಕಮಗಳೂರು ರೋಟರಿ ಕ್ಲಬ್ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಏಳು ವಿಧದ ಸ್ಪರ್ಧೆಗಳನ್ನು ನಡೆಸಿತ್ತು. 21 ಪ್ರೌಢಶಾಲೆಗಳ 350ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಪಾಲ್ಗೊಂಡಿದ್ದರು. ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಯುವಚೇತನ ಉದ್ಘಾಟಿಸಿದ್ದರು.

ನಾಲ್ಕು ವಿಭಾಗದ ಪ್ರಥಮ ಬಹುಮಾನದ ಜೊತೆಗೆ ಟ್ರೋಫಿ ತನ್ನದಾಗಿಸಿಕೊಂಡಿದ್ದ ಜ್ಞಾನರಶ್ಮಿ ತಂಡ ಒಟ್ಟು 90 ಅಂಕ ಗಳಿಸುವ ಮೂಲಕ ಅಗ್ರಸ್ಥಾನ ಪಡೆದು ಸಮಗ್ರ ಪ್ರಶಸ್ತಿಗೆ ಭಾಜನವಾಯಿತು.

ಸಮೂಹ ನೃತ್ಯ ಸ್ಪರ್ಧೆಯಲ್ಲಿ ಸತತವಾಗಿ 4ನೆಯ ವರ್ಷದಲ್ಲಿ ಸಾಯಿಏಂಜೆಲ್ಸ್ ಶಾಲಾ ತಂಡ ಪ್ರಥಮಸ್ಥಾನ ಕಾಪಿಟ್ಟುಕೊಂಡು ಟ್ರೋಫಿ ತನ್ನದಾಗಿಸಿಕೊಂಡರೆ, ತೀವ್ರ ಪೈಪೋಟಿ ಒಡ್ಡಿದ್ದ ಸೆಂಟ್ ಮೇರೀಸ್ ಶಾಲಾತಂಡ ದ್ವಿತೀಯಸ್ಥಾನಕ್ಕೆ ತೃಪ್ತಿ ಪಡಬೇಕಾಯಿತು. ಜ್ಞಾನರಶ್ಮಿ ತಂಡ ತೃತೀಯಸ್ಥಾನ ಗಳಿಸಿದ್ದು ಫ್ರೈಡ್‌ಯೂರೋ ತಂಡ ಸಮಾಧಾನಕರ ಬಹುಮಾನ ಗಳಿಸಿತು.ಪರಿಸರ ರಸಪ್ರಶ್ನೆ ವಿಭಾಗದಲ್ಲಿ ಐ.ಸಿ.ವಿಶ್ವಾಸ್ ನೇತೃತ್ವದ ಜ್ಞಾನರಶ್ಮಿ ತಂಡ ಪ್ರಥಮಸ್ಥಾನ ಗಳಿಸಿದ್ದು, 3ನೆಯ ವರ್ಷವೂ ಟ್ರೋಫಿ ತನ್ನದಾಗಿಸಿಕೊಂಡಿದೆ. ನರ್ಚರ್ ಇಂಟರನ್ಯಾಷನಲ್ ಶಾಲೆಯ ಧೃತಿ ತಂಡ ದ್ವಿತೀಯ ಬಹುಮಾನ ಗಳಿಸಿದರೆ, ಕುವೆಂಪು ವಿದ್ಯಾನಿಕೇತನದ ಪಕ್ಷಾಕೃಷ್ಣನ್ ತಂಡ ತೃತೀಯ ಬಹುಮಾನಕ್ಕೆ ತೃಪ್ತಿ ಪಡಬೇಕಾಯಿತು.

ಸಾಮಾನ್ಯ ರಸಪ್ರಶ್ನೆ ಸ್ಪರ್ಧೆಯಲ್ಲಿ ಅಂಬರ್‌ವ್ಯಾಲಿ ಶಾಲೆಯ ಪ್ರಣವ್‌ರೆಡ್ಡಿ ಪ್ರಥಮ, ಜ್ಞಾನರಶ್ಮಿ ಶಾಲೆಯ ಐ.ಸಿ.ವಿಶ್ವಾಸ ದ್ವಿತೀಯ ಮತ್ತು ಕುವೆಂಪು ವಿದ್ಯಾನಿಕೇತನದ ರಕ್ಷಿತ್‌ರಾವ್ ತೃತೀಯ ಬಹುಮಾನ ಗಳಿಸಿದರು.

ಚಿತ್ರಕಲಾ ಸ್ಪರ್ಧೆಯಲ್ಲಿ ಶಾಲಿನ್ ಬಲೀಸ್ ಪ್ರಥಮಸ್ಥಾನ ಗಳಿಸಿ ಸೆಂಟ್‌ಮೇರೀಸ್ ಶಾಲೆಗೆ ಟ್ರೋಫಿ ಗಳಿಸಿ ಕೊಟ್ಟಿದ್ದು, ಜೆವಿಎಸ್ ಶಾಲೆಯ ದೀಪ್ತಿಮನ್ನಾ ದ್ವಿತೀಯ, ಅಂಬರ್‌ವ್ಯಾಲಿ ತೃತೀಯ, ಸೆಂಟ್‌ಮೇರೀಸ್ ಶಾಲೆಯ ಅನಘಾರಶ್ಮಿ ಮತ್ತು ಜ್ಞಾನರಶ್ಮಿ ಶಾಲೆಯ ಅನ್ಸಿಯಾ ಸಮಾಧಾನಕರ ಬಹುಮಾನ ಗಳಿಸಿದರು.

ನಿಧಾನಗತಿ ಸೈಕಲ್ ಚಾಲನೆ ಸ್ಪರ್ಧೆಯಲ್ಲಿ ಜ್ಞಾನರಶ್ಮಿ ತಂಡ ಬಾಲಕ ಮತ್ತು ಬಾಲಕಿಯರ ಎರಡೂ ವಿಭಾಗದ ಪ್ರಥಮಸ್ಥಾನ ಪಡೆದು ಟ್ರೋಫಿ ತನ್ನದಾಗಿಸಿಕೊಂಡಿತು. ಐ.ಸಿ.ವಿಶ್ವಾಸ್ ಮತ್ತು ವಿ.ಸಿ.ಗಾನವಿ ಪ್ರಥಮಸ್ಥಾನ ಪಡೆದರು. ಮಾಡೆಲ್‌ಶಾಲೆಯ ಮಹಮ್ಮದ್‌ಹುಸೇನ್ ಮತ್ತು ಮಹಮ್ಮದ್‌ಹಂದೀನ್ ಹಾಗೂ ತೈಯಬ್ ಅನುಕ್ರಮವಾಗಿ ಬಹುಮಾನ ಪಡೆದರು.

ಬಾಕ್ಸ್ ಕ್ರಿಕೆಟ್‌ನಲ್ಲಿ ಸಾಯಿ ಏಂಜೆಲ್ಸ್ ತಂಡ ಪ್ರಥಮಸ್ಥಾನದೊಂದಿಗೆ ಟ್ರೋಫಿ ಗಳಿಸಿದರೆ, ಫ್ರೈಡ್‌ಯೂರೋ ತಂಡ ದ್ವಿತೀಯ ಬಹುಮಾನ ಗಳಿಸಿತೆಂದು ರೋಟರಿ ನಿಕಟಪೂರ್ವ ಅಧ್ಯಕ್ಷ ಎಂ.ಎಲ್.ಸುಜಿತ್ ತಿಳಿಸಿದ್ದಾರೆ. ರೋಟರಿ ಅಧ್ಯಕ್ಷ ಎನ್.ಪಿ.ಲಿಖಿತ್, ಕಾರ್ಯದರ್ಶಿ ಹರ್ಷಿತ್‌ವಸಿಷ್ಠ ಯುವಚೇತನದ ಅಧ್ಯಕ್ಷ ಎಂ.ಎಸ್. ಕಿಶನ್, ಸಹ ಅಧ್ಯಕ್ಷ ಮನೋಜ್‌ಬೈಸಾನಿ, ರೋಟರಿ ಯುವಜನಸೇವಾ ನಿರ್ದೇಶಕ ಫಣೀಂದ್ರನಾಡಿಗ್ ಮತ್ತು ರೋಟರಿ ವಲಯ ನಾಯಕ ನಾಗೇಂದ್ರ ಜೊತೆಗೆ ಪ್ರಾಯೋಜಕರುಗಳು ಬಹುಮಾನ ವಿತರಿಸಿದರು.

**ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿ.ಜೆ.ಎಂ. ನ್ಯಾಯಾಲಯ, ದಾವಣಗೆರೆ**

**ಸಿ.ಆರ್.ಮಿಸ್.ನಂ:542/2025**

**ಅರ್ಜಿದಾರರು:** 1) ಅಜ್ಜಯ್ಯ ನಾಯ್ಕ.ಎಂ. ಬಿನ್ ಲೇಟ್ ಮಂಜನಾಯ್ಕ, ವಯಸ್ಸು ಸುಮಾರು 28 ವರ್ಷ, ವಾಸ : ನಾಗರಕಟ್ಟೆ ಗ್ರಾಮ, ಕಾಡಜ್ಜಿ ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 2) ಶ್ರೀಮತಿ ಸುಮಬಾಯಿ. ಎಂ. ಕೋಂ ಲೇಟ್ ಮಂಜನಾಯ್ಕ, ವಯಸ್ಸು ಸುಮಾರು 27 ವರ್ಷ, ವಾಸ : ನಾಗರಕಟ್ಟೆ ಗ್ರಾಮ. ಕಾಡಜ್ಜಿ ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 3) ಪೂನಾಬಾಯಿ.ಎಂ. ಕೋಂ ನಾಗರಾಜನಾಯ್ಕ.ಪಿ.. ವಯಸ್ಸು ಸುಮಾರು 25 ವರ್ಷ, ವಾಸ: ಹುಚ್ಚಂಗೆಮ್ಮ ದೇವಸ್ಥಾನದ ಹತ್ತಿರ. ಶ್ರೀರಾಮ ನಗರ, ಆಲೂರಹಟ್ಟಿ ಗ್ರಾಮ. ಮೆಳ್ಳೆಕಟ್ಟೆ ಅಂಚೆ, ದಾವಣಗೆರೆ ತಾಲ್ಲೂಕು : ಜಿಲ್ಲೆ

**- ವಿರುದ್ಧ-**

**ಎದುರುದಾರರು:** ತಹಶೀಲ್ದಾರ್‌ರವರು, ದಾವಣಗೆರೆ ತಾಲ್ಲೂಕು, ದಾವಣಗೆರೆ

**ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು**

ಅರ್ಜಿದಾರರುಗಳ ತಂದೆಯಾದ ಮಂಜಾನಾಯ್ಕ ಬಿನ್ ರಾವಜಿ ನಾಯ್ಕ ಇವರು ದಿನಾಂಕಃ 25.10.2003 ರಂದು ದಾವಣಗೆರೆ ತಾಲ್ಲೂಕು, ಕಾಡಜ್ಜಿ ಅಂಚೆ, ನಾಗರಕಟ್ಟೆ ಗ್ರಾಮದ ತಮ್ಮ ಮನೆಯಲ್ಲಿ ಮರಣ ಹೊಂದಿರುತ್ತಾರೆ. ಅರ್ಜಿದಾರರು ಮೇಲ್ಕಂಡ ಪ್ರಕರಣವನ್ನು ತಮ್ಮ ತಾಯಿಯ ಮರಣ ಪ್ರಮಾಣ ಪತ್ರವನ್ನು ಪಡೆಯಲು ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಬೇರೆ ಯಾರದಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ:20-12-2025 ರಂದು ಬೆಳಿಗ್ಗೆ 11-00 ಗಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ.

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ, ದಿನಾಂಕ 11-11-25 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ,

**ಸಹಿ/-**
**ಅರ್ಜಿದಾರರ ಪರ ವಕೀಲರು**
**(ಕೆ.ಚಂದ್ರಕಾಂತ್ )**

**ಸಹಿ/-**
**ಶಿರಸೇದಾರರು**
**ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿ.ಜೆ.ಎಂ. ನ್ಯಾಯಾಲಯ, ದಾವಣಗೆರೆ**

# ವಾರದ ಸಂತೆ ಮಾಡುವ ಪ್ರವೃತ್ತಿ ಮತ್ತೆ ಪುನರಾರಂಭಿಸಬೇಕು.

## ಐದು ತರಹದ ಜೋಳ ತಿನ್ನುವ ಭಾಗ್ಯ ಕಳೆದುಕೊಂಡ ನಗರದ ಜನರು



**ಚಿತ್ರದುರ್ಗ:** ನಗರದ ಜನರು ವೈವಿಧ್ಯಮಯವಾದ ದವಸ ಧಾನ್ಯಗಳನ್ನ ತಿನ್ನುವ ಅವಕಾಶವನ್ನು ಕಳೆದುಕೊಳ್ಳುತ್ತಿದ್ದಾರೆ, ಗ್ರಾಮಗಳಲ್ಲಿ ಐದು ತರಹದ ಜೋಳಗಳನ್ನು ಬೆಳೆದು, ಆಹಾರದಲ್ಲಿ ವೈವಿಧ್ಯತೆಯನ್ನು ಉಳಿಸಿಕೊಂಡಿರುವಂತಹ ಗ್ರಾಮೀಣ ಜನರು, ಸಂತೆಗಳಲ್ಲಿ ಅವುಗಳನ್ನು ಮಾರಾಟ ಮಾಡಿ, ತಮ್ಮ ಜೀವನ ನಿರ್ವಹಣೆ ಮಾಡುತ್ತಿದ್ದು, ಅಂತಹ ಐದು ತರಹದ ಜೋಳಗಳನ್ನ ನಗರದ ಜನರು ಖರೀದಿ ಮಾಡಿ, ರೈತರನ್ನ ಪ್ರೋತ್ಸಾಹಿಸಿ, ಮಕ್ಕಳಿಗೆ ವೈವಿಧ್ಯಮಯವಾದ ಆಹಾರ ಧಾನ್ಯಗಳನ್ನ ನೀಡಿ, ಆರೋಗ್ಯವಂತ ಸಮಾಜವನ್ನು ನಿರ್ಮಿಸಿಕೊಳ್ಳಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದರು.

ಅವರು ಚಿತ್ರದುರ್ಗ ನಗರದ ಸುತ್ತಮುತ್ತಲಿರುವ ಗ್ರಾಮೀಣ ಜನರು ಬೆಳೆಯುತ್ತಿರುವ ವೈವಿಧ್ಯಮಯ ದವಸ ಧಾನ್ಯಗಳು, ತರಕಾರಿಗಳು, ಹಣ್ಣು ಹಂಪಲುಗಳ ಬಗ್ಗೆ ಜಾಗೃತಿ ಮೂಡಿಸುತ್ತಾ ಮಾತನಾಡುತ್ತಿದ್ದರು.

ಕೆಲವು ಗ್ರಾಮಗಳಲ್ಲಿ ಈಗಲೂ ಸಹ ರೈತರು ವೈವಿಧ್ಯಮಯವಾದ ದವಸ ಧಾನ್ಯಗಳನ್ನ ಬೆಳೆಯುತ್ತಿದ್ದು, ಅವುಗಳನ್ನ ನಗರದ ಜನರಿಗೆ ಮಾರಾಟ ಮಾಡಿ ತಮ್ಮ ಜೀವನವನ್ನು ನಿರ್ವಹಿಸಿಕೊಳ್ಳುತ್ತಿದ್ದರು, ಆದರೆ ಈಗೀಗ ಬರು ಬರುತ್ತಾ ಜನರಲ್ಲಿ ಸಂತೆ ಮಾಡುವ ಪ್ರವೃತ್ತಿ ಕಡಿಮೆ ಆಗುತ್ತಿದ್ದು, ಗ್ರಾಮೀಣ ಜನರು ಬೆಳೆಯುವಂತಹ ವೈವಿಧ್ಯಮಯವಾದ ದವಸಧಾನ್ಯಗಳನ್ನ ನೋಡಲು ಸಹ ಸಮಯವಿಲ್ಲದೆ, ಅಮೂಲ್ಯವಾದ ಆಹಾರ ಧಾನ್ಯಗಳನ್ನ ಕಳೆದುಕೊಳ್ಳುತ್ತಿದ್ದಾರೆ ಎಂದರು.

ಪ್ರತಿ ವಾರಕ್ಕೊಮ್ಮೆ ಸಂತೆ ಮಾಡುವಾಗ ಗ್ರಾಮಸ್ಥರು ತಮ್ಮ ಹಿತ್ತಲುಗಳಲ್ಲಿ, ಹೊಲಗಳಲ್ಲಿ, ಜಮೀನುಗಳಲ್ಲಿ ಬೆಳೆದಂತಹ ವೈವಿಧ್ಯಮಯವಾದಂತಹ ತರಕಾರಿ, ದವಸಧಾನ್ಯ, ಹಣ್ಣುಗಳನ್ನ ತಂದು ಮಾರುಕಟ್ಟೆಯಲ್ಲಿ ಮಾರಾಟ ಮಾಡಿ, ನಗರದ ಜೊತೆ ಬಾಂಧವ್ಯವನ್ನು ಉಳಿಸಿಕೊಂಡಿದ್ದರು. ಅಂತಹ ಸಂಸ್ಕೃತಿಯನ್ನು ಉಳಿಸಿಕೊಂಡಿದ್ದಂತ ಭಾರತ, ಇಂದು ಪಾಶ್ಚಿಮಾತ್ಯ ಸಂಸ್ಕೃತಿಗೆ ಈಡಾಗಿ, ಪ್ರತಿಯೊಂದು ವಸ್ತುವನ್ನು ಸಹ ಮಾಲ್ಗಳಲ್ಲಿ, ದೊಡ್ಡ ದೊಡ್ಡ ಮಾರುಕಟ್ಟೆಗಳಲ್ಲಿ, ಶೋರೂಮ್ ಗಳಲ್ಲಿ ಕೊಂಡುಕೊಳ್ಳುತ್ತಾ, ಗ್ರಾಮಸ್ಥರ ಜೊತೆ ಬಾಂಧವ್ಯವನ್ನ ಕಳೆದುಕೊಳ್ಳುತ್ತಿರುವುದರಿಂದ, ಮಧ್ಯವರ್ತಿಗಳು ಹೆಚ್ಚಿನ ಹಣ ಸಂಪಾದನೆ ಮಾಡಿಕೊಳ್ಳುತ್ತಿದ್ದಾರೆ ಎಂದರು.

ನೇರವಾಗಿ ರೈತರಿಂದ ಖರೀದಿ ಮಾಡುವ ಪ್ರವೃತ್ತಿ ಹೆಚ್ಚಾಗಬೇಕಾಗಿದೆ, ಅದಕ್ಕೆ ವಾರದ ಸಂತೆಯೇ ಬಹಳ ಅನುಕೂಲಕರವಾದಂತಹ ಒಂದು ಅವಕಾಶವನ್ನು ನೀಡಿತ್ತು, ಈಗಲೂ ಸಹ ಗ್ರಾಮಸ್ಥರು ವಾರಕ್ಕೊಮ್ಮೆ ಕೆಲವೊಂದು ಹಳ್ಳಿಗಳಲ್ಲಿ ಸಂತೆ ಮಾಡಿಕೊಂಡು, ಜೀವನ ನಿರ್ವಹಿಸುತ್ತಿದ್ದಾರೆ, ಸಂತೆ ಮಾಡುವುದೇ ಅವರ ಜೀವನ ಪರ್ಯಂತ ಉದ್ಯೋಗವಾಗಿದೆ, ಹಾಗಾಗಿ 5 ತರಹದ ಜೋಳ, ಹಲವಾರು ತರಹದ ಅಕ್ಕಿ, ದ್ವಿದಳ ಧಾನ್ಯಗಳು, ಬೇಳೆಕಾಳುಗಳು, ನಗರಗಳಿಗೆ ತಂದು ವ್ಯಾಪಾರ ಮಾಡಿ ಜೀವನ ನಿರ್ವಹಿಸುವಂತಹ ಗ್ರಾಮೀಣ ಜನರನ್ನ ನಾವು ಮತ್ತೆ ಪ್ರೋತ್ಸಾಹಿಸಬೇಕಾಗಿದೆ ಎಂದರು.

ವಾರಕ್ಕೊಮ್ಮೆ ಸಂತೆ ಮಾಡಿಕೊಂಡು ಜನರು ರೈತರಿಂದ ನೇರವಾಗಿ ವಸ್ತುಗಳನ್ನ ಖರೀದಿ ಮಾಡಿ, ಅವರ ಬದುಕಿಗೆ ಆಸರೆಯಾಗಿದ್ದಂತಹ ಜನರು, ಇಂದು ರೈತರಿಗೂ ಸಹ ಹಣ ಸಿಗದಂತೆ ಮಧ್ಯವರ್ತಿಗಳ ಮುಖಾಂತರ ದೊಡ್ಡ ದೊಡ್ಡ ಅಂಗಡಿಗಳಲ್ಲಿ, ಮಾಲ್ಗಳಲ್ಲಿ ಅದೇ ತರಕಾರಿಗಳನ್ನು ಹೆಚ್ಚಿನ ಹಣ ನೀಡಿ ಕೊಂಡುಕೊಳ್ಳುತ್ತಿರುವುದು ಶೋಚನೀಯ ಎಂದರು.

ಕರೋನಾ ನೆಪದಲ್ಲಿ ನಾವು ಗ್ರಾಮಸ್ಥರನ್ನು ಸಂತೆ ಮಾಡುವ ಅವಕಾಶದಿಂದ ವಂಚಿತರನ್ನಾಗಿ ಮಾಡಿದ್ದೇವೆ, ಸುಭದ್ರವಾದ, ಸುರಕ್ಷಿತವಾದಂತ ಸಂತಯ ಮಾರುಕಟ್ಟೆಗಳನ್ನ ಕಟ್ಟಿ, ಮತ್ತೆ ಅವರಿಗೆ ತಮ್ಮ ವಸ್ತುಗಳನ್ನ ನೇರವಾಗಿ ಗ್ರಾಹಕರಿಗೆ ಮಾರುವಂತ ಏರ್ಪಾಡು ಮಾಡಬೇಕಾಗಿದೆ ಎಂದರು.

ಗ್ರಾಮಸ್ಥರು ಬೆಳೆಯುವ ಐದು ತರಹದ ಜೋಳವನ್ನ

# ಶಿವಕುಮಾರ ಎನ್ ಜಿ ಇವರಿಗೆ "ಕರ್ನಾಟಕ ಸಿರಿಗನ್ನಡಸಿರಿ" ರಾಜ್ಯ ಪ್ರಶಸ್ತಿ ನೀಡಿ ಗೌರವ



**ದಾವಣಗೆರೆ :** ಇವರು ಕಳೆದ ಹಲವು ವರ್ಷಗಳಿಂದ ಹಲವಾರು ಸಾಮಾಜಿಕ ಕಾರ್ಯಚಟುವಟಿಕೆಯಲ್ಲಿ, ಸೇವಾ ಕಾರ್ಯದಲ್ಲಿ ಸಕ್ರೀಯವಾಗಿ ತೊಡಗಿಸಿಕೊಂಡು, ಸಮುದಾಯದೊಂದಿಗೆ ಬೆರೆತು ಹಲವಾರು ಸಾಮಾಜಿಕ ಅರಿವಿನ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬರುತ್ತಿರುವ ಶಿವಕುಮಾರ ಎನ್ ಜಿ* ಇವರಿಗೆ ಅವರ ಸಾಮಾಜಿಕ ಕಾರ್ಯಚಟುವಟಿಕೆಯಲ್ಲಿ ಸೇವಾ ಕಾರ್ಯವನ್ನು ಗುರುತಿಸಿ ಕಲಾ ಕುಂಚ ಸಾಂಸ್ಕೃತಿಕ ಸಂಸ್ಥೆ, ದಾವಣಗೆರೆ ಇವರುಗಳಿಂದ ಚನ್ನಗಿರಿ ವಿರೂಪಾಕ್ಷಪ್ಪ ಧರ್ಮಶಾಲಾ ಕಲ್ಯಾಣ ಮಂಟಪ ದಾವಣಗೆರೆಯಲ್ಲಿ ಹಮ್ಮಿಕೊಂಡಿದ್ದ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಇವರಿಗೆ ರಾಜ್ಯ ಪ್ರಶಸ್ತಿಯಾದ " *ಕರ್ನಾಟಕ ಸಿರಿಗನ್ನಡ ಸಿರಿ " ಪ್ರಶಸ್ತಿ ನೀಡಿ ಗೌರವಿಸಿದೆ. ಈ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಉದ್ಘಾಟನೆಯನ್ನು ಶ್ರೀಮತಿ ಕಿರಣ್ ರವಿ ಪೈ ಅಧ್ಯಕ್ಷರು, ಸುಮುಖ ಯಕ್ಷಗಾನ ಕಲಾ ಕೇಂದ್ರ, ಶಿವಮೊಗ್ಗ, ಅಧ್ಯಕ್ಷತೆಯನ್ನು ಶ್ರೀ ಕೆ.ಹೆಚ್. ಮಂಜುನಾಥ್ ಅಧ್ಯಕ್ಷರು, ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ದಾವಣಗೆರೆ. ಮುಖ್ಯ ಅತಿಥಿಗಳಾಗಿ ಡಾ.ಶಶಿಕಲಾ ಕೃಷ್ಣಮೂರ್ತಿ ಬರಹಗಾರರು, ವೈದ್ಯಕೀಯ ಕ್ಷೇತ್ರದ ಸಾಧಕರು, ದಾವಣಗೆರೆ ಶ್ರೀಮತಿ ನವೀನ ರಾಯ್ಕರ್ ಸಂಗೀತ ಸಾಧಕಿ, ಸಾಹಿತಿ, ಕವಯತ್ರಿ, ಬೆಂಗಳೂರು. ಕುಮಾರಿ ನವ್ಯ ಮನೋಹರ ಪೈ ಶಿಕ್ಷಣ ಸಾಧಕಿ ಚಿತ್ರ ಕಲಾವಿದರು, ಗೋಕರ್ಣ, ಉತ್ತರ ಕನ್ನಡ ಜಿಲ್ಲೆ, ಗೌರವ ಉಪಸ್ಥಿತಿ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಸಂಸ್ಥಾಪಕರು, ಕಲಾಕುಂಚ ಮಹಿಳಾ ವಿಭಾಗ, ದಾವಣಗೆರೆ. ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ ಅಧ್ಯಕ್ಷರು, ಕಲಾಕುಂಚ ಮಹಿಳಾ ವಿಭಾಗ, ದಾವಣಗೆರೆ. ಸಾಲಿಗ್ರಾಮ ಗಣೇಶ್ ಶೆಣೈ ಸಂಸ್ಥಾಪಕರು, ಕಲಾ ಕುಂಚ ಸಾಂಸ್ಕೃತಿಕ ಸಂಸ್ಥೆ, ದಾವಣಗೆರೆ ಕೆ ಸಿ ಉಮೇಶ್ ಪ್ರಧಾನ ಕಾರ್ಯದರ್ಶಿ, ಕಲಾ ಕುಂಚ ಸಾಂಸ್ಕೃತಿಕ ಸಂಸ್ಥೆ, ದಾವಣಗೆರೆ

ಇನ್ನು ಮುಂತಾದವರು ಉಪಸ್ಥಿತರಿದ್ದರು.

ಇವರ ಸಾಮಾಜಿಕ ಕಾರ್ಯಚಟುವಟಿಕೆಗಳು ಹೀಗೇ ಮುಂದುವರಿಯಲಿ ಎಂದು ಕಲಾ ಕುಂಚ ಸಾಂಸ್ಕೃತಿಕ ಸಂಸ್ಥೆ, ದಾವಣಗೆರೆ ಆಶಿಸಿದೆ.

ಚಿಕ್ಕ ವಯಸ್ಸಿನಲ್ಲಿ ಸಾಕಿ ಬೆಳೆಸಿದಂತಹ ಹಾಗೂ ಇವರ ಉತ್ತಮ ಬೆಳವಣಿಗೆಗೆ, ಉತ್ತಮ ವ್ಯಕ್ತಿತ್ವಕ್ಕೆ ಕಾರಣರಾದ ದಾವಣಗೆರೆ ತಾಲ್ಲೂಕಿನ ನಾಗರಕಟ್ಟೆ ಗ್ರಾಮದ ಅಜ್ಜನವರಾದ ಎನ್ ಕೆ ಸಿದ್ದಪ್ಪ ಮತ್ತು ಅಜ್ಜಿಯವರಾದ ಶಾಂತಮ್ಮ ಇವರಿಗೆ ಕೀರ್ತಿ ತಂದಿರುತ್ತಾರೆ. ಇವರ ಬೆಳವಣಿಗೆಗೆ ಕಾರಣರಾದ ಅಜ್ಜ ಅಜ್ಜಿಗೆ ಇವರು ಅಭಿನಂದಿಸುತ್ತಾರೆ.

ನೆಚ್ಚಿನ ಗುರುಗಳಾದ ಹಾಗೂ ಇವರ ಸಮಾಜಮುಖಿ ಕಾರ್ಯಾಚಟುವಟಿಕೆಗಳಿಗೆ ಸಹಕರಿಸಿ ಪ್ರೋತ್ಸಾಹಿಸಿದಂತಹ ಪ್ರಸಿದ್ಧ ಕವಿ ಮೂಗು ಗಂಟಲು ತಜ್ಞರಾದ ಡಾ. ಎ ಎಮ್ ಶಿವಕುಮಾರ್ ಇವರಿಗೆ ಅಭಿನಂದಿಸುತ್ತಾರೆ.

ಜೊತೆಗೆ ತಂದೆಯವಯರಾದ ಗಂಗಾಧರಪ್ಪ ಎನ್, ತಾಯಿಯವರಾದ ಗೌರಮ್ಮ, ಕಮಲಮ್ಮ, ಅತ್ತೆ ಮಾವನವರಾದ ಯಶೋದಮ್ಮ, ಓಂಕಾರಪ್ಪ, ಹೆಂಡತಿಯಾದ ಮಂಜುಳಾ ಶಿವಕುಮಾರ, ತಂಗಿಯವರಾದ ಮಮತ ಎನ್ ಜಿ, ಅಕ್ಕನವರಾದ ಶಿಲ್ಪಾ ಹಾಗೂ ಮಂಜುನಾಥ್, ನರೇಂದ್ರ ಇವರಿಗೂ ಕೀರ್ತಿ ತಂದಿರುತ್ತಾರೆ.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಗೂ, ವಿವಿಧ ಸಂಸ್ಥೆಗಳಿಗೂ, ವಿವಿಧ ಪತ್ರಿಕೆಗಳಿಗೂ ಹಾಗೂ ಪತ್ರಿಕಾ ಮಾಧ್ಯಮದ ಬಂಧುಗಳಿಗೂ, ಕಾಲೇಜುಗಳಿಗೂ, ಸಂಘಟನೆಗಳಿಗೂ, ಕಂಪನಿಗಳಿಗೂ, ಆಸ್ಪತ್ರೆಗಳಿಗೂ, ಎಲ್ಲ ರಕ್ತನಿಧಿ ಕೇಂದ್ರಗಳಿಗೂ, ಸ್ನೇಹಿತರಿಗೂ, ವೈದ್ಯರಿಗೂ, ಸಂಪನ್ಮೂಲ ವ್ಯಕ್ತಿಗಳಿಗೂ, ಉಪನ್ಯಾಸಕರಿಗೂ, ಶಿಕ್ಷಕರಿಗೂ, ವಿವಿಧ ಇಲಾಖೆಗಳ ಅಧಿಕಾರಿಗಳಿಗೂ, ಬಂಧು–ಮಿತ್ರರಿಗೂ, ಬೆಳ್ಳೂಡಿ ಮತ್ತು ನಾಗರಕಟ್ಟೆ ಗ್ರಾಮದ ಎಲ್ಲ ಗ್ರಾಮಸ್ಥರಿಗೂ, ಪ್ರತ್ಯಕ್ಷವಾಗಿ ಪರೋಕ್ಷವಾಗಿ ಸಹಕರಿಸಿದ ಎಲ್ಲರಿಗೂ ಅಭಿನಂದಿಸುತ್ತಾರೆ.

ಇವರು ಮೂಲತಹ ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನ ಬೆಳ್ಳೂಡಿ ಗ್ರಾಮದವರು.

ಹಲವಾರು ಸಾಮಾಜಿಕ ಸಂಸ್ಥೆಗಳಲ್ಲಿ ಸಾಮಾಜಿಕ ಸೇವೆ ಸಲ್ಲಿಸುತ್ತಿರುವ ಇವರ ಸೇವಾಕಾರ್ಯ ಈಗೇ ಮುಂದುವರಿಯಲಿ ಎಂದು ಆಶಿಸುತ್ತೇವೆ.

# ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಮೇಲಿನ ದೌರ್ಜನ್ಯ ತಡೆಗೆ ಜಿಲ್ಲೆಯಲ್ಲಿ ಅರಿವು ಮೂಡಿಸಿ



**ಬಳ್ಳಾರಿ:** ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಮೇಲಿನ ದೌರ್ಜನ್ಯ ತಡೆ ಕಾಯಿದೆ, ಶಿಕ್ಷೆ ಕುರಿತು ಜಿಲ್ಲೆಯಲ್ಲಿ ಎಲ್ಲ ಸಮುದಾಯಗಳ ಜನರಿಗೆ ಜಾಗೃತಿ ಮೂಡಿಸುವ ಮೂಲಕ ಜಿಲ್ಲೆಯಲ್ಲಿ ದೌರ್ಜನ್ಯ ತಡೆಗೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಜನರ ಮೇಲಿನ ದೌರ್ಜನ್ಯ ನಿಯಂತ್ರಣ ಹಾಗೂ ಜಿಲ್ಲಾ ಜಾಗೃತಿ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೌರ್ಜನ್ಯ ಪ್ರಕರಣಗಳ ಕುರಿತು ಜಿಲ್ಲೆಯಲ್ಲಿ ದಲಿತ ಮುಖಂಡರ ಸಭೆ ಆಯೋಜಿಸಿ,

ದೌರ್ಜನ್ಯ ಪ್ರಕರಣ ತಡೆ ಕುರಿತು ಅರಿವು ಮೂಡಿಸಬೇಕು. ಈ ಮೂಲಕ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಕಡಿಮೆ ಮಾಡಲು ಸಹಾಯವಾಗುತ್ತದೆ ಎಂದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಮೇಲಿನ ದೌರ್ಜನ್ಯ ತಡೆ ಕಾಯಿದೆಯು ಸಾಕಷ್ಟು ದುರುಪಯೋಗವಾಗುತ್ತಿದೆ. ಇದರಿಂದ ನಿಜ ಪ್ರಕರಣಗಳಿಗೆ ಮೌಲ್ಯತೆ ಕಳೆದುಕೊಳ್ಳುತ್ತಿವೆ. ಹಾಗಾಗಿ ದೌರ್ಜನ್ಯ ಪ್ರಕರಣದ ನಿಖರ ಮಾಹಿತಿ ತಿಳಿದುಕೊಳ್ಳಬೇಕು. ಬಿ–ರಿಪೋರ್ಟ್ ಮಾಡುವುದಕ್ಕೂ ಮುನ್ನ ಸೂಕ್ತ ತನಿಖೆ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ಭೂಮಿಗೆ ಸಂಬಂಧಿಸಿದಂತೆ ಜಾಸ್ತಿ ಪ್ರಕರಣ ಕಂಡುಬರುತ್ತಿವೆ. ದೌರ್ಜನ್ಯಕ್ಕೊಳಗಾದವರಿಗೆ ದೈಹಿಕ, ಮಾನಸಿಕವಾಗಿ ಆತ್ಮಸ್ಥೈರ್ಯ ತುಂಬಬೇಕು. ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಗೆ ಮೀಸಲಾದ ಅನುದಾನ ಆಯಾ ಸಾಲಿನಲ್ಲಿಯೇ ವೆಚ್ಚವಾಗಬೇಕು ಹಾಗೂ ಅರ್ಹ ಫಲಾನುಭವಿಗಳಿಗೆ ಯೋಜನೆ ಸೌಲಭ್ಯ ತಲುಪಬೇಕು ಎಂದರು.

ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಚಿದಾನಂದಪ್ಪ ಅವರು ಮಾತನಾಡಿ, ಜನವರಿ–2025 ರಿಂದ ಆಗಸ್ಟ್ 31 ರ ವರೆಗೆ 18 ಪ್ರಕರಣಗಳಲ್ಲಿ 26 ಸಂತ್ರಸ್ಥರಿಗೆ ಒಟ್ಟು ರೂ.22,75,000 ಪರಿಹಾರ ಮಂಜೂರು ಮಾಡಲಾಗಿದೆ. ಕಳೆದ ಮೂರು ತಿಂಗಳಲ್ಲಿ ಯಾವುದೇ ವಿಧದ 'ಬಿ' ರಿಪೋರ್ಟ್ ಪ್ರಕರಣ ದಾಖಲಾಗಿಲ್ಲ ಎಂದು ಸಭೆಗೆ ಮಾಹಿತಿ ನೀಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, , ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಜಿಪಂ ಉಪ ಕಾರ್ಯದರ್ಶಿ ಶಶಿಕಾಂತ ಶಿವಪೂರೆ,

ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ, ಜಿಲ್ಲಾ ಸರ್ಕಾರಿ ಅಭಿಯೋಜಕರು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಆಂಧ್ರ ಪ್ರದೇಶದಲ್ಲಿ ಮುಂದುವರೆದ ಕಾರ್ಯಾಚರಣೆ 7 ನಕ್ಸಲರ ಹತ್ಯೆ

**ಅಮರಾವತಿ:** ಆಂಧ್ರಪ್ರದೇಶದ ಮಾರೆಡುಮಿಲ್ಲಿಯಲ್ಲಿ ನಕ್ಸಲ್ ಹತ್ಯಾ ಕಾರ್ಯಚರಣೆ ಮುಂದುವರೆದಿದೆ. ನಿನ್ನೆಯಿಂದ ನಿರಂತರವಾಗಿ ನಡೆಸಲಾಗುತ್ತಿರುವ ಈ ಕಾರ್ಯಚರಣೆಯಲ್ಲಿ ಇದುವರೆಗೂ 7 ನಕ್ಸಲರನ್ನು ಹತ್ಯೆ ಮಾಡಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ನಿನ್ನೆಯ ಕಾರ್ಯಾಚರಣೆಯ ಮುಂದುವರಿದಿದ್ದು, ಇಲ್ಲಿಯವರೆಗೆ ಏಳು ಮಾವೋವಾದಿಗಳು ಸಾವನ್ನಪ್ಪಿ ದ್ದಾರೆ ಎಂದು ಎಪಿ ಗುಪ್ತಚರ ಎಡಿಜಿ ಮಹೇಶ್ ಚಂದ್ರ ಲಡ್ಡಾ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಗುರುತಿನ ಪ್ರಕ್ರಿಯೆ ನಡೆಯುತ್ತಿರುವಾಗಲೂ ಸತ್ತವರಲ್ಲಿ ಮೂವರು ಮಹಿಳಾ ಮಾವೋವಾದಿಗಳು ಸೇರಿದ್ದಾರೆ ಎಂದು ಅವರು ಹೇಳಿದ್ದಾರೆ.ಒಬ್ಬ ವ್ಯಕ್ತಿಯನ್ನು ಮೇತುರಿ ಜೋಖಾ ರಾವ್ ಅಲಿಯಾಸ್ ಶಂಕರ್ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು.

ಶ್ರೀಕಾಕುಲಂ ಮೂಲದ ಶಂಕರ್ ಆಂಧ್ರ ಒಡಿಶಾ ಗಡಿ (ಎಒಬಿ) ಯ ಉಸ್ತುವಾರಿ (ಎಸಿಎಂ) ಆಗಿದ್ದರು ಮತ್ತು ತಾಂತ್ರಿಕ ವಿಷಯಗಳು, ಶಸ್ತ್ರಾಸ್ತ್ರ ತಯಾರಿಕೆ, ಸಂವಹನದಲ್ಲಿ ಪರಿಣತಿ ಹೊಂದಿದ್ದರು ಎಂದು ಪ್ರಾಥಮಿಕ ಮಾಹಿತಿಯ ಆಧಾರದ ಮೇಲೆ ಅಧಿಕಾರಿ ತಿಳಿಸಿದ್ದಾರೆ.

# ಕನ್ನಡ ರಾಜ್ಯೋತ್ಸವ ನಿತ್ಯೋತ್ಸವವಾಗಲಿ–ಶಾಸಕ ಜಿ.ಬಿ.ಜ್ಯೋತಿಗಣೇಶ್



**ತುಮಕೂರು:** ಕನ್ನಡ ನಾಡು ನುಡಿಗೆ ದುಡಿದವರನ್ನು ನವೆಂಬರ್ ಮಾಹೆಯಲ್ಲಿ ಇಡೀ ತಿಂಗಳು ಅವರುಗಳನ್ನು ಸ್ಮರಿಸುವುದು ನಮ್ಮ ಆದ್ಯ ಕರ್ತವ್ಯ,ನಗರದ ಸಂಘ–ಸಂಸ್ಥೆಗಳು ಕನ್ನಡಕ್ಕಾಗಿ ದುಡಿದವರನ್ನು ಕನ್ನಡ ಭಾಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸುತ್ತಿರುವುದು ನಮಗೆ ಸಂತಸ ತಂದಿದೆ,ತಾಯಂದಿರು ತಮ್ಮ ಮಕ್ಕಳಿಗೆ ತಾಯಿ ಭಾಷೆ ಕನ್ನಡವನ್ನು ಹೇಳಿಕೊಡಿ,ನಿರ್ಭಯ ಮಹಿಳಾ ಜಾಗೃತಿ ವೇದಿಕೆ ಉತ್ತಮ ಕೆಲಸಗಳನ್ನು ಮಾಡುತ್ತಾ ಮಹಿಳೆಯರಿಗೆ ಧ್ವನಿಯಾಗಿ ಕೆಲಸ ಮಾಡುತ್ತಿದೆ ಅವರ ಸಂಸ್ಥೆಯ ಜೊತೆ ಶಾಸಕನಾಗಿ ನಾನು ಸದಾ ಇರುತ್ತೇನೆ ಎಂದು ಶಾಸಕ ಜಿ.ಬಿ.ಜ್ಯೋತಿಗಣೇಶ್ ತಿಳಿಸಿದರು.

ಅವರು ನಗರದ 31ನೇ ವಾರ್ಡಿನ ಜಯನಗರ ಮಾರ್ಕೆಟ್ ಪಕ್ಕದಲ್ಲಿ ಸಂಕಲ್ಪ ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಘ,ಕನ್ನಡ ಸಾಹಿತ್ಯ ಪರಿಷತ್ತು ನಗರ ಘಟಕ,ನಿರ್ಭಯ ಮಹಿಳಾ ಜಾಗೃತಿ ವೇದಿಕೆಯಿಂದ ಹಮ್ಮಿಕೊಂಡಿದ್ದ ವೈಭವದ ಕನ್ನಡ ರಾಜ್ಯೋತ್ಸವನ್ನು ಉದ್ಘಾಟಿಸಿ ಮಾತನಾಡಿದರು.

ಮಾಜಿ ಶಾಸಕ ಡಾ॥ಎಸ್. ರಫೀಕ್ ಅಹಮದ್ ರವರು ಮಾತನಾಡುತ್ತಾ ಸಂಘ–ಸಂಸ್ಥೆಗಳಿಂದ ಕನ್ನಡ ಭಾಷೆಗಾಗಿ ಕನ್ನಡ ಉಳಿವಿಗಾಗಿ ಜಾಗೃತಿ ಮೂಡಿಸುತ್ತಿವೆ,ನಿರ್ಭಯ ಮಹಿಳಾ ವೇದಿಕೆಯು ಮಹಿಳೆಯರ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಿದೆ,ಮಹಿಳೆಯರಿಗೆ ಎಂತಹುದೇ ಸಮಸ್ಯೆ ಬಂದರೂ ಸಹ ಅದು ಬಗೆಹರಿಸಿ ಧ್ವನಿ ಇಲ್ಲದವರಿಗೆ ಧ್ವನಿಯಾಗಿ ಕೆಲಸ ಮಾಡುತ್ತಿದೆ,ಕನ್ನಡಕ್ಕಾಗಿ ಕೈಎತ್ತು ನಿನ್ನ ಕೈ ಕಲ್ಪವೃಕ್ಷವಾಗುತ್ತದೆ ಎಂಬ ಕುವೆಂಪು ಕವಿನುಡಿಯಂತೆ ನಾವೆಲ್ಲರೂ ಕನ್ನಡ ಭಾಷೆಗಾಗಿ ದುಡಿಯೋಣ ಎಂದು ಮನವಿ ಮಾಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಪ್ರೊ. ಕೆ.ಎಸ್.ಸಿದ್ದಲಿಂಗಪ್ಪನವರು ಮಾತನಾಡುತ್ತಾ ಭಾಷೆಗೆ ಭಾವನೆಗಳನ್ನು ತಿಳಿಸುವ ಕೆರಳಿಸುವ ಶಕ್ತಿ ಅಡಗಿದೆ,ನೀವು ಯಾವುದೇ ಭಾಷೆ ಕಲಿಯಿರಿ ಆದರೆ ಮೊದಲ ಪ್ರಾಶಸ್ತ್ಯ ಕನ್ನಡಕ್ಕಿರಲಿ,ಡಿವಿಜಿರವರು ಕಗ್ಗದ ಮೂಲಕ ಜನರನ್ನು ಸದಾ ಎಚ್ಚರಿಸುತ್ತಿದ್ದಾರೆ,ಕನ್ನಡ ಭಾಷೆ ಅನ್ನದ ಭಾಷೆಯಾದರೆ ಮಾತ್ರ ಕನ್ನಡ ಉಳಿಯುತ್ತದೆ,ಇಂದು ಕನ್ನಡ ಉಳಿದಿದ್ದರೆ ಅದಕ್ಕೆ ಮೂಲ ಕಾರಣ ಕನ್ನಡ ಶಿಕ್ಷಕರು,ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಂದ ಮಾತ್ರ,ಕನ್ನಡ ಭಾಷೆಗೆ ಎಲ್ಲರ ಕೊಡುಗೆ ಇದೆ,ಗಡಿಭಾಗದಲ್ಲಿ ಕನ್ನಡ ಉಳಿಸಿ ಬೆಳೆಸಬೇಕಾದ ಕರ್ತವ್ಯ ಎಲ್ಲರ ಮೇಲಿದೆ,ಆಂಧ್ರದ ಗಡಿಭಾಗದಲ್ಲಿ ಸಹ ಕನ್ನಡ ರಾಜ್ಯೋತ್ಸವನ್ನು ಆಚರಿಸುತ್ತಿರುವುದು ಕನ್ನಡದ ಹೆಮ್ಮೆ ಎಂದು ಹೇಳಿದರು.

ವೇದಿಕೆಯಲ್ಲಿ ಶ್ರೀಮತಿ ಗೀತಾನಾಗೇಶ್, ಆರ್.ಎಸ್.ವೀರಪ್ಪದೇವರು, ನಟರಾಜಶೆಟ್ಟರು, ಡಾ॥ಬಾಲಗುರುಮೂರ್ತಿ,ಶ್ರೀಮತಿಕಮಲಾನರಸಿಂಹ, ಸಿ.ಎನ್.ರಮೇಶ್, ಚಂದ್ರಶೇಖರ್ ಹೆಬ್ಬಳಲು, ಶ್ರೀನಿವಾಸಮೂರ್ತಿ, ನಂದಿನಿ, ಜ್ಯೋತಿಆಚಾರ್ಯ, ಡಿ.ಎಸ್. ರಮೇಶ್, ಸುನಂದಮ್ಮ, ಸಿ.ಎನ್.ಸುಗುಣಾದೇವಿ ಇತರರು ಉಪಸ್ಥಿತರಿದ್ದರು.

ರುದ್ರಮೂರ್ತಿಎಲೆರಾಂಪುರ ತಂಡದವರು ಕನ್ನಡ ಹಾಡುಗಳನ್ನು ಹಾಡಿ ರಂಜಿಸಿದರು.

# ಸಫಾಯಿ ಕರ್ಮಚಾರಿಗಳಿಗೆ ಅಗತ್ಯ ಸೌಲಭ್ಯ ಒದಗಿಸಿ

**ಗದಗ :** ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಜಾರಿಯಾಗಿರುವ ವಿವಿಧ ಯೋಜನೆಗಳ ಸೌಲಭ್ಯ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಸಫಾಯಿ ಕರ್ಮಚಾರಿ, ಮ್ಯಾನುವಲ್ ಸ್ಕಾವೆಂಜರ್ ನಿಯೋಜನೆ ನಿಷೇಧ ಮತ್ತು ಅವರ ಪುನರ್ವಸತಿ ಸೌಲಭ್ಯಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಫಾಯಿ ಕರ್ಮಚಾರಿಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ಕುರಿತು ಕ್ರಮ ಜರುಗಿಸಬೇಕು. ನೇರವಾಗಿ ಪಾವತಿಸಲಾಗುತ್ತಿರುವ ಪೌರಕಾರ್ಮಿಕರ ವೇತನದಲ್ಲಿ ಭವಿಷ್ಯ ನಿಧಿ ಹಾಗೂ ಇಎಸ್ಐ ಕಡಿತಗಳ ಕುರಿತು ಪರಿಶೀಲಿಸಬೇಕು. ಪೌರಕಾರ್ಮಿಕರು ಹಾಗೂ ಅವಲಂಬಿತರಿಗೆ ದೊರಕಬೇಕಾದ ಸೌಲಭ್ಯಗಳು ಹಾಗೂ ಕುಂದುಕೊರತೆ ಕುರಿತು ತಾಲೂಕು ಮಟ್ಟದಲ್ಲಿಯೂ ಸಭೆ ಜರುಗಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೋಟೂರ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ, ಜಿಲ್ಲಾ ಸಂಯೋಜಕರಾದ ರಮೇಶ ಕೊಳೂರ, ಸಮಿತಿ ಸದಸ್ಯರಾದ ಯುವರಾಜ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ವೈದ್ಯಾಧಿಕಾರಿಗಳು ಸಕಾಲದಲ್ಲಿ ಸೇವೆ ಒದಗಿಸಿ ತಾಯಿ ಮರಣ ತಡೆಗಟ್ಟಿ



**ಬಳ್ಳಾರಿ:** ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರು ನಿರಂತರ ನಿಗಾವಣೆಯೊಂದಿಗೆ ಸಕಾಲದಲ್ಲಿ ಸೇವೆ ಒದಗಿಸುವ ಮೂಲಕ ತಾಯಿ ಮರಣ ತಡೆಗಟ್ಟಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ಸೂಚಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬಿಎಂಸಿಆರ್‌ಸಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ಹಾಗೂ ಕ್ಷೇತ್ರ ಸಿಬ್ಬಂದಿಯವರೊಂದಿಗೆ ತಾಯಿ ಮರಣ ಕುರಿತು ಜಿಲ್ಲಾ ಮಟ್ಟದ ಉಪಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರ ಮರಣವನ್ನು ಶೂನ್ಯಕ್ಕೆ ತರಲು ಸೂಕ್ತ ಮುಂಜಾಗ್ರತೆಯೊಂದಿಗೆ ಕ್ರಮವಹಿಸಬೇಕು. ಗಂಭೀರ ಸಮಸ್ಯೆಗಳು ಕಂಡುಬಂದಾಗ ಪಾಲಕರಿಗೆ ತಿಳಿಸಿ ಮನವರಿಕೆ ಮಾಡಬೇಕು. ಚಿಕಿತ್ಸೆ ಅಗತ್ಯವಿದ್ದಲ್ಲಿ ಮಾತ್ರ ಮೇಲ್ಮಟ್ಟದ ಆಸ್ಪತ್ರೆಗೆ ಮುಂಚಿತವಾಗಿ ಮಾಹಿತಿ ನೀಡಿ ಆಂಬ್ಯುಲೆನ್ಸ್‌ನಲ್ಲಿ ಕಳುಹಿಸಬೇಕು. ಮನೆಯಲ್ಲಿ ಹೆರಿಗೆ ಮಾಡಿಸುವುದರಿಂದ ತಾಯಿ ಮಗುವಿಗೆ ಉಂಟಾಗುವ ತೊಂದರೆಗಳ ಬಗ್ಗೆ ಮಾಹಿತಿ ನೀಡಿ, ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಲು ಇರುವ ವೈದ್ಯಕೀಯ ಸೌಲಭ್ಯಗಳ ಬಗ್ಗೆ ಕ್ಷೇತ್ರ ಮಟ್ಟದಲ್ಲಿ ಸಾರ್ವಜನಿಕರಿಗೆ ಜಾಗೃತಿ ನೀಡಬೇಕು ಎಂದು ವೈದ್ಯಾಧಿಕಾರಿಗಳಿಗೆ ತಿಳಿಸಿದರು.

ಗರ್ಭಿಣಿ ಎಂದು ತಿಳಿದ ದಿನದಿಂದಲೇ ಗರ್ಭಿಣಿಗೆ ಕಂಡು ಬರಬಹುದಾದ ಸಾಮಾನ್ಯ ಗಂಭೀರ ಸಮಸ್ಯೆಗಳ ಕುರಿತು ಮುತುವರ್ಜಿ ವಹಿಸಲು ಕ್ಷೇತ್ರ ಮಟ್ಟದ ಸಿಬ್ಬಂದಿಯವರು ಸದಾ ತಾಯಿಯೊಂದಿಗೆ ಹಾಗೂ ಪಾಲಕರೊಂದಿಗೆ ಸಂಪರ್ಕದಲ್ಲಿರಬೇಕು ಎಂದು ನಿರ್ದೇಶನ ನೀಡಿದರು.ಕಬ್ಬಿಣಾಂಶ ಮಾತ್ರೆಗಳನ್ನು ನುಂಗಿಸುವ ಮೂಲಕ ರಕ್ತ ಹೀನತೆ ತಡೆಯಲು ಮತ್ತು ನಿಗಧಿತವಾಗಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಹೆಚ್.ಐ.ವಿ ಹೆಚ್‌ಬಿಸಿಜಿ ಪರೀಕ್ಷೆಯನ್ನು ಕೈಗೊಳ್ಳುವಂತೆ ಸೂಚಿಸಬೇಕು. ಸ್ಕಾನಿಂಗ್ ಅವಶ್ಯಕತೆ ಇದ್ದಲ್ಲಿ ವೈದ್ಯರ ಸಲಹೆಯಂತೆ ಮಾಡಿಸಿ ತಾಯಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು.ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಹದಿಹರೆಯದ ಗರ್ಭಿಣಿಯರು ಕಂಡುಬಂದಲ್ಲಿ ಅವರಿಗೆ ಆಪ್ತಸಮಾಲೋಚನೆ ನಡೆಸಿ ಅವರ ಆರೋಗ್ಯ ಹಿತದೃಷ್ಟಿಯಿಂದ ಗರ್ಭಾಪಾತ ಮಾಡಿಸಬೇಕು ಹಾಗೂ ಬೇಗ ಗರ್ಭ ಧರಿಸದೇ ಇರಲು ಕುಟುಂಬ ಕಲ್ಯಾಣ ಅಂತರ ವಿಧಾನಗಳನ್ನು ಆಪ್ತಸಮಾಲೋಚನೆ ಮೂಲಕ ಮನವೊಲಿಸಬೇಕು ಎಂದು ತಿಳಿಸಿದರು.

ಆಸ್ಪತ್ರೆಯಲ್ಲಿ ಹೆರಿಗೆಯಾದಲ್ಲಿ ಸಹಜ ಹೆರಿಗೆಗೆ 3 ದಿನಗಳು, ಸಿಜೇರಿಯನ್ ಹೆರಿಗೆಗೆ ಏಳು ದಿನಗಳ ಕಾಲ ಕಡ್ಡಾಯವಾಗಿ ದಾಖಲು ಮಾಡಿಕೊಂಡು ನಿರಂತರವಾಗಿ ತಾಯಿಯ ಆರೋಗ್ಯದ ಕುರಿತು ಪರಿಶೀಲಿಸುವ ಮೂಲಕ ವೈದ್ಯರು ಮತ್ತು ಸಿಬ್ಬಂದಿಯವರು ಯಾವುದೇ ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಜನನಿ ಶಿಶು ಸುರಕ್ಷಾ ಕಾರ್ಯಕ್ರಮ ಯೋಜನೆಯಡಿ ದೊರಕುವ ಉಚಿತ ಊಟ, ಉಚಿತ ಔಷಧಿ, ಉಚಿತ ರಕ್ತ, ಉಚಿತ ಪರೀಕ್ಷೆ,

ಉಚಿತ ನಗು–ಮಗು ವಾಹನ ಮೂಲಕ ಮನೆಗೆ ಬಿಡುವ ಕುರಿತು ಹಾಗೂ ಜನನಿ ಸುರಕ್ಷಾ ಯೋಜನೆಯಡಿ ಸಹಾಯಧನವನ್ನು ಅವರ ಖಾತೆಗೆ ಜಮೆ ಮಾಡುವ ಬಗ್ಗೆ ನಿಗಾ ವಹಿಸುವುದರ ಮೂಲಕ ತಾಯಿ ಮತ್ತು ಮಗುವಿನ ಕಾಳಜಿಯೊಂದಿಗೆ ತಾಯಿ ಮರಣಗಳನ್ನು ಶೂನ್ಯಕ್ಕೆ ತರಲು ಸಾಧ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಎಮ್‌ಸಿಆರ್‌ಸಿ ಪ್ರಸೂತಿ ವಿಭಾಗದ ಡಾ.ರಾಮರಾಜ್, ಜಿಲ್ಲಾ ಆಸ್ಪತ್ರೆಯ ಪ್ರಸೂತಿ ತಜ್ಞೆ ಡಾ.ಶ್ರೀಲಕ್ಷ್ಮಿ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಡಿಎನ್‌ಓ ಗಿರೀಶ್ ಸೇರಿದಂತೆ ವೈದ್ಯಾಧಿಕಾರಿಗಳು, ಕ್ಷೇತ್ರ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

# ನಮ್ಮ ದೇಹಕ್ಕೆ ಮೆಗ್ನೀಸಿಯಮ್ ತುಂಬಾ ಮುಖ್ಯವೇಕೆ.. ಕೊರತೆಯಾದರೆ ಏನಾಗುತ್ತದೆ..?




ಬದಲಾಗುತ್ತಿರುವ ಜೀವನಶೈಲಿ ಮತ್ತು ಆಹಾರ ಪದ್ಧತಿಯಿಂದಾಗಿ ಸಾಕಷ್ಟು ಜನರು ವಿವಿಧ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಆರೋಗ್ಯ ಸಮಸ್ಯೆಗಳಿಗೆ ಮೂಲ ಕಾರಣವೇನು? ಈ ಬಗ್ಗೆ ಯಾರೂ ತಲೆಕೆಡಿಸಿಕೊಳ್ಳುವುದಿಲ್ಲ. ಆದರೆ. ಅನಾರೋಗ್ಯಕ್ಕೆ ಸರಿಯಾದ ಕಾರಣವನ್ನು ಸರಿಯಾದ ಸಮಯದಲ್ಲಿ ತಿಳಿದುಕೊಳ್ಳುವುದು ಮುಖ್ಯವಾಗುತ್ತದೆ.

ವಿಶೇಷವಾಗಿ ದೇಹದಲ್ಲಿನ ವಿಟಮಿನ್ ನಂತಹ ಕೊರತೆಯು ವಿವಿಧ ರೋಗಗಳಿಗೆ ಕಾರಣವಾಗುತ್ತದೆ. ಅದೇ ರೀತಿ ನಮ್ಮ ದೇಹವು ಕಾರ್ಯ ನಿರ್ವಹಿಸಲು ಮತ್ತು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಮೆಗ್ನೀಸಿಯಮ್ ಅತ್ಯಂತ ಅಗತ್ಯವಿರುವ 7 ಮುಖ್ಯ ಖನಿಜಗಳಲ್ಲಿ ಒಂದಾಗಿದೆ.

ಹೆಚ್ಚಿನ ಜನರು ಕೆಲವು ವಿಟಮಿನ್ ಗಳು ಮತ್ತು ಇತರ ಪೂರಕಗಳ ಮೌಲ್ಯವನ್ನು ಅರ್ಥಮಾಡಿಕೊಂಡಿದ್ದರೂ ಮೆಗ್ನೀಸಿಯಮ್ ಅನ್ನು ಕಡೆಗಣಿಸುತ್ತಾರೆ. ಮೆಗ್ನೀಸಿಯಮ್ ಕೊರತೆಯು ಸಾಕಷ್ಟು ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡುವುದರಿಂದ ಇದನ್ನು ನಿರ್ಲಕ್ಷ್ಯ ಮಾಡುವಂತಿಲ್ಲ.

ಮೆಗ್ನೀಸಿಯಮ್ ಅನೇಕ ಅಗತ್ಯ ದೈಹಿಕ ಕಾರ್ಯಗಳನ್ನು ನಿಯಂತ್ರಿಸಲು ಮತ್ತು ಸುಗಮಗೊಳಿಸಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ನಮ್ಮ ದೇಹದಲ್ಲಿನ ಜೀವರಾಸಾಯನಿಕ ಕ್ರಿಯೆಗಳನ್ನು ನಿಯಂತ್ರಿಸಲು ಸಹಾಯ ಮಾಡುವ 300ಕ್ಕೂ ಹೆಚ್ಚು ವಿಭಿನ್ನ ಕಿಣ್ವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದೆ. ನಮ್ಮ ದೇಹವು ಮೆಗ್ನೀಸಿಯಮ್ ಅನ್ನು ಉತ್ಪಾದಿಸುವುದಿಲ್ಲ. ಆದ್ದರಿಂದ ನಾವು ತಿನ್ನುವ ಆಹಾರದಿಂದ ಅಥವಾ ಆಹಾರ ಪೂರಕಗಳಿಂದ ಹೊರಗಿನ ಮೂಲಗಳಿಂದ ಮೆಗ್ನೀಸಿಯಂ ಅನ್ನು ಪಡೆಯಬೇಕು.

### ಶಕ್ತಿಯ ಕೊರತೆ

ಮೆಗ್ನೀಸಿಯಮ್ ಅಂಗಾಂಶಗಳಿಗೆ ಶಕ್ತಿ ನೀಡುತ್ತದೆ. ಇದರ ಕೊರತೆ ಆದಾಗ ದೇಹ ದುರ್ಬಲಗೊಳ್ಳುತ್ತದೆ. ದೇಹದಲ್ಲಿ ಮೆಗ್ನೀಸಿಯಮ್ ಮಟ್ಟವು ತುಂಬಾ ಕಡಿಮೆ ಇದ್ದಾಗ ಸೂಕ್ತ ಪ್ರಮಾಣದಲ್ಲಿ ಎಟಿಪಿ ಬಿಡುಗಡೆ ಮಾಡಲು ಸಾಧ್ಯವಾಗದು. ಇದರ ಪರಿಣಾಮವಾಗಿ ಬಳಲಿಕೆ, ನಿಶ್ಯಕ್ತಿ ಮತ್ತು ಸಹನೆ ಇಲ್ಲದಂತೆ ಆಗುವುದು. ಸೂಕ್ತ ಪ್ರಮಾಣದಲ್ಲಿ ವಿಶ್ರಾಂತಿ ಪಡೆದ ಬಳಿಕವೂ ಬಳಲಿಕೆ ಕಂಡು ಬರುತ್ತಲಿದ್ದರೆ, ಆಗ ಮೆಗ್ನೀಸಿಯಮ್ ಸೇವನೆ ಹೆಚ್ಚಿಸಬೇಕು.

ದೇಹದಲ್ಲಿ ಶಕ್ತಿಯ ಮೂಲವಾಗಿರುವಂತಹ ಅಡೆನೊಸಿನ್ ಟ್ರೈಫಾಸ್ಫೇಟ್ (ಎಟಿಪಿ) ಉತ್ಪತ್ತಿಯಲ್ಲಿ ಮೆಗ್ನೀಸಿಯಮ್ ಪ್ರಮುಖ ಪಾತ್ರ ವಹಿಸುವುದು. ಎಟಿಪಿ ಜೀವಶಾಸ್ತ್ರವಾಗಿ ಕ್ರಿಯಾತ್ಮಕವಾಗಲು ಮೆಗ್ನೀಸಿಯಮ್ ಬೇಕು. ಮೆಗ್ನೀಸಿಯಮ್ ಸರಿಯಾಗಿ ಇಲ್ಲದೆ ಇದ್ದರೆ ಆಗ ಅಂಗಾಂಶಗಳು ಶಕ್ತಿಯನ್ನು ಪರಿಣಾಮಕಾರಿಯಾಗಿ ಸಂಗ್ರಹಿಸಲು ತೊಂದರೆ ಅನುಭವಿಸುತ್ತದೆ.

### ಮೆಗ್ನೀಸಿಯಮ್ ಕೊರತೆಯಾಗಲು ಕಾರಣವೇನು..?

**ಅಸಮರ್ಪಕ ಆಹಾರ ಸೇವನೆ**

ಮೆಗ್ನೀಸಿಯಂ ಹೊಂದಿರುವ ಆಹಾರಗಳ ಸೇವನೆ ಕಡಿಮೆ ಇದ್ದರೆ, ದೇಹಕ್ಕೆ ಸಾಕಷ್ಟು ಮೆಗ್ನೀಸಿಯಂ ಲಭಿಸುವುದಿಲ್ಲ.

**ಜೀರ್ಣಾಂಗವ್ಯೂಹದ ಸಮಸ್ಯೆಗಳು**

ದೀರ್ಘಕಾಲಿಕ ಕಾಯಿಲೆ, ಸೆಲಿಯಾಕ್ ಕಾಯಿಲೆ ಮತ್ತು ಜೀರ್ಣಾಂಗವ್ಯೂಹದ ಶಸ್ತ್ರಚಿಕಿತ್ಸೆಯಂತಹ ಪರಿಸ್ಥಿತಿಗಳು ದೇಹವು ಮೆಗ್ನೀಸಿಯಂ ಅನ್ನು ಹೀರಿಕೊಳ್ಳುವುದನ್ನು ತಡೆಯುತ್ತದೆ.

**ಕೆಲ ಔಷಧಿಗಳ ಬಳಕೆ**

ಮೂತ್ರವರ್ಧಕಗಳು ಮತ್ತು ಪ್ರೋಟಾನ್ ಪಂಪ್ ಇನ್ಹಿಬಿಟರ್ಗಳು (ಕಕಖ) ಮೆಗ್ನೀಸಿಯಂ ದೇಹದಿಂದ ಹೊರಹಾಕುವಿಕೆಯನ್ನು ಹೆಚ್ಚಿಸಬಹುದು ಅಥವಾ ಹೀರಿಕೊಳ್ಳುವಿಕೆಯನ್ನು ಕಡಿಮೆ ಮಾಡಬಹುದು.

**ಮದ್ಯಪಾನ**

ದೀರ್ಘಕಾಲದ ಆಲ್ಕೋಹಾಲ್ ಸೇವನೆಯು ಮೆಗ್ನೀಸಿಯಂ ಅನ್ನು ದೇಹವು ಹೀರಿಕೊಳ್ಳುವ ಮತ್ತು ಉಳಿಸಿಕೊಳ್ಳುವ ಸಾಮರ್ಥ್ಯವನ್ನು ಕಡಿಮೆ ಮಾಡುತ್ತದೆ.

**ವಯಸ್ಸಾಗುವಿಕೆ**

ವಯಸ್ಸಾದಂತೆ, ದೇಹವು ಮೆಗ್ನೀಸಿಯಂ ಅನ್ನು ಹೀರಿಕೊಳ್ಳುವ ಮತ್ತು ಉಳಿಸಿಕೊಳ್ಳುವ ಸಾಮರ್ಥ್ಯವನ್ನು ಕಳೆದುಕೊಳ್ಳಬಹುದು, ಇದರಿಂದಾಗಿ ಕೊರತೆಯ ಪ್ರಮಾಣ ಹೆಚ್ಚಾಗುತ್ತದೆ.

### ಕೊರತೆ ನೀಗಿಸಲು ಇರುವ ಆಹಾರ ಮೂಲಗಳು



ಮೆಗ್ನೀಸಿಯಮ್ ಕುಂಬಳಕಾಯಿ ಬೀಜಗಳು, ಪಾಲಕ್, ಬೀನ್ಸ್, ಕಂದು ಅಕ್ಕಿ, ಕಡಲೆಕಾಯಿ, ಬಾದಾಮಿ ಮತ್ತು ಗೋಡಂಬಿಗಳಲ್ಲಿ ಕಂಡುಬರುತ್ತದೆ.

ಬೆಣ್ಣೆ ಹಣ್ಣು (ಆವಕಾಡೊ) ದ್ವಿದಳ ಧಾನ್ಯಗಳು, ಪೌಲ್ಟ್ರಿ ಮತ್ತು ಡಾರ್ಕ್ ಚಾಕೊಲೇಟ್ ಹಾಲಿನಲ್ಲಿಯೂ ಮೆಗ್ನೀಸಿಯಮ್ ಇರುವುದರಿಂದ ಅವುಗಳನ್ನು ಹೆಚ್ಚು ಸೇವಿಸುವುದು ಉತ್ತಮ. ಕೊರತೆ ಇದೆ ಎಂದು ಇವುಗಳನ್ನೇ ಹೆಚ್ಚು ಸೇವಿಸದಿರಿ. ಅತಿಯಾದರೆ, ಅಮೃತವೂ ವಿಷವಾಗುವುದು ಎಂಬ ಮಾತಿದೆ. ಹೀಗಾಗಿ ಹೆಚ್ಚುವರಿ ಮೆಗ್ನೀಸಿಯಮ್ ಅತಿಸಾರ ಅಥವಾ ಇತರ ಜೀರ್ಣಕಾರಿ ಅಸ್ವಸ್ಥತೆಯನ್ನು ಉಂಟುಮಾಡಬಹುದು.

### ಸ್ನಾಯು ಸೆಳೆತ

ಈ ಸಮಸ್ಯೆ ಸಾಮಾನ್ಯವಾಗಿದ್ದು ಈ ಸಮಸ್ಯೆಯಿಂದ ಬಳಲುತ್ತಿರುವವರು ಮನೆಮದ್ದು ಸಲಹೆಗಳನ್ನು ಆರಿಸಿಕೊಳ್ಳಬಹುದು. ಸೆಳೆತ ಮತ್ತು ನಡುಕ ಮೆಗ್ನೀಸಿಯಮ್ ಕೊರತೆಯ ಲಕ್ಷಣಗಳಾಗಿವೆ. ಆದರೆ ಇದಕ್ಕೆ ಬೇರೆ ಕಾರಣಗಳೂ ಇರಬಹುದು. ತೀವ್ರತರವಾದ ಪ್ರಕರಣಗಳಲ್ಲಿ ಮೆಗ್ನೀಸಿಯಮ್ ಕೊರತೆಯು ರೋಗಗ್ರಸ್ತವಾಗುವಿಕೆಗಳಿಗೆ ಕಾರಣವಾಗಬಹುದು.

### ಅಸಹಜ ಹೃದಯ ಬಡಿತ

ಮೆಗ್ನೀಸಿಯಮ್ ಕೊರತೆ ನಿಮ್ಮ ಹೃದಯ ಬಡಿತದ ಮೇಲೆ ಪರಿಣಾಮ ಬೀರುತ್ತದೆ. ಹೃದಯ ಸ್ನಾಯುವಿನ ಸಂಕೋಚನ ಮತ್ತು ವಿಶ್ರಾಂತಿಯನ್ನು ನಿಯಂತ್ರಿಸುವ ಅನೇಕ ಖನಿಜಗಳಲ್ಲಿ ಮೆಗ್ನೀಸಿಯಮ್ ಒಂದಾಗಿದೆ. ಇದರ ಕೊರತೆಯು ಹೃದಯ ಬಡಿತವನ್ನು ವೇಗಗೊಳಿಸುತ್ತದೆ. ಇದು ಹೃದಯ ಸಮಸ್ಯೆಗಳಿಗೆ ಕಾರಣವಾಗಬಹುದು.

### ಖಿನ್ನತೆ ಮತ್ತು ಆತಂಕ

ಮೆಗ್ನೀಸಿಯಮ್ ಕೊರತೆಯು ಮನಸ್ಥಿತಿಯ ಮೇಲೆ ಪರಿಣಾಮ ಬೀರುತ್ತದೆ. ದೇಹದಲ್ಲಿ ಕಡಿಮೆ ಮಟ್ಟದ ಮೆಗ್ನೀಸಿಯಮ್ ಖಿನ್ನತೆಯ ಅಪಾಯವನ್ನು ಹೆಚ್ಚಿಸುತ್ತದೆ. ಮೆಗ್ನೀಸಿಯಮ್ ನರವೈಜ್ಞಾನಿಕ ಮಾರ್ಗಗಳೊಂದಿಗೆ ಸಹಕರಿಸುತ್ತದೆ. ಇದು ಸರಿಯಾಗಿ ಕೆಲಸ ಮಾಡದಿದ್ದರೆ ಖಿನ್ನತೆ ಮತ್ತು ಆತಂಕದಂತಹ ಮಾನಸಿಕ ಅಸ್ವಸ್ಥತೆಗಳಿಗೆ ಕಾರಣವಾಗಬಹುದು.

### ದುರ್ಬಲ ಮೂಳೆಗಳು

ಕ್ಯಾಲ್ಸಿಯಂ ಮಾತ್ರವಲ್ಲ, ಮೆಗ್ನೀಸಿಯಮ್ ಕೂಡ ಮೂಳೆಗಳ ಆರೋಗ್ಯದೊಂದಿಗೆ ಬಲವಾದ ಸಂಬಂಧವನ್ನು ಹೊಂದಿದೆ. ದೇಹದಲ್ಲಿನ ಮೆಗ್ನೀಸಿಯಮ್'ನ ಶೇಕಡಾ 50 ಕ್ಕಿಂತ ಹೆಚ್ಚು ಮೂಳೆಗಳಲ್ಲಿ ಸಂಗ್ರಹವಾಗುತ್ತದೆ. ಮೆಗ್ನೀಸಿಯಮ್ ಕೊರತೆಯು ಆಸ್ಟಿಯೊಪೊರೋಸಿಸ್ ನಂತಹ ಮೂಳೆ ಸಂಬಂಧಿತ ಸಮಸ್ಯೆಗಳಿಗೆ ಕಾರಣವಾಗಬಹುದು.

## ಭಾರತದಲ್ಲಿ ಹೆಚ್ಚಾಗಿ ಮಹಿಳೆಯರಿಗೆ ಯಾಕೆ ಕ್ಯಾನ್ಸರ್ ಬರುತ್ತದೆ? ಆದ್ರೆ ಸಾಯುವವರಲ್ಲಿ ಪುರುಷರೇ ಅಧಿಕ!

**ನವದೆಹಲಿ:** ಭಾರತದಲ್ಲಿ ಮಹಿಳೆಯರಿಗೆ ಹೆಚ್ಚಾಗಿ ಕ್ಯಾನ್ಸರ್ ಬರುತ್ತಿದೆ. ಆದ್ರೆ ಸಾಯುವವರಲ್ಲಿ ಪುರುಷರೇ ಅಧಿಕ ಸಂಖ್ಯೆಯಲ್ಲಿದ್ದಾರೆ. ದೇಶದ ಇತ್ತೀಚಿನ ಕ್ಯಾನ್ಸರ್ ನೋಂದಣಿ ಅಧ್ಯಯನದಲ್ಲಿ ಇದು ಬಹಿರಂಗಗೊಂಡಿದೆ. ಎಲ್ಲಾ ಹೊಸ ಪ್ರಕರಣಗಳಲ್ಲಿ ಕೇವಲ ಅರ್ಧಕ್ಕಿಂತ ಹೆಚ್ಚು ಮಹಿಳೆಯರು ಕ್ಯಾನ್ಸರ್ ಹೊಂದಿದ್ದಾರೆ. ಆದರೆ ಪುರುಷರೇ ಹೆಚ್ಚಿನ ಸಂಖ್ಯೆಯಲ್ಲಿ ಸಾವನ್ನಪ್ಪಿದ್ದಾರೆ.

2022 ರಲ್ಲಿ ವಿಶ್ವದಾದ್ಯಂತ ಪ್ರತಿ 100,000 ಜನರಿಗೆ, ಸರಾಸರಿ 197 ಜನರಲ್ಲಿ ಕ್ಯಾನ್ಸರ್ ರೋಗನಿರ್ಣಯ ಮಾಡಲಾಗಿತ್ತು. ವರ್ಲ್ಡ್ ಕ್ಯಾನ್ಸರ್ ರಿಸರ್ಚ್ ಫಂಡ್ ಪ್ರಕಾರ, 186 ಮಹಿಳೆಯರಿಗೆ ಹೋಲಿಸಿದರೆ ಪುರುಷರ ಸಂಖ್ಯೆ 212 ಆಗಿತ್ತು. 2022 ರಲ್ಲಿ ಜಾಗತಿಕವಾಗಿ ಸುಮಾರು 20 ಮಿಲಿಯನ್ ಕ್ಯಾನ್ಸರ್ ಪ್ರಕರಣಗಳನ್ನು ಗುರುತಿಸಲಾಗಿದೆ. ಈ ಪೈಕಿ ಸುಮಾರು 10.3 ಮಿಲಿಯನ್ ಪುರುಷರು ಮತ್ತು9.7 ಮಿಲಿಯನ್ ನಷ್ಟು ಮಹಿಳೆಯರಲ್ಲಿ ಕ್ಯಾನ್ಸರ್ ಇತ್ತು.

ಅಮೆರಿಕನ್ ಕ್ಯಾನ್ಸರ್ ಸೊಸೈಟಿಯ ಪ್ರಕಾರ, ಅಮೆರಿಕದಲ್ಲಿ ಕ್ಯಾನ್ಸರ್ ನ ಅಂದಾಜು ಜೀವಿತಾವಧಿ ಅಪಾಯವು ಪುರುಷರು ಮತ್ತು ಮಹಿಳೆಯರಲ್ಲಿ ಸಮಾನವಾಗಿರುತ್ತದೆ. ಭಾರತದ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್, ಗರ್ಭಕಂಠ ಮತ್ತು ಅಂಡಾಶಯ ಕ್ಯಾನ್ಸರ್ ಸಾಮಾನ್ಯವಾಗಿದೆ. ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್‌ಗಳು ಶೇ. 40 ರಷ್ಟು ಸ್ತ್ರೀಯರಲ್ಲಿ ಕಂಡುಬಂದಿದೆ.

ಮಹಿಳೆಯರಲ್ಲಿನ ಕ್ಯಾನ್ಸರ್ ಗಳು:

ಗರ್ಭಕಂಠದ ಕ್ಯಾನ್ಸರ್ ಹೆಚ್ಚಾಗಿ ಹ್ಯೂಮನ್ ಪ್ಯಾಪಿಲೋಮವೈರಸ್ (ಊಕಗಿ) ನಂತಹ ಸೋಂಕುಗಳಿಗೆ ಸಂಬಂಧಿಸಿದೆ. ಸ್ತನ ಮತ್ತು ಅಂಡಾಶಯದ ಕ್ಯಾನ್ಸರ್ ಸಾಮಾನ್ಯವಾಗಿ ಹಾರ್ಮೋನುಗಳ ಅಂಶಗಳಿಂದ ಪ್ರಭಾವಿತವಾಗಿರುತ್ತದೆ. ಈ ಹೆಚ್ಚುತ್ತಿರುವ ಹಾರ್ಮೋನ್–ಸಂಬಂಧಿತ ಕ್ಯಾನ್ಸರ್‌ಗಳು ಪ್ರಕರಣಗಳು ವಿಳಂಬಿತ ಗರ್ಭಧಾರಣೆ, ಕಡಿಮೆ ಸ್ತನ್ಯಪಾನ, ಸ್ಥೂಲಕಾಯತೆ ಮತ್ತು ಕುಳಿತುಕೊಳ್ಳುವ ಅಭ್ಯಾಸ ಮತ್ತಿತರ ಜೀವಶೈಲಿಗಳೊಂದಿಗೆ ಸಂಬಂಧಿಸಿವೆ.

ಪುರುಷರಲ್ಲಿನ ಕ್ಯಾನ್ಸರ್:

ಪುರುಷರಲ್ಲಿ ಶ್ವಾಸಕೋಶ, ಬಾಯಿ ಕ್ಯಾನ್ಸರ್ ಮತ್ತು ಪ್ರಾಸ್ಟೇಟ್ ಕ್ಯಾನ್ಸರ್ ಹೆಚ್ಚಾಗಿ ಕಂಡುಬರುತ್ತದೆ. ತಂಬಾಕಿನಿಂದ ಬರುವ ಕ್ಯಾನ್ಸರ್ ಶೇ. 40 ರಷ್ಟು ತಡೆಗಟ್ಟಬಹುದಾದ ಕ್ಯಾನ್ಸರ್ ಆಗಿದೆ. ಆದರೆ, ಬಾಯಿ, ಶ್ವಾಸ ಕೋಶ ಕ್ಯಾನ್ಸರ್ ತುಂಬಾ ಅಪಾಯಕಾರಿಯಾಗಿದೆ. ಹಾಗಾದರೆ ಭಾರತದಲ್ಲಿ ಏನು ನಡೆಯುತ್ತಿದೆ? ಮಹಿಳೆಯರಲ್ಲಿ ಬೇಗನೆ ರೋಗ ನಿರ್ಣಯವಾಗುತ್ತಿದೆಯೇ? ಪುರುಷರ ಕ್ಯಾನ್ಸರ್‌ಗಳು ಹೆಚ್ಚು ಆಕ್ರಮಣಕಾರಿಯೇ ಅಥವಾ ಧೂಮಪಾನ ಮತ್ತು ತಂಬಾಕು ಜಗಿಯುವಂತಹ ಅಭ್ಯಾಸಗಳಿಂದ ನಿರ್ಲಕ್ಷ್ಯ ವಹಿಸುತ್ತಿದ್ದಾರೆಯೇ ಎನ್ನುವ ಗೊಂದಲ ದೇಶದಲ್ಲಿ ಸಾಮಾನ್ಯವಾಗಿದೆ.

## ಬಾಳೆಕಾಯಿ ಸೇವಿಸೋದ್ರಿಂದ ಆರೋಗ್ಯಕ್ಕೆ ತುಂಬಾ ಲಾಭಗಳಿವೆಯಂತೆ !



ಬಾಳೆಕಾಯಿಗಳನ್ನು ಸಾಮಾನ್ಯವಾಗಿ ಯಾವಾಗಲು ಅದರ ಸಿಹಿ ಗುಣಗಳು ಮತ್ತು ರುಚಿಗಾಗಿ ಎಲ್ಲರೂ ಇಷ್ಟ ಪಡುತ್ತಾರೆ. ಆದರೆ ಬಾಳೆಕಾಯಿಗಳನ್ನು ತಿನ್ನಬಹುದೇ? ಹೌದು ಹಸಿ ಬಾಳೆಕಾಯಿಗಳನ್ನು ತಿಂದಲ್ಲಿ ಇದರಲ್ಲಿ ಆರೋಗ್ಯಕ್ಕೆ ಬೇಕಾದ ಹಲವಾರು ಪ್ರಯೋಜನಗಳನ್ನು ನಾವು ಪಡೆಯಬಹುದು . ಬಾಳೆಕಾಯಿಗಳು ಅವುಗಳ ಮಾಧುರ್ಯ ಮತ್ತು ಬಹುಮುಖ ಪ್ರಯೋಜನಗಳಿಂದ ಹೆಚ್ಚಾಗಿ ಪ್ರೀತಿಸಲ್ಪಡುತ್ತವೆ, ಆದರೆ ಅವು ಕಚ್ಚಾ ಅಥವಾ ಹಸಿ ಕಾಯಿಗಳನ್ನು ನಿಮ್ಮ ಆಹಾರದಲ್ಲಿ ಸೇರಿಸುವುದರಿಂದ ಹಲವಾರು ಪೌಷ್ಟಿಕಾಂಶಗಳು ಮತ್ತು ಆರೋಗ್ಯಕರ ಬದಲಾವಣೆಗಳನ್ನು ನಿಮ್ಮ ದೇಹದಲ್ಲಿ ಮಾಡಬಹುದು .ಬಾಳೆಕಾಯಿ ಅವಶ್ಯಕ ವಿಟಮಿನ್ ಗಳು ಮತ್ತು ಖನಿಜಾಂಶಗಳ ಕಣಜವಾಗಿದೆ. ಇವು. ಬಾಳೆಕಾಯಿ ವಿಟಮಿನ್ ಸಿ , ವಿಟಮಿನ್ ಬಿ6, ಮತ್ತು ಪೊಟ್ಯಾಷಿಯಂಗಳ ಉತ್ತಮ ಮೂಲವಾಗಿದೆ. ವಿಟಮಿನ್ ಸಿ ಯು ವಿಟಮಿನ್ ಸಿ ಪ್ರತಿರಕ್ಷಣಾ ಕಾರ್ಯಕ್ಕೆ ನಿರ್ಣಾಯಕವಾಗಿದೆ ಮತ್ತು ಆಹಾರವನ್ನು ಶಕ್ತಿಯ ರೂಪದಲ್ಲಿ ಪರಿವರ್ತಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಪೊಟ್ಯಾಸಿಯಂ ಹೃದಯದ ಆರೋಗ್ಯ ಮತ್ತು ಸ್ನಾಯುಗಳ ಕಾರ್ಯ ನಿರ್ವಹಿಸಲು ಸಹಾಯ ಮಾಡುತ್ತದೆ. ರೆಸಿಸ್ಟೆಂಟ್ ಸ್ಟಾರ್ಚ್ ಅಥವಾ ನಿರೋಧಕ ಪಿಷ್ಟವನ್ನು ಬಾಳೆಕಾಯಿ ಅಧಿಕ ಮಟ್ಟದಲ್ಲಿ ಹೊಂದಿರುತ್ತದೆ. ಪಿಷ್ಟವು ಗ್ಲೂಕೋಸ್ ನ ಹೀರುವಿಕೆಯನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಮಧುಮೇಹವನ್ನು ನಿರ್ವಹಿಸಲು ಮತ್ತು ಒಟ್ಟಾರೆ ಚಯಾಪಚಯ ಆರೋಗ್ಯವನ್ನು ಸುಧಾರಿಸುವಲ್ಲಿ ಉತ್ತಮವಾಗಿದೆ.

## ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿ ಕೂದಲಿಗೆ ಬಳಸಿದ್ರೆ ಕೂದಲು ದಟ್ಟವಾಗಿ ಬೆಳೆಯುತ್ತೆ



ಉದ್ದವಾದ, ದಟ್ಟವಾದ ಕೂದಲು ಯಾರಿಗೆ ಇಷ್ಟವಿರಲ್ಲ ಹೇಳಿ... ಕೂದಲು ಮಹಿಳೆಯರ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಹಾಗಾಗಿ ಆರೋಗ್ಯಕರ ಕೂದಲನ್ನು ಹೊಂದಲು ಮಹಿಳೆಯರು ಹಲವಾರು ಬಗೆಯ ದುಬಾರಿ ಹೇರ್ ಪ್ರೊಡಕ್ಟ್ ಗಳನ್ನು ಬಳಸುತ್ತಾರೆ. ಆದರೆ ಇದರಿಂದ ಉತ್ತಮ ಫಲಿತಾಂಶ ಸಿಕ್ಕಿದರೂ ಕೂಡ ಅದು ಹೆಚ್ಚು ಕಾಲ ಉಳಿಯುವುದಿಲ್ಲ. ಹಾಗಾಗಿ ನಿಮ್ಮ ಕೂದಲು ದಟ್ಟವಾಗಿ ಉದ್ದವಾಗಿ, ಆರೋಗ್ಯಕರವಾಗಿ ಬೆಳೆಯಲು ಆಯುರ್ವೇದದಲ್ಲಿ ತಿಳಿಸಿದಂತೆ ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿಯಲ್ಲಿ ಬಳಸಿ.ಮೆಂತ್ಯ ಮತ್ತು ದಾಸವಾಳ ಆರೋಗ್ಯಕರ ಕೂದಲನ್ನು ಹೊಂದಲು ಆಯುರ್ವೇದದಲ್ಲಿ ಬಳಸುವ ಎರಡು ಪ್ರಮುಖ ಪದಾರ್ಥಗಳಾಗಿವೆ. ನೆತ್ತಿಯ ಪೋಷಣೆ, ಕೂದಲಿನ ಬೆಳವಣಿಗೆ, ಕೂದಲಿನ ಬುಡವನ್ನು ಗಟ್ಟಿಗೊಳಿಸುವುದು ಹೀಗೆ ಒಟ್ಟಾರೆ ಕೂದಲಿನ ಆರೋಗ್ಯಕ್ಕಾಗಿ ಅವುಗಳನ್ನು ಬಹಳ ಹಿಂದಿನಿಂದಲೂ ಬಳಸಲಾಗುತ್ತಿದೆ.ಮೆಂತ್ಯಭಾರತದಲ್ಲಿ ಸಾಂಬಾರು ಪದಾರ್ಥಗಳಲ್ಲಿ ಹೆಚ್ಚಾಗಿ ಬಳಸುವಂತಹ ಮೆಂತ್ಯ ಬೀಜಗಳು ಪ್ರೋಟೀನ್ಗಳು, ಜೀವಸತ್ವಗಳು ಮತ್ತು ಖನಿಜಗಳಿಂದ ಸಮೃದ್ಧವಾಗಿದೆ, ಇದು ಕೂದಲಿಗೆ ಹಲವಾರು ರೀತಿಯಲ್ಲಿ ಪ್ರಯೋಜನವನ್ನು ನೀಡುತ್ತದೆ. ಮೆಂತ್ಯವು ಪ್ರೋಟೀನ್ಗಳು ಮತ್ತು ನಿಕೋಟಿನಿಕ್ ಆಮ್ಲವನ್ನು ಹೊಂದಿರುತ್ತದೆ, ಇದು ಕೂದಲಿನ ಕಿರುಚೀಲಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ, ಕೂದಲು ಉದುರುವುದನ್ನು ಕಡಿಮೆ ಮಾಡುತ್ತದೆ ಮತ್ತು ಕೂದಲಿನ ತುದಿ ಒಡೆಯುವುದನ್ನು ತಡೆಯುತ್ತದೆ.ಇದು ನೆತ್ತಿಯ ರಕ್ತದ ಹರಿವನ್ನು ಹೆಚ್ಚಿಸುವುದರ ಮೂಲಕ ಕೂದಲು ಬೆಳೆಯಲು ಸಹಾಯ ಮಾಡುತ್ತದೆ ಮತ್ತು ಇದರಿಂದ ಕೂದಲುದುರುವುದು ಸಹ ಕಡಿಮೆಯಾಗುತ್ತದೆ.

## ಗುಲಾಬಿ ರಂಗಿನ ತುಟಿಯಲಿಪ್ ಬಾಮ್‌ಗಳು



**ಗುಲಾಬಿ ಅಥವಾ ಕೆಂಪು ತುಟಿಗಳು ಮುಖದ ಅಂದವನ್ನು ಹೆಚ್ಚಿಸುತ್ತವೆ. ಮುಖಕ್ಕೆ ಎಷ್ಟೇ ಮೇಕಪ್ ಬಳಿದರೂ ಕೂಡ ಮುಖ ಸುಂದರವಾಗಿ ಕಾಣುವುದು ತುಟಿಗಳಿಗೆ ಲಿಪ್ ಸ್ಟಿಕ್ ಹಚ್ಚಿದ ಮೇಲೆಯೇ. ಹಾಗಾಗಿ ತುಟಿಗಳನ್ನು ಆರೋಗ್ಯಕರವಾಗಿ ನೋಡಿಕೊಳ್ಳಬೇಕು. ಇದರಿಂದ ತುಟಿಗಳು ಕೆಂಪು ಅಥವಾ ಗುಲಾಬಿ ಬಣ್ಣದಲ್ಲಿರುತ್ತದೆ. ಆದರೆ ತುಟಿಗಳಿಗೆ ಲಿಪ್ಸ್ಟಿಕ್ ಅನ್ನು ಹೆಚ್ಚಾಗಿ ಬಳಸುವುದರಿಂದ ಅದರಲ್ಲಿರುವ ರಾಸಾಯನಿಕಗಳು ತುಟಿಗಳ ಚರ್ಮಕ್ಕೆ ಹಾನಿ ಮಾಡಿ ತುಟಿ ಕಪ್ಪಾಗುವಂತೆ ಮಾಡುತ್ತವೆ. ಹಾಗಾಗಿ ತುಟಿಗಳ ಬಗ್ಗೆ ಕಾಳಜಿವಹಿಸು ವುದು ಅತ್ಯಗತ್ಯ.ಈ ಒಳ್ಳೆಯ ಲಿಪ್ ಬಾಮ್ಗಳಲ್ಲಿ ತುಟಿಗಳನ್ನು ಆರೈಕೆ ಮಾಡುವಂತಹ ಈ 5 ಪದಾರ್ಥಗಳು ಇರುತ್ತದೆ. ಆ 5 ಪದಾರ್ಥಗಳು ಯಾವುದೆಂಬುದನ್ನು ನೋಡೋಣ.**

**ವಿಟಮಿನ್ ಇ**

ವಿಟಮಿನ್ ಇ' ಉತ್ಕರ್ಷಣ ನಿರೋಧಕಗಳು ಒರಟು ತುಟಿಗಳನ್ನು ಗುಣಪಡಿಸಲು ಉತ್ತಮವಾಗಿ ಕಾರ್ಯನಿರ್ವಹಿಸುತ್ತವೆ. ಇದು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ

ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ ತಡೆಯುತ್ತದೆ. ಆದ್ದರಿಂದ ನೀವು ಒಣ ಮತ್ತು ಕಿರಿಕಿರಿಯ ತುಟಿಗಳನ್ನು ಹೊಂದಿದ್ದರೆ, ವಿಟಮಿನ್ ಇ ಸಂಯುಕ್ತವನ್ನು ಹೊಂದಿರುವ ಲಿಪ್ ಬಾಮ್ ಅನ್ನು ಖರೀದಿಸಿ ಬಳಸಿ

**ಶಿಯಾ ಬೆಣ್ಣೆ**

ಶಿಯಾ ಬೆಣ್ಣೆ ತುಟಿಗಳಿಗೆ ನೈಸರ್ಗಿಕವಾಗಿ ಮಾಯಿಶ್ಚರೈಸರ್ ಮಾಡುತ್ತದೆ. ವಿಟಮಿನ್ ಎ ಮತ್ತು ಇ ಎರಡನ್ನೂ ಒಳಗೊಂಡಿರುವ ಶಿಯಾ ಬೆಣ್ಣೆ ತುಟಿಗಳ ಮೇಲಿನ ಹಾನಿಗೊಳಗಾದ ಚರ್ಮವನ್ನು ಸರಿಪಡಿಸಲು ಸಹಾಯ ಮಾಡುತ್ತದೆ.ಇದರ ಉತ್ಕರ್ಷಣ ನಿರೋಧಕಗಳು ಮತ್ತು ಉರಿಯೂತದ ಗುಣಲಕ್ಷಣಗಳು ತುಟಿಯ ಊತವನ್ನು ಕಡಿಮೆ ಮಾಡುತ್ತದೆ. ಮತ್ತು ತುಟಿ ದಪ್ಪವಾಗಿ ಕಾಣುವಂತೆ ಮಾಡುತ್ತದೆ. ಹಾಗಾಗಿ ತುಟಿಗಳು ಯಾವಾಗಲೂ ಶುಷ್ಕ ಮತ್ತು ಚಪ್ಪಟೆಯಾಗಿದ್ದರೆ ಶಿಯಾ ಬೆಣ್ಣೆ ಇರುವಂತಹ ಲಿಪ್ ಬಾಮ್ ಬಳಸಿ ಆಶ್ಚರ್ಯಕರ ಫಲಿತಾಂಶವನ್ನು ಪಡೆಯಿರಿ.

**ತೆಂಗಿನ ಎಣ್ಣೆ**

ತೆಂಗಿನ ಎಣ್ಣೆ ನೈಸರ್ಗಿಕ ಮಾಯಿಶ್ಚರೈಸಿಂಗ್ ಏಜೆಂಟ್ ಆಗಿದೆ. ಇದು ಚರ್ಮದ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ. ತುಟಿಗಳಂತಹ ತೆಳುವಾದ ಚರ್ಮವನ್ನು ಹೊಂದಿರುವ ಭಾಗಗಳಿಗೆ ತೆಂಗಿನ ಎಣ್ಣೆ ಹಚ್ಚುವುದರಿಂದ ಸಮಸ್ಯೆಗಳು ಬೇಗನೆ ವಾಸಿಯಾಗುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ನಡೆಸಿದ ಅಧ್ಯಯನದ ಪ್ರಕಾರ, ತೆಂಗಿನ ಎಣ್ಣೆಯ ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು ಚರ್ಮದ ಸೋಂಕನ್ನು ತಡೆಯುತ್ತವೆ. ಇದರ ಎಮೋಲಿಯಂಟ್ ಅಂಶ ತುಟಿಗಳನ್ನು ಯಾವಾಗಲೂ ಹೈಡ್ರೇಟ್ ಮತ್ತು ತೇವಾಂಶದಿಂದ ಕೂಡಿರುವಂತೆ ಮಾಡುತ್ತದೆ.

**ಜೊಜೊಬಾ ಎಣ್ಣೆ**

ಜೊಜೊಬಾ ಎಣ್ಣೆ ವಿಟಮಿನ್ ಇ ಯ ಜೊತೆಗೆ ಇತರ ಪೋಷಕಾಂಶಗಳನ್ನು ಹೊಂದಿದೆ. ಇದರ ನೈಸರ್ಗಿಕ ಮಾಯಿಶ್ಚರೈಸಿಂಗ್ ಗುಣವು ತುಟಿಯ ಚರ್ಮವನ್ನು ಮೃದುವಾಗಿಸಿ ಹೊಳೆಯುವಂತೆ ಮಾಡುತ್ತದೆ.

ಇದು ತುಟಿಗಳನ್ನು ಸೂರ್ಯನ ಹಾನಿಕಾರಕ ಕಿರಣಗಳಿಂದ ರಕ್ಷಿಸುತ್ತದೆ ಮತ್ತು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಒಳ್ಳೆಯದು ಎಂದು ಪರಿಗಣಿಸಲಾಗಿದೆ. ಜೊಜೊಬಾ ಎಣ್ಣೆ ಇರುವಂತಹ ಲಿಪ್ ಬಾಮ್ ಗಳು ನಿಮ್ಮ ತುಟಿಯ ಅನೇಕ ಸಮಸ್ಯೆಗಳನ್ನು ಪರಿಹಾರ ಮಾಡುತ್ತವೆ.

## ಕೊಲೆಸ್ಟ್ರಾಲ್, ಶುಗರ್ ಇರೋರು ಬೆಳಗ್ಗೆ ಒಂದು ಹಿಡಿ ಮೊಳಕೆಯೊಡೆದ ಈ ಕಾಳು ತಿನ್ನಬೇಕು



ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ 1 ಹಿಡಿ ಮೊಳಕೆಯೊಡೆದ ಮೆಂತ್ಯವನ್ನು ಸೇವಿಸಿದರೆ ಕೊಲೆಸ್ಟ್ರಾಲ್ ಮತ್ತು ಮಧುಮೇಹದಿಂದ ಮುಕ್ತಿ ಸಿಗುತ್ತದೆ. ಮೊಳಕೆಯೊಡೆದ ಮೆಂತ್ಯವು ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಇದರ ಸೇವನೆಯು ಆರೋಗ್ಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನಕಾರಿ ಎಂದು ಸಾಬೀತುಪಡಿಸುತ್ತದೆ. ಮೆಂತ್ಯ ಬೀಜಗಳನ್ನು ನೀರಿನಲ್ಲಿ ನೆನೆಸಿದ ನಂತರ ಮೊಳಕೆ ಭರಿಸಿ.

ಮೊಳಕೆಯೊಡೆಯುವುದರಿಂದ ಮೆಂತ್ಯದಲ್ಲಿನ ಅನೇಕ ಪೋಷಕಾಂಶಗಳ ಪ್ರಮಾಣವು ಹೆಚ್ಚಾಗುತ್ತದೆ.

ಇದು ಆರೋಗ್ಯಕ್ಕೆ ಇನ್ನಷ್ಟು ಪ್ರಯೋಜನಕಾರಿಯಾಗಿದೆ.ಮೊಳಕೆಯೊಡೆದ ಮೆಂತ್ಯದ ಪ್ರಯೋಜನಗಳುಮೊಳಕೆಯೊಡೆದ ಮೆಂತ್ಯದಲ್ಲಿ ಇರುವ ಫೈಬರ್ ಮತ್ತು ಇತರ ಪೋಷಕಾಂಶಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದು ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುವ ಮೂಲಕ ಮತ್ತು ದೇಹದಲ್ಲಿ ಸಕ್ಕರೆಯ ಹೀರಿಕೊಳ್ಳುವಿಕೆಯನ್ನು ನಿಧಾನಗೊಳಿಸುವ ಮೂಲಕ ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿಯಾಗಿದೆ. ಮೊಳಕೆಯೊಡೆದ ಮೆಂತ್ಯದಲ್ಲಿರುವ ಲೆಕ್ಟಿನ್ ಎಂಬ ಅಂಶವು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಮತ್ತು ಉತ್ತಮ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.ಇದು ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಕೂದಲನ್ನು ಬಲವಾಗಿ ಮತ್ತು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ. ಕೂದಲು ಉದುರುವುದನ್ನು ತಡೆಯಲು ಮತ್ತು ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಫೈಬರ್ ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಇದು ಮಲಬದ್ಧತೆ,

ಆಮ್ಲೀಯತೆ ಮತ್ತು ಅಜೀರ್ಣದಂತಹ ಸಮಸ್ಯೆಗಳಿಂದ ಪರಿಹಾರವನ್ನು ನೀಡುತ್ತದೆ. ಇದು ಕಡಿಮೆ ಕ್ಯಾಲೋರಿ ಅಂಶವನ್ನು ಹೊಂದಿದೆ ಮತ್ತು ದೀರ್ಘಕಾಲದವರೆಗೆ ಹೊಟ್ಟೆಯನ್ನು ತುಂಬಿರುವಂತೆ ಮಾಡುತ್ತದೆ. ಇದು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ.ಮೊಳಕೆಯೊಡೆದ ಮೆಂತ್ಯವು ಆಂಟಿಆಕ್ಸಿಡೆಂಟ್ಗಳನ್ನು ಹೊಂದಿದ್ದು ಅದು ಫ್ರೀ ರಾಡಿಕಲ್ಗಳಿಂದ ಚರ್ಮವನ್ನು ರಕ್ಷಿಸುತ್ತದೆ ಮತ್ತು ಆರೋಗ್ಯಕರವಾಗಿರುತ್ತದೆ. ಇದು ಮೊಡವೆ ಮತ್ತು ಕಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

## ಕಿಡ್ನಿಸ್ಟೋನ್ ನಿವಾರಿಸಲು ಬೆಸ್ಟ್ ಅಂತೆ ಈ ಪುಟ್ಟ ಗಿಡ



ನೆಲನೆಲ್ಲಿಯನ್ನು ನೀವು ನೋಡಿರಬಹುದು, ಕೆಲವೊಮ್ಮೆ ಇದು ರಸ್ತೆ ಬದಿಯಲ್ಲಿ, ಗದ್ದೆ ಬದಿಯಲ್ಲೂ, ತೋಟದಲ್ಲೂ ಬೆಳೆದಿರುತ್ತದೆ. ಇದೊಂದು ಪುಟ್ಟ ಸಸ್ಯವಾಗಿದ್ದು, ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿದೆ. ನೆಲನೆಲ್ಲಿಯನ್ನು ಕಷಾಯ ಮಾಡಿ ಕುಡಿಯುವುದರಿಂದ ಹಲವಾರು ರೋಗಗಳಿಂದ ಪಾರಾಗಬಹುದು. ನಾವಿಂದು ಈ ಪುಟ್ಟ ಗಿಡದಿಂದ ಯಾವೆಲ್ಲಾ ಆರೋಗ್ಯ ಸಮಸ್ಯೆಗಳಿಂದ ಪಾರಾಗಬಹುದು ಎನ್ನುವುದನ್ನು ತಿಳಿಯೋಣ.ನೆಲನೆಲ್ಲಿಯನ್ನು "ಸ್ಟೋನ್ ಬ್ರೇಕರ್" ಎಂದೂ ಕರೆಯುತ್ತಾರೆ ಏಕೆಂದರೆ ಇದು ಮೂತ್ರಪಿಂಡದ ಕಲ್ಲುಗಳಿಗೆ ಚಿಕಿತ್ಸೆ ನೀಡಬಲ್ಲದು. ಈ ಗಿಡ ಮೂಲಿಕೆಯು ಕ್ಷಾರೀಯ ಗುಣಗಳನ್ನು ಹೊಂದಿದೆ, ಇದು ಮೂತ್ರಪಿಂಡದ ಕಲ್ಲುಗಳು ಮತ್ತು ಪಿತ್ತಗಲ್ಲುಗಳ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ. ಆಯುರ್ವೇದ ಔಷಧದ ಪ್ರಕಾರ, ಮೂತ್ರಪಿಂಡದ ಕಲ್ಲು ಉತ್ಪಾದನೆಗೆ ನೆಲನೆಲ್ಲಿ ಅತ್ಯಂತ ಭರವಸೆಯ ಚಿಕಿತ್ಸೆಯಾಗಿದೆ.

ಪಿತ್ತಗಲ್ಲುಗಳು ಪಿತ್ತಕೋಶದಲ್ಲಿ ರೂಪುಗೊಳ್ಳುವ ಜೀರ್ಣಕಾರಿ ದ್ರವದ ಸಣ್ಣ, ಗಟ್ಟಿಯಾದ ನಿಕ್ಷೇಪಗಳಾಗಿವೆ. ಅವು ಸಾಮಾನ್ಯವಾಗಿ ಕೊಲೆಸ್ಟ್ರಾಲ್ ಅಥವಾ ಬೈಲಿರುಬಿನ್ನಿಂದ ಕೂಡಿರುತ್ತವೆ ಮತ್ತು ಗಾತ್ರ ಮತ್ತು ಪ್ರಮಾಣದಲ್ಲಿರುತ್ತವೆ. ಪಿತ್ತಗಲ್ಲು ಹೊಂದಿರುವ ಹೆಚ್ಚಿನ ಜನರು ರೋಗಲಕ್ಷಣಗಳನ್ನು ಅನುಭವಿಸುವುದಿಲ್ಲ ಅಥವಾ ಚಿಕಿತ್ಸೆಯ ಅಗತ್ಯವಿರುವುದಿಲ್ಲ. ಒಂದು ವೇಳೆ ನೀವು ತೊಡಕುಗಳನ್ನು ಅನುಭವಿಸಿದರೆ ಔಷಧಿ ಅಥವಾ ಶಸ್ತ್ರಚಿಕಿತ್ಸೆಯ ಅಗತ್ಯವಿರುತ್ತದೆ.

ಇದು ಹೊಟ್ಟೆಯ ಹುಣ್ಣುಗಳಿಗೆ ಕಾರಣವಾಗಿದೆ. ಜನರಲ್ಲಿ ಹೊಟ್ಟೆಯ ಹುಣ್ಣುಗಳಿಗೆ ಚಿಕಿತ್ಸೆ ನೀಡಲು ನೆಲನೆಲ್ಲಿಯನ್ನು ಹೊಂದಿರುವ ಮೌಖಿಕ ಪೂರಕವು ಉಪಯುಕ್ತವಾಗಿದೆಯೇ ಎಂದು ನಿರ್ಧರಿಸಲು ಹೆಚ್ಚಿನ ಸಂಶೋಧನೆಯ ಅಗತ್ಯವಿದೆ.ನೆಲನೆಲ್ಲಿಯ ಪೂರಕಗಳು ಕಾರ್ಯನಿರ್ವಹಿಸುವ ವಿಧಾನವು ಟೆಸ್ಟ್–ಟ್ಯೂಬ್ ಸಂಶೋಧನೆಯಲ್ಲಿ ಬಳಸಲಾಗುವ ಅತ್ಯಂತ ಕೇಂದ್ರೀಕೃತ ಸಾರಗಳಿಗಿಂತ ಭಿನ್ನವಾಗಿದೆ, ಇವುಗಳನ್ನು ನೇರವಾಗಿ ಬ್ಯಾಕ್ಟೀರಿಯಾದ ಜೀವಕೋಶಗಳಿಗೆ ನೀಡಲಾಗುತ್ತದೆ.ನೆಲನೆಲ್ಲಿಯಲ್ಲಿ ಒಳಗೊಂಡಿರುವ ಉತ್ಕರ್ಷಣ ನಿರೋಧಕಗಳು ಕೆಲವು ಪ್ರಾಣಿಗಳ ರಕ್ತದಲ್ಲಿನ ಸಕ್ಕರೆಯ ಪ್ರಮಾಣವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಆದಾಗ್ಯೂ, ಹೆಚ್ಚಿನ ಮಾನವ ಅಧ್ಯಯನಗಳು ಅಗತ್ಯವಿದೆ.ಸಾಂಪ್ರದಾಯಿಕ ಚೀನೀ ಔಷಧದ ಪ್ರಕಾರ, ನೆಲನೆಲ್ಲಿ ಯಕೃತ್ತಿನ ಕಾರ್ಯವನ್ನು ಹೆಚ್ಚಿಸುವ ಮೂಲಿಕೆಯಾಗಿದೆ. ನೆಲನೆಲ್ಲಿ ಹೆಪಟೈಟಿಸ್ ಬಿ ವೈರಸ್ನ ಹರಡುವಿಕೆ ಮತ್ತು ಬೆಳವಣಿಗೆಯನ್ನು ತಡೆಯುತ್ತದೆ, ವೈರಸ್ನ ರಕ್ತದ ಮಟ್ಟವನ್ನು ಕಡಿಮೆಗೊಳಿಸಿಸುತ್ತದೆ, ಮತ್ತು ಯಕೃತ್ತಿನ ಕಾರ್ಯವನ್ನು ಪುನಃಸ್ಥಾಪಿಸಿತು.

## ಶುಂಠಿ ಜ್ಯೂಸ್ ಕುಡಿಯೋದ್ರಿಂದ ಎಷ್ಟೆಲ್ಲಾ ಲಾಭಗಳಿವೆ ನೋಡಿ



ಶುಂಠಿಯು ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಗಿಡಮೂಲಿಕೆಗಳಾಗಿದೆ. ಶುಂಠಿ ರಸವನ್ನು ಸೇವಿಸುವುದರಿಂದ ಹಲವಾರು ಸಣ್ಣ ಪುಟ್ಟ ರೋಗಗಳನ್ನು ದೂರವಿಡಬಹುದು. ನೀವು ಇದನ್ನು ಹಸಿಯಾಗಿಯೂ ಸೇವಿಸಬಹುದು ಅಥವಾ ಒಣ ಶುಂಠಿಯನ್ನಾದರೂ ಸೇವಿಸಬಹುದು.ಶುಂಠಿ ರಸವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ, ಇದು ಆಕ್ಸಿಡೇಟಿವ್ ಒತ್ತಡ ಮತ್ತು ಸೆಲ್ಯುಲಾರ್ ಹಾನಿಗೆ ಕಾರಣವಾಗುವ ಫ್ರೀ ರಾಡಿಕಲ್ಗಳನ್ನು ಎದುರಿಸುವ ಮೂಲಕ ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ. ಒಟ್ಟಾರೆ ಆರೋಗ್ಯ ಮತ್ತು ಸೋಂಕುಗಳ ವಿರುದ್ಧ ಸ್ಥಿತಿಸ್ಥಾಪಕತ್ವವನ್ನು ಕಾಪಾಡಿಕೊಳ್ಳಲು ಇದು ಅತ್ಯಗತ್ಯ.ಶುಂಠಿ ರಸವು ಅದರ ಜೀರ್ಣಕಾರಿ ಪ್ರಯೋಜನಗಳಿಗಾಗಿ ಹೆಸರುವಾಸಿಯಾಗಿದೆ. ಇದು ನೈಸರ್ಗಿಕ ಕಿಣ್ವಗಳನ್ನು ಹೊಂದಿದ್ದು, ಇದು ಆಹಾರವನ್ನು ಒಡೆಯಲು ಸಹಾಯ ಮಾಡುತ್ತದೆ ಮತ್ತು ಜೀರ್ಣಾಂಗವ್ಯೂಹದ ಸುಗಮ ಕಾರ್ಯನಿರ್ವಹಣೆಯನ್ನು ಬೆಂಬಲಿಸುತ್ತದೆ. ಇದು ಹೊಟ್ಟೆ ಉಬ್ಬುವುದು ಮತ್ತು ಅಜೀರ್ಣದಂತಹ ರೋಗಲಕ್ಷಣಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ.

ಶುಂಠಿಯನ್ನು ಸೇವಿಸುವುದರಿಂದ ವಾಕರಿಕೆ, ಬೆಳಗಿನ ಬೇನೆ ಮತ್ತು ಮಲ ಬದ್ಧತೆ ಸೇರಿದಂತೆ ಹೊಟ್ಟೆಯ ಇನ್ನಿತರ ಸಮಸ್ಯೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಅಸ್ಥಿರತೆಯ ಭಾವನೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಸಾಂಪ್ರದಾಯಿಕ ಔಷಧಿಗಳಿಗೆ ನೈಸರ್ಗಿಕ ಪರ್ಯಾಯವನ್ನು ನೀಡುತ್ತದೆ

## ಡಿಕೆಶಿ ಪರಪ್ಪನ ಅಗ್ರಹಾರಕ್ಕೆ ಶಾಸಕರ ಸಹಿ ಹಾಕಿಸಲು ಹೋಗಿದ್ದಾರೆ: ಆರ್ ಅಶೋಕ್ ಗಂಭೀರ ಆರೋಪ



**ಬೆಂಗಳೂರು:** ಡಿಕೆ ಶಿವಕುಮಾರ್ ಅವರು ಪರಪ್ಪನ ಅಗ್ರಹಾರಕ್ಕೆ ಜೈಲಿನಲ್ಲಿ ಇರುವ ಇಬ್ಬರು ಶಾಸಕರ ಸಹಿ ಹಾಕಿಸಲೇ ಹೋಗಿದ್ದಾರೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ.

ಶಿವಕುಮಾರ್ ಅವರು ಪರಪ್ಪನ ಆಗ್ರಹಾರದಲ್ಲಿ ಶಾಸಕರಾದ ವೀರೇಂದ್ರ ಪಪ್ಪಿ ಹಾಗೂ ವಿನಯ್ ಕುಲಕರ್ಣಿ ಅವರನ್ನು ಭೇಟಿ ಮಾಡಿರುವ ಹಿನ್ನೆಲೆಯಲ್ಲಿ ಈ ಮಾತನ್ನು ಹೇಳಿದರು.

ಶಾಸಕರ ದೆಹಲಿ ಟೂರ್, ಸಿದ್ದರಾಮಯ್ಯ ಮನೆಯಲ್ಲಿ ಡಿನ್ನರ್, ಡಿಕೆಶಿ ನಿವಾಸದಲ್ಲಿ ಬ್ರೇಕ್ ಫಾಸ್ಟ್ ಇಷ್ಟೇ ನಡೆ–ಯುತ್ತಿದೆ. ರೈತರ ಆತ್ಮಹತ್ಯೆ ನಡೆಯುತ್ತಿದೆ. ಸಮಾಜವಾದಿ ಸರ್ಕಾರ ಅಲ್ಲ, ಇದು ಮಜವಾದಿ ಸರ್ಕಾರ ಹಾಗೂ ಜನರ ಪಾಲಿಗೆ ಸರ್ಕಾರ ಸತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಡಿಕೆ ಶಿವಕುಮಾರ್ ಡೀಲ್ ಆದ ಬಳಿಕ ಸಿದ್ದರಾಮಯ್ಯ ಡಲ್ ಆಗಿದ್ದಾರೆ. ನಾನೇ ಐದು ವರ್ಷ ಸಿಎಂ ಎಂದವರು ಇದೀಗ ಪ್ಲೇಟ್ ಚೇಂಜ್ ಮಾಡಿದ್ದಾರೆ. ಕಾಲ ಹತ್ತಿರ ಬರುತ್ತದೆ ಎಂದು ಭವಿಷ್ಯ ನಡಿದರು.

ಡಿಕೆ ಜೋತಿಷ್ಯ ನಂಬುತ್ತಾರೆ. ನಾಯಕತ್ವ ಬದಲಾವಣೆ ಆಗಲ್ಲ ಅಂದರೆ ಯಾಕೆ ಡಿಕೆ ಶಿವಕುಮಾರ್ ಜೈಲಿಗೆ ಹೋಗಬೇಕು, ದೆಹಲಿಗೆ ಹೋಗಬೇಕು ಹಾಗೂ ಖರ್ಗೆ ಅವರ ನಿವಾಸಕ್ಕೆ ಭೇಟಿ ಕೊಡಬೇಕು? ಎಂದು ಪ್ರಶ್ನಿಸಿದರು. ಖರ್ಗೆ ಹೆಸರಿಗಷ್ಟೇ ಅಧ್ಯಕ್ಷರು. ಆದರೆ ಅವರು ಪರಾವಲಂಬಿ ಎಂದರು.

ರಾಜ್ಯ ಸರ್ಕಾರದ ರೈತರ ವಿರುದ್ಧವಾಗಿದೆ. ರಾಜ್ಯದಲ್ಲಿ ರೈತರ ಆತ್ಮಹತ್ಯೆ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ನವೆಂಬರ್ 27 ಹಾಗೂ 28 ರಂದು ರಾಜ್ಯಾದ್ಯಂತ ವಿಧಾನಸಭೆ ಕ್ಷೇತ್ರದಲ್ಲಿ ಹೋರಾಟ ನಡೆಸಲಾಗುತ್ತದೆ.

# ಸಿದ್ದರಾಮಯ್ಯನವರು ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ: ಡಿಕೆ ಶಿವಕುಮಾರ್ ಮಹತ್ವದ



**ಬೆಂಗಳೂರು:** ಸಿದ್ದರಾಮಯ್ಯ ಅವರು ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಸಿಎಂ ಚುರ್ಚಿ ಕಾಳಗದ ನಡುವೆ ಡಿಕೆ ಶಿವಕುಮಾರ್ ಹೇಳಿಕೆ ಮಹತ್ವ ಪಡೆದುಕೊಂಡಿದೆ.

ಶಿಡ್ಲಘಟ್ಟದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಡಿಕೆ ಶಿವಕುಮಾರ್ ಪ್ರತಿಕ್ರಿಯೆ ನೀಡಿದರು. ಹೈಕಮಾಂಡ್ ಹೇಳಿದ್ದನ್ನು ನಾನು, ಶಿವಕುಮಾರ್ ಸೇರಿದಂತೆ ಎಲ್ಲರೂ ಒಪ್ಪಬೇಕು ಎಂಬ ಸಿದ್ದರಾಮಯ್ಯ ಅವರ ಹೇಳಿಕೆ ಬಗ್ಗೆ ಕೇಳಿದಾಗ, ?ಅವರು ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ? ಎಂದು ತಿಳಿಸಿದರು.

ಕಾಂಗ್ರೆಸ್ ಶಾಸಕರನ್ನು ಕಾಂಗ್ರೆಸ್ ಪಕ್ಷದ ನಾಯಕರೇ ಖರೀದಿ ಮಾಡುವ ಪರಿಸ್ಥಿತಿ ಬಂದಿದೆ ಎಂಬ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, ?ಈ ಹಿಂದೆ ಬಿಜೆಪಿ ಸರ್ಕಾರ ರಚನೆಯಾದಾಗ ಅವರು ಎಷ್ಟು ಸಾವಿರ ಕೋಟಿ ಖರ್ಚು ಮಾಡಿದ್ದರು. ಮುಖ್ಯಮಂತ್ರಿ ಹುದ್ದೆಗೆ ಎಷ್ಟು ಹಣ ನೀಡಬೇಕಾಗಿತ್ತು, ಮಂತ್ರಿ ಹುದ್ದೆಗೆ ಎಷ್ಟು ಹಣ ನೀಡಲಾಗಿದೆ ಎಂದು ಅವರದೇ ಪಕ್ಷದ ನಾಯಕರು ಬಹಿರಂಗ ಹೇಳಿಕೆ ನೀಡಿದ್ದಾರೆ. ಅವರು ಎಷ್ಟು ಹಣ ಆಮೀಷ ಒಡ್ಡಿದ್ದರು ಎಂದು ವಿಧಾನಸಭೆಯಲ್ಲೂ ಪ್ರಸ್ತಾಪವಾಗಿದ್ದು, ದಾಖಲೆಗಳಲ್ಲಿ ಸೇರಿವೆ. ಈಗ ಬಿಜೆಪಿಯವರು ತಮ್ಮ ಪ್ರವೃತ್ತಿಯನ್ನು ನೆನೆಸಿಕೊಳ್ಳುತ್ತಿದ್ದಾರೆ? ಎಂದು ಹರಿಹಾಯ್ದರು.

ವಿರೋಧ ಪಕ್ಷಗಳು ಹಗಲುಗನಸು ಕಾಣುವುದನ್ನು ಬಿಡಬೇಕು. ಏಕೆಂದರೆ 2028 ಕ್ಕೆ ರಾಜ್ಯದಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬಂದು ಜನಸೇವೆ ಮುಂದುವರೆಸಲಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಚಿಕ್ಕಬಳ್ಳಾಪುರದ ಶಿಡ್ಲಘಟ್ಟದಲ್ಲಿ ಸೋಮವಾರ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಭಾಗವಹಿಸಿ ಮಾತನಾಡಿದರು. ?ರಾಜ್ಯದಲ್ಲಿ ಅಭಿವೃದ್ಧಿಯ ಸಂಗಮವಾಗಿದೆ. 2 ಸಾವಿರ ಕೋಟಿ ರೂ. ಮೊತ್ತದ ಅಭಿವೃದ್ಧಿ ಕೆಲಸವನ್ನು ವಿರೋಧ ಪಕ್ಷದ ಶಾಸಕರ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರ ನೀಡುತ್ತಿದೆ ಎಂದರೆ ನಮ್ಮ ಜನಪರ ಧೋರಣೆಯನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಈ ಕ್ಷೇತ್ರದ ಅಭಿವೃದ್ಧಿಗೆ ಇಡೀ ಸರ್ಕಾರವೇ ಬಂದಿದೆ ಎಂದರೆ ನಮಗೆ ಜನರ ಮೇಲಿನ ಪ್ರೀತಿಯೇ ಕಾರಣ? ಎಂದು ಹೇಳಿದರು.

ರಾಜ್ಯದ ಪ್ರತಿ ಮಹಿಳೆಯರು ಅವರ ಖಾತೆಗೆ ಹಣ ಬಂದಾಗಲೆಲ್ಲಾ ನಮ್ಮ ಸರ್ಕಾರವನ್ನು ನೆನಪಿಸಿಕೊಳ್ಳುತ್ತಾರೆ. ಯಾವುದೇ ಪುಣ್ಯಕ್ಷೇತ್ರಗಳಿಗೆ ಹೋದರೂ ನಮ್ಮ ಒಳಿತಿಗೆ ಪ್ರಾರ್ಥನೆ ಮಾಡುತ್ತಾರೆ. ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಅವರು ಬಂದಾಗ ಮಹಿಳೆಯರು ಗೌರವದಿಂದ ಅವರಿಗೆ ನಮಿಸಿದರು. ಮಹಿಳೆಯರ ಬದುಕಿನಲ್ಲಿ ನಾವು ತಂದಿರುವ ಬದಲಾವಣೆಯನ್ನು ಇಡೀ ದೇಶವೇ ನೋಡುತ್ತಿದೆ? ಎಂದರು.

ಸತ್ಯಕ್ಕೂ ಸುಳ್ಳಿಗೂ ಎಷ್ಟು ಅಂತರ ಎಂದು ಅಕ್ಬರ್ ಒಮ್ಮೆ ಬೀರ್ಬಲ್ ಅವರನ್ನು ಕೇಳುತ್ತಾನೆ. ಆಗ ಬೀರ್ಬಲ್ ನಾಲ್ಕು ಬೆರಳಿನ ಅಂತರ ಎಂದು ಹೇಳುತ್ತಾರೆ. ಕಣ್ಣಲ್ಲಿ ನೋಡುವುದು ಸತ್ಯ, ಕಿವಿಯಲ್ಲಿ ಕೇಳುವುದು ಸುಳ್ಳು. ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ 2 ಸಾವಿರ ಕೋಟಿ ಮೊತ್ತವನ್ನು ನೀಡಿದೆ. ಇದಕ್ಕೆ ನಿಮ್ಮೆಲ್ಲರ ಕಣ್ಣುಗಳೇ ಸಾಕ್ಷಿ? ಎಂದು ಹೇಳಿದರು.

ಸಚಿವರಾದ ಕೆ.ಎಚ್.ಮುನಿಯಪ್ಪ ಅವರು, ಸುಧಾಕರ್ ಅವರು ಹಾಗೂ ಕೃಷ್ಣಬೈರೇಗೌಡರು ನನ್ನ ಬೆನ್ನತ್ತಿದ್ದು 2027 ರ ಹೊತ್ತಿಗೆ ಎರಡು ಜಿಲ್ಲೆಗಳಿಗೆ ಎತ್ತಿನಹೊಳೆ ನೀರು ಹರಿಸಲೇಬೇಕು ಎಂದು ಪಟ್ಟು ಹಿಡಿದಿದ್ದಾರೆ. ಇದಕ್ಕೆ ಪೂರಕವಾಗಿ ನಾವು ಕೆಲಸ ಮಾಡುತ್ತಿದ್ದೇವೆ. ನಾವು ಪರ್ಯಾಯವಾಗಿ ಕಂದಾಯ ಭೂಮಿ ನೀಡಿದ್ದರೂ ಕೇಂದ್ರ ಪರಿಸರ ಇಲಾಖೆ ಅರಣ್ಯ ಭೂಮಿ ಬಳಕೆಗೆ ಅನುಮತಿ ನೀಡುತ್ತಿಲ್ಲ? ಎಂದರು.

ಕೆ. ಸಿ ವ್ಯಾಲಿ ಯೋಜನೆಯ ಮೊದಲ ಹಂತದಲ್ಲಿ 143 ಕೆರೆ ತುಂಬಿಸಲಾಗಿದೆ. 2ನೇ ಹಂತದಲ್ಲಿ 272 ಕೆರೆ ಭರ್ತಿ ಮಾಡುತ್ತಿದ್ದೇವೆ. ಈ ಯೋಜನೆಯನ್ನು ವಿಶ್ವಬ್ಯಾಂಕ್ ಕೂಡ ಹೊಗಳಿದೆ. ಎಚ್. ಎನ್. ವ್ಯಾಲಿ ಯೋಜನೆಯ ಮೊದಲ ಹಂತದಲ್ಲಿ 65 ಕೆರೆಗಳನ್ನು ತುಂಬಿಸುವ ಕೆಲಸ ಮಾಡಿದ್ದೇವೆ. ಬೆಂಗಳೂರಲ್ಲಿ ಕೆರೆಗಳ ಇಂಟರ್ ಲಿಂಕ್ ಮಾಡೋಕೆ ಅಂತ 1700 ಕೋಟಿ ರೂಪಾಯಿ ಮೊತ್ತದ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ನೆಲಮಂಗಲದಲ್ಲಿ ವೃಷಭಾವತಿಯಿಂದ 70 ಕೆರೆ ತುಂಬಿಸಲಾಗುತ್ತಿದೆ ಎಂದರು. ಕೆರೆಗಳನ್ನು ತುಂಬಿಸುವುದು ನಮ್ಮ ಕಾಂಗ್ರೆಸ್ ಸರ್ಕಾರದ ಆರನೇ ಗ್ಯಾರಂಟಿ. ವ್ಯವಸಾಯಕ್ಕೆ ಹಾಗೂ ಕುಡಿಯುವುದಕ್ಕೆ ನೀರನ್ನು ನೀಡುವುದೇ ನಮ್ಮ ಉದ್ದೇಶ. ಏಳನೇ ಗ್ಯಾರಂಟಿಯಾಗಿ 1,11,11,111 ಜನರಿಗೆ ಖಾತೆಗಳನ್ನು ನೀಡಿ ಭೂಮಿ ಗ್ಯಾರಂಟಿ ನೀಡಿದ್ದೇವೆ. ಹತ್ತು ಕಿಲೋ ಅಕ್ಕಿ ನೀಡುತ್ತಿದ್ದೆವು. ಆದರೆ ಐದು ಕಿಲೋ ಅಕ್ಕಿಯನ್ನು ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದ ಕಾರಣಕ್ಕೆ ಅಡುಗೆ ಎಣ್ಣೆ, ಬೇಳೆಕಾಳುಗಳ ಕಿಟ್ ನೀಡುವ ಆಲೋಚನೆ ಮಾಡಿದ್ದೇವೆ.

## ಆಕ್ರಮಣಗಳ ದಿನಗಳು ಮುಗಿದಿವೆ, ರಾಮ ಮಂದಿರದಲ್ಲಿ ಧ್ವಜಾರೋಹಣ ಮಾಡುವ ಬಂದಿದೆ: ಮೋಹನ್ ಭಾಗವತ್



ನಾಗ್ಪುರ: ಭಗವತ್ ಗೀತೆಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಆರ್.ಎಸ್ ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಕರೆ ನೀಡಿದ್ದಾರೆ.

ಲಖನೌನಲ್ಲಿ ನಡೆದ ಗೀತಾ ಪ್ರೇರಣಾ ಮಹೋತ್ಸವದಲ್ಲಿ ಮಾತನಾಡಿದ ಅವರು, ಈಗ ಆಕ್ರಮಣಗಳ ದಿನಗಳು ಮುಗಿದಿವೆ. ರಾಮ ಮಂದಿರದಲ್ಲಿ ಧ್ವಜಾರೋಹಣ ಮಾಡುವ ಸಮಯ ಬಂದಿದೆ ಎಂದು ಹೇಳಿದ ಅವರು, ಭಾರತ ಆಗಲೂ ಇತ್ತು, ಈಗಲೂ ಇದೆ ಎಂದು ಪ್ರತಿಪಾದಿಸಿದರು. ಗೀತೆಯ ಬೋಧನೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ, ನಮ್ಮ ಜೀವನ ಬದಲಾಗುತ್ತದೆ. ಭಾರತವು ಒಂದು ಕಾಲದಲ್ಲಿ ವಿಶ್ವಗುರು ಆಗಿತ್ತು. 1000 ವರ್ಷಗಳ ಕಾಲ ಆಕ್ರಮಣಗಳಿಂದಾಗಿ, ಗುಲಾಮಗಿರಿಯಿಂದಾಗಿ ಭಾರತ ಹಾಳಾಯಿತು. ಧಾರ್ಮಿಕ ಸ್ಥಳಗಳ ನಾಶ, ಬಲವಂತದ ಧಾರ್ಮಿಕ ಮತಾಂತರಗಳು ನಡೆದವು. ಆದರೂ, ಭಾರತ ಅಸ್ತಿತ್ವದಲ್ಲಿತ್ತು ಎಂದು ಅವರು ವಿವರಿಸಿದರು. ಗೀತೆಯ ಸಂದೇಶಗಳನ್ನು ಪ್ರಾಯೋಗಿಕವಾಗಿ ಅರ್ಥೈಸುವ ಪ್ರಯತ್ನಗಳನ್ನು ಅವರು ಶ್ಲಾಘಿಸಿದರು.

ಈ ಗ್ರಂಥವನ್ನು ಅಧ್ಯಯನ ಮಾಡಿ, ಅದರ ಪಾಠಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಅವರು ಜನರಿಗೆ ಕರೆ ನೀಡಿದರು. ಇದರಿಂದ ವೈಯಕ್ತಿಕ ಪರಿವರ್ತನೆ ಸಮಾಜದಲ್ಲಿ ದೊಡ್ಡ ಬದಲಾವಣೆಗೆ ನಾಂದಿ ಹಾಡುತ್ತದೆ ಎಂದು ಅವರು ಹೇಳಿದರು. ಗೀತೆ, ಕಳೆದುಹೋದ, ದಣಿದ ಮತ್ತು ದಿಕ್ಕುತಪ್ಪಿದ ಜಗತ್ತನ್ನು ಸ್ಥಿರಗೊಳಿಸಬಹುದು ಎಂದು ಭಾಗವತ್ ಅಭಿಪ್ರಾಯಪಟ್ಟರು. ಕೇವಲ ಶ್ಲೋಕಗಳನ್ನು ಪಠಿಸುವ ಬದಲು, ಗೀತೆಯ ಬೋಧನೆಗಳಂತೆ ಜೀವಿಸುವಂತೆ ಅವರು ಜನರಿಗೆ ಒತ್ತಾಯಿಸಿದರು.

ಕುರುಕ್ಷೇತ್ರ ಯುದ್ಧಭೂಮಿಯಲ್ಲಿ ಅರ್ಜುನನ ಗೊಂದಲಕ್ಕೂ ಇಂದಿನ ಜಾಗತಿಕ ಅನಿಶ್ಚಿತತೆಗಳಿಗೂ ಹೋಲಿಕೆ ನೀಡಿದ ಅವರು, ಭೌತಿಕ ಸುಖಗಳು ಒಳ ಶಾಂತಿ ಅಥವಾ ನೈತಿಕ ಸ್ಪಷ್ಟತೆಯನ್ನು ತಂದಿಲ್ಲ ಎಂದರು. "ನಾವು ಇಲ್ಲಿರುವುದು ಗೀತೆಯನ್ನು ಕೇವಲ ಪಠಿಸಲು ಅಲ್ಲ, ಜೀವಿಸಲು. ಅದರ 700 ಶ್ಲೋಕಗಳನ್ನು ಓದಬೇಕು, ಚಿಂತಿಸಬೇಕು ಮತ್ತು ನಮ್ಮ ದೈನಂದಿನ ಜೀವನದಲ್ಲಿ ಅನ್ವಯಿಸಬೇಕು" ಎಂದು ಭಾಗವತ್ ಹೇಳಿದರು. ಗೀತೆ ಧೈರ್ಯ ಮತ್ತು ಕರ್ತವ್ಯವನ್ನು ಬೋಧಿಸುತ್ತದೆ ಎಂದ ಅವರು, "ಕೃಷ್ಣ ಅರ್ಜುನನಿಗೆ ಹೇಳುತ್ತಾನೆ, 'ಪಲಾಯನ ಮಾಡಬೇಡ. ದೃಢವಾಗಿ ನಿಲ್ಲು, ಸಮಸ್ಯೆಯನ್ನು ಎದುರಿಸು ಮತ್ತು ಅಹಂಕಾರ ಅಥವಾ ಭಯವಿಲ್ಲದೆ ಕಾರ್ಯನಿರ್ವಹಿಸು'." ಎಂದು ಉಲ್ಲೇಖಿಸಿದರು.

# ವಿಸ್ತರಣಾವಾದಿ ಹಿಂದುತ್ವ ಮನಸ್ಥಿತಿಯನ್ನು ತೋರಿಸುತ್ತವೆ: ರಾಜನಾಥ್ ಸಿಂಗ್ ಸಿಂಧ್ ಹೇಳಿಕೆಗೆ ಪಾಕ್ ಪ್ರತಿಕ್ರಿಯೆ

**ಇಸ್ಲಮಾಬಾದ್ :** ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಸಿಂಧ್ ಪ್ರಾಂತ್ಯದ ಬಗ್ಗೆ ನೀಡಿದ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿದೆ.

ಈ ಹೇಳಿಕೆಗಳು "ಭ್ರಮಾತ್ಮಕ, ವಿಸ್ತರಣಾವಾದಿ ಮತ್ತು ಅಂತರರಾಷ್ಟ್ರೀಯ ಕಾನೂನು ಉಲ್ಲಂಘನೆ" ಎಂದು ಪಾಕಿಸ್ತಾನ ಹೇಳಿದೆ. ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸಿಂಧ್ ಪ್ರಾಂತ್ಯವು "ಭವಿಷ್ಯದಲ್ಲಿ ಭಾರತಕ್ಕೆ ಮರಳಬಹುದು" ಎಂದು ಹೇಳಿದ್ದರು. ಈ ಹೇಳಿಕೆಯು ಪಾಕಿಸ್ತಾನದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ನವದೆಹಲಿಯಲ್ಲಿ ನಡೆದ ಸಿಂಧಿಸಮುದಾಯದಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಾ, ಬಿಜೆಪಿ ಹಿರಿಯ ನಾಯಕ



ಎಲ್.ಕೆ. ಅಡ್ವಾಣಿ ಅವರ ಬರಹಗಳನ್ನು ಉಲ್ಲೇಖಿಸಿದರು. ಅಡ್ವಾಣಿ ಅವರ ತಲೆಮಾರಿನ ಅನೇಕ ಸಿಂಧಿ ಹಿಂದೂಗಳು 1947 ರ ವಿಭಜನೆಯ ಸಮಯದಲ್ಲಿ ಸಿಂಧ್ ಭಾರತದಿಂದ ಬೇರ್ಪಟ್ಟಿದ್ದನ್ನು ಒಪ್ಪಿಕೊಂಡಿರಲಿಲ್ಲ ಎಂದು ಅವರು ಹೇಳಿದರು. ಸಿಂಧ್ ಇಂದು ಪಾಕಿಸ್ತಾನದ ಭಾಗವಾಗಿದ್ದರೂ, ಗಡಿಗಳು ಬದಲಾಗಬಹುದು ಎಂದು ರಾಜನಾಥ್ ಸಿಂಗ್ ಪುನರುಚ್ಚರಿಸಿದರು.

"ನಾಳೆ ಸಿಂಧ್ ಭಾರತಕ್ಕೆ ಮರಳಬಹುದು" ಎಂದು ಅವರು ಹೇಳಿದರು. ಅಡ್ವಾಣಿ ಅವರನ್ನು ಉಲ್ಲೇಖಿಸಿ, ಸಿಂಧೂ ನದಿಯು ಹಿಂದೂಗಳು ಮತ್ತು ಸಿಂಧ್‌ನ ಅನೇಕ ಮುಸ್ಲಿಮರಿಗೆ ಆಳವಾದ ಆಧ್ಯಾತ್ಮಿಕ ಮಹತ್ವವನ್ನು ಹೊಂದಿದೆ ಎಂದು ಅವರು ಹೇಳಿದರು. ಇದನ್ನು ಮಕ್ಕಾದಲ್ಲಿನ ಆಬ್–ಎ–ಜಮ್‌ಜಮ್‌ಗೆ ಹೋಲಿಸಿದರು. "ಇಂದು, ಸಿಂಧ್ ಭೂಮಿ ಭಾರತದ ಭಾಗವಾಗಿಲ್ಲದಿರಬಹುದು, ಆದರೆ ನಾಗರಿಕತೆಯ ದೃಷ್ಟಿಯಿಂದ, ಸಿಂಧ್ ಯಾವಾಗಲೂ ಭಾರತದ ಭಾಗವಾಗಿರುತ್ತದೆ" ಎಂದು ಹೇಳಿದರು. "ಮತ್ತು ಭೂಮಿಯ ವಿಷಯಕ್ಕೆ ಬಂದ–ರೆ, ಗಡಿಗಳು ಬದಲಾಗಬಹುದು. ಯಾರಿಗೊತ್ತು, ನಾಳೆ ಸಿಂಧ್ ಭಾರತಕ್ಕೆ ಮರಳಬಹುದು" ಎಂದಿದ್ದಾರೆ.

## ನಾಳೆ ನಗರದಲ್ಲಿ ಸಂವಿಧಾನ ದಿನಾಚರಣೆ

**ಚಿಕ್ಕಮಗಳೂರು, ನ.24:** ನಗರದಲ್ಲಿ ನವೆಂಬರ್ 26 ರಂದು ಬೆಳಿಗ್ಗೆ 10 ಗಂಟೆಗೆ ಇಲ್ಲಿನ ಕುವೆಂಪು ಕಲಾಮಂದಿರದಲ್ಲಿ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಇದಕ್ಕೂ ಮೊದಲು ಬೆಳಿಗ್ಗೆ 9 ಗಂಟೆಗೆ ನಗರದ ತಾಲ್ಲೂಕು ಕಚೇರಿಯಿಂದ ಕುವೆಂಪು ಕಲಾಮಂದಿರದವರೆಗೆ ಮೆರವಣಿಗೆ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಸರ್ವರೂ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾ–ರೆ.

## ನಗರದಲ್ಲಿಂದು ಮಾಂಸ ಮಾರಾಟ ನಿಷೇಧ

ಚಿಕ್ಕಮಗಳೂರು, ನ.24: ನಗರಸಭೆ ವ್ಯಾಪ್ತಿಯಲ್ಲಿರುವ ಕೋಳಿ, ಕುರಿ, ಮೀನು ಮಾಂಸ ಮಾರಾಟಗಾರರು ಹಾಗೂ ಮಾಂಸಾಹಾರಿ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರು ನವೆಂಬರ್ 25 ರಂದು ಟಿ.ಎಲ್.ವಾಸ್‌ವಾನಿ ಜನ್ಮ ದಿನದ ಪ್ರಯುಕ್ತ ಕಡ್ಡಾಯವಾಗಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಕೋಳಿ, ಕುರಿ, ಮೀನು ಮಾಂಸ ಮಾರಾಟಗಾರರು ಮತ್ತು ಮಾಂಸಾಹಾರಿ ಹೋಟೆಲ್‌ಗಳನ್ನು ಈ ದಿನದಂದು ತೆರೆಯಬಾರದು ತಪ್ಪಿದಲ್ಲಿ ಅಂತಹ ಮಾಂಸ ಮಾರಾಟ ಮಾಡುವವರು ಮತ್ತು ಮಾಂಸಾಹಾರಿ ಹೋಟೆಲ್ ಮಾಲೀಕರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದು ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ

**ಚಿಕ್ಕಮಗಳೂರು, ನ.24:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಡಿಸೆಂಬರ್ 15 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ ಶಿಬಿರವನ್ನು ಏರ್ಪಡಿಸಿದೆ.

## ಸಂಕೀರ್ತನಾ ಯಾತ್ರೆ ಮೆರವಣಿಗೆ: ಅನುಮತಿಗೆ ಏಕ ಗವಾಕ್ಷಿ ತಂಡ ರಚನೆ

**ಚಿಕ್ಕಮಗಳೂರು, ನ.24:** ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ, ಐ.ಡಿ.ಪೀಠದಲ್ಲಿ ಭಜರಂಗ ದಳ, ವಿಶ್ವ ಹಿಂದೂ ಪರಿಷತ್ ಮತ್ತು ಇತರ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಡಿಸೆಂಬರ್ 2 ರಿಂದ 4ರವರೆಗೆ ದತ್ತ ಜಯಂತಿ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ಸಂಕೀರ್ತನಾ ಯಾತ್ರೆ ಮೆರವಣಿಗೆ ನಡೆಯಲಿದೆ. ಈ ಸಂಬಂಧದ ಮೈಕ್ ಲೈಸೆನ್ಸ್ ಅನುಮತಿ, ಬ್ಯಾನರ್ ಬಂಟಿಂಗ್ಸ್, ಫ್ಲೆಕ್ಸ್ ಅಳವಡಿಕೆ, ಧಾರ್ಮಿಕ ವೇದಿಕೆ ಕಾರ್ಯಕ್ರಮಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಬೈಕ್ ರ್‍ಯಾಲಿ ಮೆರವಣಿಗೆ ಸಾಗುವ ಮಾರ್ಗಗಳು, ವಿದ್ಯುತ್ ದೀಪಾಲಂಕಾರ ಇತ್ಯಾದಿಗಾಗಿ ಏರ್ಪಡಿಸುವ ಕಾರ್ಯಕ್ರಮಗಳಿಗೆ ಆಯೋಜಕರಿಗೆ ಪರವಾನಗಿ, ಅನುಮತಿಯನ್ನು ನೀಡುವ ಸಂಬಂಧ ಅನುಕೂಲವಾಗುವಂತೆ ನವೆಂಬರ್ 24 ರ ಬೆಳಿಗ್ಗೆ 10 ಗಂಟೆಯಿಂದ ನವೆಂಬರ್ 30ರ ಸಂಜೆ 5 ಗಂಟೆಯವರೆಗೆ ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡಂತೆ ಏಕ ಗವಾಕ್ಷಿ ತಂಡವನ್ನು ರಚಿಸಿ ಆದೇಶ ನೀಡಲಾಗಿದೆ.

# ಅಭಿವೃದ್ಧಿ ಕೆಲಸಗಳಿಗೆ ಸಾರ್ವಜನಿಕರ ಸಹಕಾರ ಅಗತ್ಯ: ಹೆಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನೇತೃತ್ವದ ಸರ್ಕಾರದ ವಿಶೇಷ ಅನುದಾನವನ್ನು ನಗರ–ಕ್ಕೆ ನೀಡಿದ್ದು, ಅದರ ಭಾಗವಾಗಿ ರಸ್ತೆ ಡಾಂಬರೀಕರಣಕ್ಕೆ ಗುದ್ದಲಿಪೂಜೆ ನೆರವೇರಿಸಲಾಗುತ್ತಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರು ಹಿರೇಮಗಳೂರು ಮುಖ್ಯರಸ್ತೆಗೆ 33.70 ಲಕ್ಷ ಕಲ್ಯಾಣ ನಗರ ರಸ್ತೆ ಕಾಮಗಾರಿಗೆ 36.00 ಲಕ್ಷ ಹೌಸಿಂಗ್ ಬೋರ್ಡ್‌ನ ರಸ್ತೆ ಕಾಮಗಾರಿಗೆ 25.00 ಲಕ್ಷ ವೆಚ್ಚದಲ್ಲಿ ವಿವಿಧ ರಸ್ತೆ ಡಾಂಬರೀಕರಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ, ಚಿಕ್ಕಮಗಳೂರು ನಗರದಲ್ಲಿ ಹಲವು ರಸ್ತೆಗಳು ಗುಂಡಿಬಿದ್ದಿದ್ದು, ನನ್ನ ಹುಟ್ಟೂರು ಆದ ಹಿರೇಮಗಳೂರಿನ ಮುಖ್ಯರಸ್ತೆ ಅತಿ ಹೆಚ್ಚು ಗುಂಡಿ ಬಿದ್ದು ಹಾಳಾಗಿದ್ದು, ಸರ್ಕಾರದ ವಿಶೇಷ ಅನುದಾನದಡಿ 33.70 ಲಕ್ಷ ರೂ ವೆಚ್ಚದಲ್ಲಿ ಡಾಂಬರೀಕರಣ ಮಾಡಲಾಗುತ್ತಿದೆ, ನಂತರ ಮುಂದಿನ ದಿನಗಳಲ್ಲಿ ಇನ್ನೂ ಅನೇಕ ಅಭಿವೃದ್ಧಿಗೆ ಹಂತ–ಹಂತವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದರು.



ನಾವು ಓದಿದ ಶಾಲೆಯ 1 ರಿಂದ 7ನೇ ತರಗತಿಗಳನ್ನು ಆಧುನಿಕ ರೀತಿಯಲ್ಲಿ ನಿರ್ಮಾಣ ಮಾಡಲಾಗಿದೆ ಹಾಗೂ ಕೋದಂಡರಾಮ ಸ್ವಾಮಿದೇವಾಲಯದ ಜೊತೆಗೆ ಹಲವಾರು ದೇವಾಲಯಗಳ ಪುನಶ್ಚೇತನ ಕಾರ್ಯ ಪ್ರಾರಂಭಗೊಂಡಿದ್ದು ಶೀಘ್ರದಲ್ಲಿ ಮುಕ್ತಾಯಗೊಳಿಸಲಾಗುವುದು, ಬಡವರ ಪರವಾದ 5 ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡವರ ಪರವಾದ ಕೆಲಸಗಳನ್ನು ಸಿದ್ಧರಾಮಯ್ಯ, ಡಿ.ಕೆ ಶಿವಕುಮಾರ್ ರವರ ನೇತೃತ್ವದ ಸರ್ಕಾರ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸೈಕಲ್ ತುಳಿ ಸಮಸ್ಯೆ ತಿಳಿ ಎಂದು ಸೈಕಲ್‌ನಲ್ಲಿ ನಗರ ಪ್ರದಕ್ಷಿಣೆ ಮಾಡುವ ಮೂಲಕ ನಗರದ ಸಮಸ್ಯೆಯನ್ನು ಪ್ರಾಮಾಣಿಕವಾಗಿ ತಿಳಿದುಕೊಳ್ಳುವ ಕೆಲಸವನ್ನು ಮಾಡಲಾಗುತ್ತಿದೆ, ನಗರದ ನಾಗರೀಕರಿಂದ ಉತ್ತಮ ಸ್ಪಂದನೆಯು ದೊರಕಿದೆ, ಸ್ಥಳದಲ್ಲಿಯೇ ಅವರ ಸಮಸ್ಯೆಗಳನ್ನು ಬಗೆಹರಿಸುವ ಪ್ರಯತ್ನವನ್ನು ಸಹ ಮಾಡಲಾಗುತ್ತಿದೆ ಎಂದರು.

ಹಿರೇಮಗಳೂರು ಶ್ರೀದೇವಿ ಯುವಕ ಸಂಘದಿಂದ ನಮ್ಮ ರಾಜಕೀಯ ಜೀವನ ಪ್ರಾರಂಭಗೊಂಡು ಶ್ರೀ ಕೋದಂಡರಾಮ ಸ್ವಾಮಿಯ ಸಂಚಾಲಕನಾಗಿ ಇಂದು 7 ಕೋಟಿ ಜನಸಂಖ್ಯೆಯಲ್ಲಿ 224 ಜನರು ಮಾತ್ರ ವಿಧಾನ ಸಭೆಯಲ್ಲಿ ಪ್ರಮಾಣ ವಚನ ಸ್ವೀಕರಿಸುವ ಅವಕಾಶವಿದ್ದು, ಅವರಲ್ಲಿ ನಾನು ಒಬ್ಬನಾಗಿ ಪ್ರಮಾಣ ವಚನ ಸ್ವೀಕರಿಸಿರುವುದು ಪ್ರಪಂಚ ಇರುವವರೆಗೂ ದಾಖಲೆಯಲ್ಲಿ ಉಳಿಯುವುದಾಗಿ ತಿಳಿಸಿದರು.

ನಗರಸಭೆ ಅಧ್ಯಕ್ಷೆ ಶೀಲಾದಿನೇಶ್ ಮಾತನಾಡಿ, ಶಾಸಕರು 27.5 ಕೋಟಿ ರೂಗಳ ಅನುದಾನ ತಂದು ನಗರದ ಎಲ್ಲಾ ರಸ್ತೆಗಳ ಡಾಂಬರೀಕರಣಕ್ಕೆ ಚಾಲನೆ ನೀಡಲಾಗುತ್ತಿದೆ, ಇದೇ ರೀತಿಯಲ್ಲಿ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡಲಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಉಪಾಧ್ಯಕ್ಷೆ ಲಲಿತಾ ಬಾಯಿ, ಸದಸ್ಯರಾದ ಎ.ಸಿ ಕುಮಾರೆಗೌಡ, ಕವಿತಾ ಶೇಖರ್, ಅರುಣ್‌ಕುಮಾರ್, ವರಸಿದ್ಧಿ ವೇಣುಗೋಪಾಲ್, ಇಂದಿರಾ ಶಂಕರ್, ಪರಮೇಶ್‌ರಾಜ್ ಅರಸ್, ಗುರುಮಲ್ಲಪ್ಪ, ಲಕ್ಷ್ಮಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಂಜೇಗೌಡ, ಗ್ರಾಮಸ್ಥರಾದ ಹೆಚ್.ಎಂ ನಾರಾಯಣ್, ನಗರಾಭಿವೃದ್ಧಿ ಪ್ರಾಧಿಕಾರದ ನಾಮನಿರ್ದೇಶಿತರಾದ ಸುರೇಶ್, ಕಾಂಗ್ರೆಸ್ ಮುಖಂಡರಾದ ರಾಮಚಂದ್ರ, ಜಗದೀಶ್, ಗಂಗಾಧರ್, ಶಿವಣ್ಣ,ರಮೇಶ್, ಶಿವಣ್ಣ, ಸುರೇಶ್, ವೆಂಕಟೇಶ್, ಯೋಗೀಶ್, ಲೋಕಣ್ಣ, ಚಂದ್ರಪ್ಪ, ಪ್ರಸಾದ್‌ಅಮೀನ್, ಪುಟ್ಟಸ್ವಾಮಿ, ರಾಮಣ್ಣ, ವಿವಿಧ ಇಲಾಖೆ ಅಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಸದಿದ್ದರೆ ಅನರ್ಥ : ಪೇಜಾವರ ಶ್ರೀ

**ಚಿಕ್ಕಮಗಳೂರು:** ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನೂ ಕಲಿಸದಿದ್ದರೆ ಏನಾಗುತ್ತದೆ ಎಂಬುವುದಕ್ಕೆ ಇತ್ತೀಚೆಗೆ ದೆಹಲಿಯಲ್ಲಿ ನಡೆದ ವಿಧ್ವಂಸಕ ಕೃತ್ಯವೇ ನಿದರ್ಶನ ಎಂದು ಪೇಜಾವರ ಮಠಾಧೀಶ ಶ್ರೀ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ ಹೇಳಿದರು.

ನಗರದ ಸಂಜೀವಿನಿ ವಿದ್ಯಾ ಸಂಸ್ಥೆಯಲ್ಲಿ ನಡೆದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಜೀವವನ್ನು ಉಳಿಸಬೇಕಾದ ವೈದ್ಯರೇ ದೆಹಲಿಯಲ್ಲಿ ವಿಧ್ವಂಸಕ ಕೃತ್ಯವನ್ನು ನಡೆಸುವ ಮೂಲಕ ಜನರ ಪ್ರಾಣ ತೆಗೆಯುವ ಕೆಲಸ ಮಾಡಿದ್ದಾರೆ, ಇದಕ್ಕೆ ಮೂಲ ಕಾರಣ ಆ ವೈದ್ಯರುಗಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸದಿರುವುದು ಎಂದ ಸ್ವಾಮೀಜಿ, ವಿದ್ಯಾವಂತರೇ ವಿಧ್ವಂಸಕ ಕೃತ್ಯಗಳನ್ನು ನಡೆಸಿದರೆ ಅವರು ಕಲಿತ ವಿದ್ಯೆಗೆ ಏನು ಬೆಲೆ ಬಂತು ಎಂದು ವಿಷಾಧಿಸಿದ ಸ್ವಾಮೀಜಿ, ಸಂಸ್ಕಾರವಿಲ್ಲದ ವಿದ್ಯೆ, ಸಂಸ್ಕಾರ ನೀಡದ ಶಿಕ್ಷಣದಿಂದ ಹೀಗಾಗುತ್ತದೆ ಎಂದು ತಿಳಿಸಿದರು.



ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸದಿರುವುದರಿಂದಾಗಿ ಅವರು ಸಮಾಜಘಾತಕರಾಗಿ ಬೆಳೆಯುತ್ತಿದ್ದಾರೆ, ವಿದ್ಯಾವಂತರೇ ವಿಧ್ವಂಸಕ ಕೃತ್ಯಗಳನ್ನು ನಡೆಸುತ್ತಿದ್ದಾರೆ, ಅಪರಾಧಗಳಲ್ಲಿ ಭಾಗಿಯಾಗುತ್ತಿದ್ದಾರೆ, ಇದರಿಂದಾಗಿ ದೇಶದಲ್ಲಿ ಅಪರಾಧಗಳ ದಿನೇ ದಿನೇ ಸಂಖ್ಯೆ ಹೆಚ್ಚುತ್ತಿದೆ ಎಂದು ವಿಷಾಧಿಸಿದರು.

ಜನತೆ ರಾಕ್ಷಸರಾಗಬಾರದು, ಸಾಕ್ಷರರಾಗಬೇಕು, ರಾಷ್ಟ್ರಭಕ್ತಿ, ದೇಶಪ್ರೇಮ, ಪ್ರೀತಿ, ಪ್ರೇಮ, ಸ್ನೇಹ, ವಿಶ್ವಾಸವನ್ನು ಮೈಗೂಡಿಸಿಕೊಳ್ಳಬೇಕು, ನಾವು ಕಲಿತವಿದ್ಯೆಸಮಾಜಕ್ಕೆ,ದೇಶಕ್ಕೆಉಪಯೋಗವಾಗಬೇಕು, ಕಂಟಕವಾಗಬಾರದು ಎಂದು ಕಿವಿಮಾತು ಹೇಳಿದರು.ಮಕ್ಕಳೇ ಈ ದೇಶದ ಭವಿಷ್ಯ, ಅವರೇ ಮುಂದೆ ರಾಷ್ಟ್ರವನ್ನು ಮುನ್ನಡೆಸಬೇಕಾದವರು, ಅವರಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸುವುದು ಅತ್ಯಗತ್ಯ, ಸಂಸ್ಕಾರವನ್ನು ಕಲಿಸಿದ ಶಿಕ್ಷಣ ವ್ಯರ್ಥ, ಎಂದು ಬಲವಾಗಿ ಪ್ರತಿಪಾದಿಸಿದ ಸ್ವಾಮೀಜಿ ಈ ನಿಟ್ಟಿನಲ್ಲಿ ವಿದ್ಯಾ ಸಂಸ್ಥೆಗಳು ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸಬೇಕು, ಅವರಲ್ಲಿ ರಾಷ್ಟ್ರಭಕ್ತಿ, ದೇಶಪ್ರೇಮವನ್ನು ಬೆಳೆಸಬೇಕು ಎಂದು ಹೇಳಿದರು. ಸಂಜೀವಿನಿ ವಿದ್ಯಾಸಂಸ್ಥೆ ಖಾಸಗೀ ಸಂಸ್ಥೆ. ಆದರೆ, ವ್ಯಾಪಾರಿ ಸಂಸ್ಥೆಯಲ್ಲ, 43 ವರ್ಷಗಳಿಂದ ವಿದ್ಯಾದಾನ ಮಾಡುತ್ತಿರುವ ಈ ಸಂಸ್ಥೆ, ಸುವರ್ಣ ಮಹೋತ್ಸವದ ಹೊತ್ತಿಗೆ ಇನ್ನಷ್ಟು ಬೆಳೆಯಲಿ ಎಂದು ಆಶೀರ್ವದಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮಾತನಾಡಿದರು.

# ಶಿಕ್ಷಣ, ಆರೋಗ್ಯಕ್ಷೇತ್ರಕ್ಕೆ ಲಿಂಗಾಯತ, ವೀರಶೈವ ಮಠಗಳ ಕೊಡುಗೆ ಅಪಾರ: ಈಶ್ವರ ಖಂಡ್ರೆ

**ಅಜ್ಜಂಪುರ:** ಧಾರ್ಮಿಕ, ಆಧ್ಯಾತ್ಮಿಕ ಕ್ಷೇತ್ರದ ಜೊತೆಗೆ ಆರೋಗ್ಯ ಮತ್ತು ಶಿಕ್ಷಣ ರಂಗಕ್ಕೆ ವೀರಶೈವ, ಲಿಂಗಾಯತ ಮಠಮಾನ್ಯಗಳು ನೀಡಿರುವ ಕೊಡುಗೆ ಅಪಾರವಾದದ್ದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಅಜ್ಜಂಪುರತಾಲೂಕಿನಬುಕ್ಕಾಂಬುಧಿಯಲ್ಲಿಂದು ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಆಗಮನದ ಶತಮಾನೋತ್ಸವ ಹಾಗೂ ನೂತನ ಮಹಾದ್ವಾರ ಮತ್ತು ಶ್ರೀ ರಂಬಾಪುರಿ ಜಗದ್ಗುರು ವೀರಗಂಗಾಧರ ನಿವಾಸದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅನ್ನ, ಆಶ್ರಯ, ಅಕ್ಷರ ಎಂಬ ತ್ರಿವಿಧ ದಾಸೋಹದ ಮೂಲಕ ಎಲ್ಲ ಜಾತಿ, ಜನಾಂಗದವರಿಗೂ ಬೆಳಕು ನೀಡಿದ ಏಕೈಕ ಸಮಾಜ ವೀರಶೈವ, ಲಿಂಗಾಯತ ಸಮಾಜ ಎಂದು ಹೇಳಿದರು.

ಲಿಂ.ಶ್ರೀ ಸಿದ್ಧಲಿಂಗ ಜಗದ್ಗುರುಗಳು ಜಗವನುದ್ಧರಿಸಲು ಅವತರಿಸಿದ ಯುಗ ಪುರುಷರು. ಶಿವಾದ್ವೈತ ಸಿದ್ಧಾಂತದ ಅರಿವು ಆದರ್ಶಗಳನ್ನು ಜನಮನಕ್ಕೆ ತಲುಪಿಸುವಲ್ಲಿ ಅವರ ಕಾರ್ಯ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತದ್ದು. ಅಂಗ ಅವಗುಣ ತೊಲಗಿಸಿ ಲಿಂಗ ಗುಣ ಬೆಳೆಸಲು ಶ್ರಮಿಸಿದ ಅವರು, ನೊಂದವರ ಬೆಂದವರ ಬಾಳಿಗೆ ತಮ್ಮ ಶಿವಯೋಗ ಶಕ್ತಿಯ ಮೂಲಕ ಪರಿಹಾರ ಕೊಟ್ಟವರು ಎಂದರು.

ಇಂದು ಯುವಜನರು ಅಜ್ಞಾನದ ಅಂಧಕಾರದಲ್ಲಿ ಮುಳುಗಿ, ದೈವ, ಆಚಾರ, ಶರಣ ಸಂಸ್ಕೃತಿ ಮರೆತು, ಪಾಶ್ಚಿಮಾತ್ಯರ ಅನುಕರಣೆ ಮಾಡುತ್ತಾ, ನಶೆ, ಮದ್ಯವ್ಯಸನ, ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ಇಂತಹ ಮಹಾನುಭಾವರ ಸ್ಮರಣೋತ್ಸವಗಳು ನಮ್ಮ ಹಿರಿಯರ ಅನುಕರಣೀಯ ಜೀವನದ ಬಗ್ಗೆ



ಪರಿಚಯ ಮಾಡಿಸುತ್ತವೆ. ಆ ಮೂಲಕ ಯುವಜನರಿಗೆ ಸರಿದಾರಿ ತೋರುತ್ತವೆ ಎಂದರು.

ಇಂದಿನ ಯುವಜನರು ಮಹಾಪುರುಷರ ಜೀವನ ಚರಿತ್ರೆ ಓದಿದರೆ ಅವರಲ್ಲಿ ಹೊಸ ಚೈತನ್ಯ ಮೂಡುತ್ತದೆ. ಸಮಾಜಕ್ಕೆ ತಾವೂ ಏನಾದರೂ ಮಾಡಬೇಕು ಎಂಬ ಛಲ ಬೆಳೆಯುತ್ತದೆ. ಆ ಮೂಲಕ ಅವರು ಸತ್ಪ್ರಜೆಗಳಾಗುತ್ತಾರೆ ಎಂದು ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಎಲ್ಲರನ್ನೂ ಅಪ್ಪಿಕೊಂಡು, ಒಪ್ಪಿಕೊಂಡು ಸಮಾಜದ ಪ್ರಗತಿಗೆ ಶ್ರಮಿಸುತ್ತಿರುವ ಸಮಾಜ ನಮ್ಮದು. ನಮ್ಮ ಹಿರಿಯರ ಹಿರಿಮೆಯನ್ನಷ್ಟೇ ಕೊಂಡಾಡದೆ. ಇಂದು ನಾವು ಸಾಧಕರಾಗಿ ನಮ್ಮನ್ನು ಜಗತ್ತು ಸ್ಮರಿಸುವಂತೆ ಬಾಳೋಣ. ವೀರಶೈವ ಲಿಂಗಾಯತ ಸಮಾಜದ ಹಿರಿಮೆಯನ್ನು ಜಗತ್ತಿಗೆ ತಿಳಿಸಬೇಕು ಎಂದರು.

ಪಶ್ಚಿಮಘಟ್ಟದ ಮಹತ್ವ:

ತಾವು ಕಾಡಿಲ್ಲದ ಕಲ್ಯಾಣ ಕರ್ನಾಟಕ ಭಾಗದ ಬೀದರ್‌ನಿಂದ ಬಂದಿದ್ದೇನೆ ಎಂದ ಅವರು, ಹಚ್ಚ ಹಸಿರಿನ ವನಸಿರಿಯ ನಡುವೆ ಜೀವಿಸುತ್ತಿರುವ ನೀವೆಲ್ಲರೂ ಧನ್ಯರು ಎಂದರು. ಪಶ್ಚಿಮ ಘಟ್ಟಗಳು ಜೀವವೈವಿಧ್ಯತೆಯ ತಾಣವಾಗಿವೆ. ಹಲವು ನದಿಗಳ ಉಗಮಸ್ಥಳವಾಗಿದೆ. ಮಳೆಯ ಮಾರುತ ತಡೆದು ದೇಶಾದ್ಯಂತ ಮಳೆ ಸುರಿಯಲು ಸಹಕರಿಸುತ್ತವೆ. ಶೋಲಾ ಅರಣ್ಯಗಳು ತಮ್ಮಲ್ಲಿ ನೀರು ಹಿಡಿದಿಟ್ಟುಕೊಂಡು ವರ್ಷವಿಡೀ ನದಿಗಳು ಹರಿಯುವಂತೆ ಮಾಡುತ್ತವೆ. ಇಂತಹ ಪಶ್ಚಿಮಘಟ್ಟದ ಮಡಿಲಲ್ಲಿ ವಾಸಿಸುವ ನೀವು ಅದರ ಸಂರಕ್ಷಣೆಯನ್ನೂ ಮಾಡಬೇಕು ಎಂದರು.

ಸಮಾರಂಭದಲ್ಲಿ ಶಾಸಕ ಶ್ರೀನಿವಾಸ್ ಮತ್ತಿತರರು ಪಾಲ್ಗೊಂಡಿದ್ದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**